RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 85 ಪುಟ: 06 ಮಂಗಳವಾರ 25-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)    Executive Editor: L P Babu    Honourary Editor: Venkatesh



ಹೊಸ ದಾಖಲೆ ಬರೆದ 'ಟಾಕ್ಸಿಕ್' ಸಿನಿಮಾ

66ನೇ ವಯಸ್ಸಲ್ಲಿ 4ನೇ ಮದುವೆ: ಲಕ್ಕಿ ಅಲಿ

ಕಿಸ್ಸಿಂಗ್ ಸೀನ್‌ಗಳಲ್ಲಿ ನಟಿಸೋಕೆ ಇಷ್ಟ ಪುಟ 6

# ಅಸಮರ್ಥರಿಗೆ ಕೋಕ್

## ಪಕ್ಷ ಸಂಘಟಿಸುವವರಿಗೆ ಮಾತ್ರ ಪದಾಧಿಕಾರಿ ಹುದ್ದೆ; ಡಿಸಿಎಂ ಖಡಕ್ ಸಂದೇಶ

**ಬೆಂಗಳೂರು:** "ತಾಲ್ಲೂಕು ಮಟ್ಟದಲ್ಲಿ ಹಗಲಿರುಳು ಶ್ರಮಿಸುವವರಿಗೆ ಮಾತ್ರ ಪಕ್ಷದ ಜವಾಬ್ದಾರಿ ವಹಿಸಲಾಗುವುದು. ನಾಯಕರ ಹಿಂದೆ ಗಿರಕಿ ಹೊಡೆಯುವವರನ್ನು ನೇಮಿಸಿ ಪ್ರಯೋಜನವಿಲ್ಲ" ಎಂದು ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ದೆಹಲಿಗೆ ತೆರಳುವ ಮುನ್ನ ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಮಂಗಳವಾರ ಪ್ರತಿಕ್ರಿಯೆ ನೀಡಿದ ಅವರು, ಪದಾಧಿಕಾರಿಗಳ ಪಟ್ಟಿಯಲ್ಲಿ ಕೆಲವು ಮಂತ್ರಿಗಳ ಆಪ್ತರನ್ನು ಕೈಬಿಡಲಾಗಿದೆ ಎಂಬ ಚರ್ಚೆ ಇದೆ ಎಂದು ಕೇಳಿದಾಗ, "ಯಾವ ಚರ್ಚೆ? ನಿಮ್ಮ ಬಳಿ ಮಾತಾಡಿರಬಹುದು. ನನ್ನ ಬಳಿ ಯಾರೂ ಮಾತನಾಡಿಲ್ಲ. ನಮಗೆ ಕೆಲಸ ಮಾಡುವವರು ಬೇಕು. ಅವರಿಗೆ ಜವಾಬ್ದಾರಿ ಕೊಟ್ಟರೆ ತಕ್ಕ ಫಲಿತಾಂಶ ಬರಬೇಕು. ನಮ್ಮ ಸುತ್ತ ಗಿರಿಗಿಟ್ಲೆಯಂತೆ ಸುತ್ತುತ್ತಿದ್ದರೆ ಆಗುವುದಿಲ್ಲ. ತಾಲೂಕಿನಲ್ಲಿ ಕೂತು, ಅಲ್ಲಿರುವ ಸಮಸ್ಯೆ ಬಗೆಹರಿಸಬೇಕು. ಫಲಿತಾಂಶ ಬರುವ ನಾಯಕತ್ವಕ್ಕೆ ಮಾತ್ರ ಆದ್ಯತೆ ನೀಡಲಾಗುವುದು"



ಎಂದು ತಿಳಿಸಿದರು.

ಪದಾಧಿಕಾರಿಗಳ ಪಟ್ಟಿಯನ್ನು ಹೈಕಮಾಂಡ್ ನಾಯಕರಿಗೆ ನೀಡುತ್ತೀರಾ ಎಂದು ಕೇಳಿದಾಗ, "ಸದ್ಯಕ್ಕೆ ಇಲ್ಲ. ಪಟ್ಟಿ ಸಿದ್ಧವಾಗಿದ್ದು, ಯಾರಿಗೆ ಆಸಕ್ತಿ ಇಲ್ಲ ಅವರ ಜಾಗಕ್ಕೆ ಬೇರೆಯವರನ್ನು ನೇಮಿಸಲಾಗುವುದು. ಪಕ್ಷ ಸಂಘಟನೆ ವಿಚಾರದಲ್ಲಿ ನಮಗೆ ದಿನವಿಡೀ ಸ್ಥಳೀಯ ಮಟ್ಟದಲ್ಲಿ ಕೆಲಸ ಮಾಡುವವರು ಬೇಕು. ಬೇರೆಯವರ ಒತ್ತಡದ ಮೇರೆಗೆ ನೇಮಕ ಮಾಡಿಕೊಂಡು ಸಮಯ ವ್ಯರ್ಥ ಮಾಡುವುದರಲ್ಲಿ ಪ್ರಯೋಜನವಿಲ್ಲ. ಕೆಲಸ ಮಾಡುವವರಿಗೆ ಅವಕಾಶ ನೀಡಿ ಎಂದು ಎಐಸಿಸಿ ಆದೇಶ ನೀಡಿದೆ. ಈ ವಿಚಾರವಾಗಿ ನಾವು ವರದಿ ತರಿಸಿಕೊಂಡಿದ್ದು, ಸರಿಯಾಗಿ ಕೆಲಸ ಮಾಡುವವರಿಗೆ ಜವಾಬ್ದಾರಿ ನೀಡಲಾಗುವುದು. ಮೀಸಲಾತಿ ಪುಟ 2

ಹಿನ್ನೆಲೆಯಲ್ಲಿ ಮಹಿಳೆಯರಿಗೆ ಆದ್ಯತೆ ನೀಡಿ ಅವರನ್ನು ತಯಾರಿ ಮಾಡಲಾಗುತ್ತಿದೆ. ಈ ವಿಚಾರವಾಗಿ ಮಂತ್ರಿಗಳ ಅಭಿಪ್ರಾಯ ಪಡೆಯುತ್ತಿದ್ದು, ಈ ವಾರವೇ ಈ ಪಟ್ಟಿ ಅಂತಿಮಗೊಳಿಸಲಾಗುವುದು" ಎಂದು ಹೇಳಿದರು.

ದೆಹಲಿ ಭೇಟಿ ಬಗ್ಗೆ ಕೇಳಿದಾಗ, "ರಾಜಸ್ಥಾನದಲ್ಲಿ ನಡೆದ ಜಲಶಕ್ತಿ ಸಮ್ಮೇಳನದಲ್ಲಿ ನಾನು ರಾಜ್ಯದ ನೀರಾವರಿ ಯೋಜನೆಗಳ ಪ್ರಸ್ತಾಪ ಮಾಡಿದ್ದೆ. ನೀರಾವರಿ ವಿಚಾರದಲ್ಲಿ ನಮ್ಮ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯವನ್ನು ತಿಳಿಸಿದ್ದೆ. ಕೆಲವು ಯೋಜನೆಗೆ ಘೋಷಣೆ ಮಾಡಿದ ಹಣ ಬಿಡುಗಡೆ ಮಾಡಿಲ್ಲ, ಮತ್ತೆ ಕೆಲವು ಯೋಜನೆಗಳಿಗೆ ಅನುಮತಿ ನೀಡಿಲ್ಲ. ಈ ವಿಚಾರಗಳನ್ನು ಪ್ರಸ್ತಾಪಿಸಿದಾಗ ಸಚಿವರು ಪುಟ 2

## ಕಂಪಿಸಿದ ಭೂಮಿ; 5.1ರಷ್ಟು ತೀವ್ರತೆ ದಾಖಲು



**ಭುವನೇಶ್ವರ್/ಕೋಲ್ಕತ್ತಾ:** ಇತ್ತೀಚೆಗಷ್ಟೇ ದೆಹಲಿಯಲ್ಲಿ ಭೂ ಕಂಪನದ ಅನುಭವದ ಬೆನ್ನಲ್ಲೇ ಇದೀಗ ಒಡಿಶಾದ ಪುರಿಯ ಬಳಿಯಲ್ಲಿ ಸಣ್ಣದಾಗಿ ಭೂಮಿ ಕಂಪಿಸಿದ್ದು, ರಿಕ್ಟರ್ ಮಾಪಕದಲ್ಲಿ 5.1ರಷ್ಟು ತೀವ್ರತೆ ದಾಖಲಾಗಿದೆ.

ಪುರಿ ಸಮೀಪದ ಬಂಗಾಳ ಕೊಲ್ಲಿ ಸಾಗರದ 91 ಕಿ.ಮೀ ಆಳದಲ್ಲಿ ಇಂದು ಬೆಳಗ್ಗೆ ಸುಮಾರು 6.10 ನಿಮಿಷಕ್ಕೆ ಭೂಮಿ ಕಂಪಿಸಿದೆ. ಇಲ್ಲಿ ಭೂಕಂಪನವೂ ಅಕ್ಷಾಂಶ 19.52 ಎನ್ ಮತ್ತು ರೇಖಾಂಶ 88.55 ಇ ನಡುವೆ ದಾಖಲಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಈ ಭೂ ಕಂಪನವೂ ಜನರಲ್ಲಿ ಕೆಲಕಾಲ ಆತಂಕವನ್ನುಂಟು ಮಾಡಿತ್ತು. ಆದರೆ ಯಾವುದೇ ಆಸ್ತಿ ಪಾಸ್ತಿ ಹಾನಿ ಅಥವಾ ಸಾವು ನೋವಿನ ವರದಿಯಾಗಿಲ್ಲ. ಈ ಭೂಕಂಪವೂ ಬಂಗಾಳ ಕೊಲ್ಲಿಯಲ್ಲಿ ಆಗಿರುವುದರಿಂದ ಪುಟ 2



ಜಲಸಂಪನ್ಮೂಲ ಸಚಿವರೂ ಆಗಿರುವ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಮತ್ತು ರಾಜ್ಯ ಖಾತೆ ಸಚಿವ ವಿ ಸೋಮಣ್ಣ ಅವರನ್ನು ದೆಹಲಿಯಲ್ಲಿ ಮಂಗಳವಾರ ಭೇಟಿ ಮಾಡಿ ನೆನೆಗುದಿಗೆ ಬಿದ್ದಿರುವ ರಾಜ್ಯದ ಯೋಜನೆಗಳಿಗೆ ಅನುಮತಿ ಹಾಗೂ ಅನುದಾನ ನೀಡಲು ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಿದರು. ರಾಜ್ಯದ ಸಣ್ಣ ನೀರಾವರಿ ಸಚಿವ ಬೋಸರಾಜ್, ದೆಹಲಿಯಲ್ಲಿ ರಾಜ್ಯ ಸರಕಾರದ ವಿಶೇಷ ಪ್ರತಿನಿಧಿ ಟಿ ಬಿ ಜಯಚಂದ್ರ ಮತ್ತಿತರರು ಉಪಸ್ಥಿತರಿದ್ದರು.

## ಮುಡಾ ಪ್ರಕರಣ: ವಾದಿಸಲು ಸ್ನೇಹಮಯಿಗೆ ಅನುಮತಿ..!

**ಬೆಂಗಳೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಿಂದ ಪರಿಹಾರ ನಿವೇಶನಗಳ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪದ ಮೇಲೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ ಬಿ.ಎಂ.ಪಾರ್ವತಿ, ಅವರ ಸೋದರ ಮಾವ ಮತ್ತು ಇನ್ನೊಬ್ಬ ವ್ಯಕ್ತಿಯ ವಿರುದ್ಧ ದಾಖಲಾದ ಪ್ರಕರಣವನ್ನು ವೈಯಕ್ತಿಕವಾಗಿ ವಾದಿಸಲು (ವಕೀಲರ ಸಹಾಯವಿಲ್ಲದೆ ) ದೂರುದಾರ ಸ್ನೇಹಮಯಿ ಕೃಷ್ಣ ಅವರಿಗೆ ವಿಶೇಷ ನ್ಯಾಯಾಲಯ ಅನುಮತಿ ನೀಡಿದೆ. ತನಿಖೆಯ ಬಗ್ಗೆ ಅಗತ್ಯ ದಾಖಲೆಗಳನ್ನು ಮತ್ತು ಅಂತಿಮ ವರದಿಯನ್ನು ಮಾರ್ಚ್ 1, 2025 ರೊಳಗೆ ಕೃಷ್ಣ ಅವರಿಗೆ ಸಲ್ಲಿಸುವಂತೆ ನ್ಯಾಯಾಲಯ ಸೋಮವಾರ ಲೋಕಾಯುಕ್ತ ಪೊಲೀಸರಿಗೆ ಪುಟ 2



## ಅರಣ್ಯ ಇಲಾಖೆಯ ಮುನ್ನೆಚ್ಚರಿಕೆ ಪಾಲಿಸಲು ಸಚಿವರ ಮನವಿ

**ಬೀದರ್:** ರಾಜ್ಯದಲ್ಲಿ ಕಾಡಾನೆ ದಾಳಿಗೆ ಸೋಮವಾರ ಮತ್ತು ಮಂಗಳವಾರ ಇಬ್ಬರು ಸಾವಿಗೀಡಾಗಿರುವ ಬಗ್ಗೆ ತೀವ್ರ ಆಘಾತ ಮತ್ತು ಶೋಕ ವ್ಯಕ್ತಪಡಿಸಿರುವ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ, ಸಾರ್ವಜನಿಕರು ಇಲಾಖೆಯ ಮುನ್ನೆಚ್ಚರಿಕೆಗೆ ಸ್ಪಂದಿಸಬೇಕು ಎಂದು ಮನವಿ ಮಾಡಿದ್ದಾರೆ.



ಸೋಮವಾರ ಹಾಸನ ಜಿಲ್ಲೆ ಬೇಲೂರು ತಾಲೂಕಿನಲ್ಲಿ ಒಬ್ಬ ಯುವಕ ಮತ್ತು ಮಂಗಳವಾರ ಕೋಲಾರ ಜಿಲ್ಲೆ ಕಾನಸಮುದ್ರದಲ್ಲಿ ಮಹಿಳೆಯೊಬ್ಬರು ಮೃತಪಟ್ಟಿದ್ದು ತೀವ್ರ ನೋವು ತಂದಿದೆ. ಮೃತರ ಕುಟುಂಬದೊಂದಿಗೆ ಸರ್ಕಾರ ಇದೆ.

ಅವರ ನೋವಿನಲ್ಲಿ ನಾವೂ ಭಾಗಿಯಾಗಿದ್ದೇವೆ ಎಂದು ತಿಳಿಸಿದ್ದಾರೆ.

ಮೃತರ ಹತ್ತಿರದ ಸಂಬಂಧಿಕರಿಗೆ ಕೂಡಲೇ ಪರಿಹಾರದ ಮೊತ್ತ ನೀಡಲು ಸೂಚಿಸಲಾಗಿದೆ. ಈ ಎಲ್ಲ ದುರ್ಘಟನೆಗಳು ಬೆಳಗಿನ ಹೊತ್ತು ಮತ್ತು ಸಂಜೆಯ ವೇಳೆ ಸಂಭವಿಸುತ್ತಿವೆ. ಕಾಡಿನಂಚಿನ ಜನರು ಅರಣ್ಯ ಇಲಾಖೆಯು ಆನೆಗಳ ಚಲನವಲನದ ಬಗ್ಗೆ ನೀಡುವ ಸಂದೇಶಕ್ಕೆ ಸ್ಪಂದಿಸಿ, ಜಾಗರೂಕರಾಗಿರಬೇಕು ಎಂದು ಅರಣ್ಯ ಸಚಿವರು ತಿಳಿಸಿದ್ದಾರೆ.

**ಸರ್ಕಾರದಿಂದ ಸರ್ವ ಪ್ರಯತ್ನ:** ಆನೆ–ಮಾನವ ಸಂಘರ್ಷ, ವನ್ಯಜೀವಿ ಮಾನವ ಸಂಘರ್ಷ ಇಂದು ಪುಟ 2

## ಅಪಘಾತ: 2 ಸಾವು

**ಪೋರ್ ಬಂದರ್:** ಕುಂಭಮೇಳಕ್ಕೆ ತೆರಳುವ ವೇಳೆ ಅಪಘಾತದಕ್ಕೀಡಾಗಿ ಸಾವನ್ನಪ್ಪುತ್ತಿರುವವರ ಸಂಖ್ಯೆ ಹೆಚ್ಚುತ್ತಿದ್ದು ಇದೀಗ ಮತ್ತಿಬ್ಬರು ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. ಗುಜರಾತ್‌ನ ಪೋರ್ ಬಂದರ್‌ನಲ್ಲಿ ಭೀಕರ ಅಪಘಾತ ಸಂಭವಿಸಿದ್ದು ರಾಜ್ಯದ ವಿಜಯಪುರ ಜಿಲ್ಲೆಯ ಇಬ್ಬರು ವ್ಯಕ್ತಿಗಳು ಸಾವನ್ನಪ್ಪಿದ್ದಾರೆ. ವಿಶ್ವನಾಥ ಅವಜಿ (55) ಹಾಗೂ ಮಲ್ಲಿಕಾರ್ಜುನ ಸದ್ದಲಗೆ (40) ಪುಟ 2

## ಪೋಕ್ಸೋ ಕೇಸ್ ವಾಪಸ್ ಪಡೆದಿದ್ದೇವೆ

**ಬೆಳಗಾವಿ:** ಕೆಎಸ್‌ಆರ್‌ಟಿಸಿ ಬಸ್ ನಿರ್ವಾಹಕ ಮಹಾದೇವಪ್ಪ ಮೇಲೆ ನೀಡಿರುವ ಪೋಕ್ಸೋ ದೂರನ್ನು ವಾಪಸ್ ಹಿಂಪಡೆದಿದ್ದೇವೆ ಎಂದು ಸಂತ್ರಸ್ತ ಬಾಲಕಿಯ ತಾಯಿ ಹೇಳಿದ್ದಾರೆ. ಈ ಕುರಿತು ವಿಡಿಯೋ ಹೇಳಿಕೆ ಬಿಡುಗಡೆ ಮಾಡಿರುವ ಸಂತ್ರಸ್ತೆಯ ತಾಯಿ, ನಾವು ಕೂಡ ಕನ್ನಡಿಗರೇ. ಈ ವಿಚಾರದಲ್ಲಿ ಕನ್ನಡ–ಮರಾಠಿಗರ ನಡುವೆ ಜಗಳ ಆಗುತ್ತಿದೆ. ನಿರ್ವಾಹಕ ಅವರ ಮೇಲೆ ನೀಡಿದ್ದ ದೂರನ್ನು ಹಿಂಪಡೆದಿದ್ದೇವೆ ಎಂದರು. ಪುಟ 2

## ರೇಣುಕಾಸ್ವಾಮಿ ಪ್ರಕರಣ: ಏ.8ಕ್ಕೆ ವಿಚಾರಣೆ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ 57ನೇ ಸಿಸಿಹೆಚ್ ನ್ಯಾಯಾಲಯ ವಿಚಾರಣೆಯನ್ನ ಏಪ್ರಿಲ್ 8ಕ್ಕೆ ಮುಂದೂಡಿಕೆ ಮಾಡಿದೆ. ಪ್ರಕರಣ ಸಂಬಂಧ ಆರೋಪಿಗಳಾದ ನಟ ದರ್ಶನ್ ಹಾಗೂ ಪವಿತ್ರಾಗೌಡ ಮಂಗಳವಾರ ಬೆಂಗಳೂರಿನ ಪುಟ2 57ನೇ ಸಿಸಿಹೆಚ್ ನ್ಯಾಯಾಲಯಕ್ಕೆ ಹಾಜರಾಗಿದ್ದರು. ಈ ವೇಳೆ ಪ್ರಕರಣದ ವಿಚಾರಣೆ ಪುಟ 2

## ಕನ್ನಡಿಗನೇ ಸಾರ್ವಭೌಮ, ಕನ್ನಡ ಭಾಷೆಯೇ ಸಾರ್ವಭೌಮ

**ಬೆಳಗಾವಿ:** ಎಂಇಎಸ್ ನವರ ವರ್ತನೆಯನ್ನು ನಾನು ಗಮನಿಸಿದ್ದೇನೆ. ಅದಕ್ಕಾಗಿ ಬೆಳಗಾವಿ ನೆಲದಲ್ಲೇ ಅವರಿಗೆ ಉತ್ತರ ಕೊಡಬೇಕು ಅಂತಾ ಬೆಂಗಳೂರಿನಿಂದ ಇಲ್ಲಿಗೆ ಬಂದಿದ್ದೇನೆ. ಇವರ ದಬ್ಬಾಳಿಕೆ, ದೌರ್ಜನ್ಯ ಅಂತ್ಯ ಆಗಬೇಕು. ಕರ್ನಾಟಕ ಬಸ್‌ಗಳನ್ನು ಒಡೆದು ಹಾಕಿ, ಬಸ್‌ಗಳಿಗೆ ಮಸಿ ಬಳಿಯುವುದು, ಕಂಡಕ್ಟರ್ ಮೇಲೆ ಹಲ್ಲೆ ಮಾಡುವ ಪ್ರವೃತ್ತಿಯನ್ನು ಕಳೆದ 27 ವರ್ಷಗಳಿಂದ ನೋಡಿಕೊಂಡು ಬಂದಿದ್ದೇನೆ. ಕಿತ್ತೂರು ರಾಣಿ ಚನ್ನಮ್ಮ, ಸಂಗೊಳ್ಳಿ ರಾಯಣ್ಣನ ಪುಣ್ಯಭೂಮಿಯಾದ ಬೆಳಗಾವಿಯಲ್ಲಿ ಕನ್ನಡಿಗನೇ ಸಾರ್ವಭೌಮ, ಕನ್ನಡ ಭಾಷೆಯೇ ಸಾರ್ವಭೌಮ. ಈ ನೆಲದ ಮಾಲೀಕರು ಕನ್ನಡಿಗರು" ಎಂದು ಎಂದು ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಬೇಸರ ವ್ಯಕ್ತಪಡಿಸಿದರು.




ಹಲ್ಲೆಗೊಳಗಾಗಿ ಬೆಳಗಾವಿ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕಂಡಕ್ಟರ್ ಮಹಾದೇವಪ್ಪ ಹುಕ್ಕೇರಿ ಅವರ ಆರೋಗ್ಯ ವಿಚಾರಿಸಿದ ಬಳಿಕ ಮಾಧ್ಯಮಗಳ ಜೊತೆಗೆ ಮಾತನಾಡಿದ ನಾರಾಯಣಗೌಡ, "ನಾನು ಕಂಡಕ್ಟರ್ ಅವರನ್ನು ಭೇಟಿ ಮಾಡಿ ಬಂದಿದ್ದೇನೆ. ಅವರಿಗೆ ಇನ್ನೂ ತುಂಬಾ ಎದೆ ನೋವಿದೆ. ನೋವು ಕಡಿಮೆ ಆಗಿಲ್ಲ ಅಂತ ಕಣ್ಣೀರು ಹಾಕಿದರು. ಇಲ್ಲಿನ ಜಿಲ್ಲಾಡಳಿತ ಈ ಕೃತ್ಯ ಎಸಗಿದವರ ವಿರುದ್ಧ ಮುಲಾಜಿಲ್ಲದೇ ಗೂಂಡಾ ಕಾಯ್ದೆ ಹಾಕಬೇಕು. ಆರು ತಿಂಗಳು ಇಲ್ಲವೇ ಒಂದು ವರ್ಷ ಪುಟ 2

### ಎಂಇಎಸ್ ಪುಂಡರನ್ನು ಬಿಡೋದಿಲ್ಲ

**ಬೆಳಗಾವಿ:** ಜಿಲ್ಲೆಯ ಬಾಳೆಕುಂದ್ರಿ ಬಸ್ ನಿಲ್ದಾಣದಲ್ಲಿ ಬಸ್ ಕಂಡಕ್ಟರ್ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ಟಿ ಬಣ ಮಂಗಳವಾರ ಪ್ರತಿಭಟನೆ ನಡೆಸಿದೆ. ಅಧ್ಯಕ್ಷ ಪ್ರವೀಣ್ ಶೆಟ್ಟಿ ಮಾತನಾಡಿ, ಎಂಇಎಸ್ ಮತ್ತು ಶಿವಸೇನೆಯ ಗೂಂಡಾಗಳು ಹಲ್ಲೆ ನಡೆಸಿ ಪೋಕ್ಸೋ ಕೇಸ್ ಹಾಕಿದ್ದು ಕೇವಲ ಕಂಡಕ್ಟರ್ ಮೇಲೆ ಅಲ್ಲ, ಇಡೀ ಕರ್ನಾಟಕದ ಮೇಲೆ, ನಾವು ಕರ್ನಾಟಕದಲ್ಲಿದ್ದೀವೋ ಪುಟ 2

## ಮದ್ದುಗುಂಡು ಉತ್ಪಾದನೆ: ಭಾರತ ಶೇ.88ರಷ್ಟು ಸ್ವಾವಲಂಬನೆ

**ನವದೆಹಲಿ:** ಭಾರತದ ರಕ್ಷಣಾ ರಫ್ತು 23,000 ಕೋಟಿ ರೂ.ಗೆ ತಲುಪಿದೆ ಮತ್ತು ಮದ್ದುಗುಂಡು ಉತ್ಪಾದನೆಯಲ್ಲಿ ದೇಶವು ಶೇಕಡಾ 88 ರಷ್ಟು ಸ್ವಾವಲಂಬನೆ ಸಾಧಿಸಿದೆ ಎಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.



ರಕ್ಷಣಾ ಕ್ಷೇತ್ರದಲ್ಲಿ ಮತ್ತಷ್ಟು ದಾಪುಗಾಲು ಹಾಕುತ್ತಿರುವ ಬಗ್ಗೆ ವಿವರಿಸಿದ ಅವರು, 2029ರ ವೇಳೆಗೆ ಭಾರತವು 50,000 ಕೋಟಿ ರೂ.ಗಳ ಗುರಿಯನ್ನು ತಲುಪುವ ಗುರಿ ಹೊಂದಿದೆ ಎಂದರು. ಐಐಟಿ ಮಂಡಿಯ 16 ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಭಾಗವಹಿಸಿದ್ದ ರಾಜನಾಥ್ ಸಿಂಗ್ ಅವರು ಎಐ ಯುದ್ಧ, ಸೈಬರ್ ಭದ್ರತೆ, ಸ್ಥಳೀಯ ಎಐ ಚಿಪ್ ಉತ್ಪಾದನೆ ಮತ್ತು ಕ್ವಾಂಟಮ್ ತಂತ್ರಜ್ಞಾನದಲ್ಲಿ ಹೆಚ್ಚಿನ ತಾಂತ್ರಿಕ ಪ್ರಗತಿಯನ್ನು ಪ್ರೋತ್ಸಾ ಹಿಸಿದರು. ಐಐಟಿ ಮಂಡಿ ಮತ್ತು ಪುಟ 2

## ಮುಡಾ ಹಗರಣ ಸತ್ಯಕ್ಕೆ ಸಂದ ಜಯ

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದ ಹಗರಣ ಕುರಿತಂತೆ ತಮ್ಮ ತಂದೆಯವರು ಯಾವುದೇ ತಪ್ಪು ಮಾಡಿಲ್ಲ. ಹೀಗಾಗಿ ಲೋಕಾಯುಕ್ತ ಪೊಲೀಸರು ತನಿಖೆ ನಡೆಸಿ ಕ್ಲೀನ್‌ಚಿಟ್ ನೀಡಿರುವುದು ಸತ್ಯಕ್ಕೆ ಸಂದ ಜಯ ಎಂದು ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಹೇಳಿದ್ದಾರೆ.



ಮೈಸೂರಿನಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿವೇಶನ ವಿಚಾರವಾಗಿ ತಮ್ಮ ತಂದೆ ಯಾವುದೇ ಪತ್ರ ಬರೆದಿಲ್ಲ. ತಮ್ಮ ತಾಯಿ ಪತ್ರ ಬರೆದು ತಮ್ಮ ಜಮೀನು ಬದಲಿಗೆ ನಿವೇಶನ ನೀಡಿ ಎಂದು ಕೇಳಿದ್ದಾರೆ. ಆದರೆ, ನಿವೇಶನ ಪಡೆಯುವ ವಿಚಾರದಲ್ಲಿ ಯಾವುದೇ ಪ್ರಭಾವ ಬಳಸಿಲ್ಲ ಎಂದರು.


ಎಲ್ಲರಿಗೂ ನಿವೇಶನ ಕೊಟ್ಟಂತೆ ನಮಗೂ ಕೊಟ್ಟಿದ್ದಾರೆ. ನಮ್ಮ ಜಮೀನು ಬಳಸಿಕೊಂಡು ಸೈಟ್ ಕೊಟ್ಟಿದ್ದಾರೆ. ಇದನ್ನೇ ದೊಡ್ಡ ಹಗರಣ ಎಂದು ಪ್ರತಿಪಕ್ಷಗಳು ಬಿಂಬಿಸಿವೆ.

ಉದ್ದೇಶಪೂರಕವಾಗಿ ತಮ್ಮ ತಂದೆಯವರನ್ನು ಟಾರ್ಗೆಟ್ ಮಾಡಿದ್ದಾರೆ. ಈಗ ಸತ್ಯಕ್ಕೆ ಜಯ ಸಿಕ್ಕಿದೆ ಎಂದರು. ಪುಟ 2

ಮುಡಾ ಹಗರಣದಲ್ಲಿ ತಮ್ಮ ಹೆಸರನ್ನು ತಳುಕು ಹಾಕಲು ಯತ್ನ ನಡೆಯಿತು. ತಾವೂ ಮುಡಾ ಸದಸ್ಯನಾಗಿದ್ದೆ. ಎಲ್ಲಿಯೂ ಕೂಡ ಈ ವಿಚಾರದ ಬಗ್ಗೆ ಹೇಳಿಕೆ ನೀಡಿಲ್ಲ. ಆರ್‌ಟಿಐ ಕಾರ್ಯಕರ್ತರನ್ನು ಮುಂದಿಟ್ಟುಕೊಂಡು ನಮ್ಮ ಕುಟುಂಬದ ವಿರುದ್ಧ ಇಲ್ಲಸಲ್ಲದ ಆರೋಪ ಮಾಡಲಾಯಿತು. ದೂರುದಾರ ಸ್ನೇಹಮಯಿ ಕೃಷ್ಣ ಸುಪ್ರೀಂಕೋರ್ಟಿಗೆ ಪುಟ 2

## ಲಕ್ಷ್ಯಸೇನ್ ವಿರುದ್ಧದ ಎಫ್‌ಐಆರ್ ರದ್ದತಿಗೆ ನಕಾರ

**ಬೆಂಗಳೂರು:** ವಯಸ್ಸಿನ ಕುರಿತು ತಪ್ಪು ಮಾಹಿತಿ ನೀಡಿದ ಆರೋಪದಲ್ಲಿ ಖ್ಯಾತ ಬ್ಯಾಡ್ಮಿಂಟನ್ ಪಟು ಲಕ್ಷ್ಯ ಸೇನ್ ಮತ್ತವರ ಕುಟುಂಬದ ಸದಸ್ಯರು ಹಾಗೂ ತರಬೇತುದಾರ ಯು. ವಿಮಲ್ ಕುಮಾರ್ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ರದ್ದುಪಡಿಸಲು ಹೈಕೋರ್ಟ್ ನಿರಾಕರಿಸಿದೆ. ತಮ್ಮ ವಿರುದ್ಧದ ಎಫ್‌ಐಆರ್ ಹಾಗೂ ಅದರ ಕುರಿತ ನಗರದ 8ನೇ ಎಸಿಎಂಎಂ ನ್ಯಾಯಾಲಯದ ವಿಚಾರಣೆ ರದ್ದು ಕೋರಿ ಲಕ್ಷ್ಯ ಸೇನ್ ಮತ್ತಿತರರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಜಿ.ಉಮಾ ಅವರಿದ್ದ ನ್ಯಾಯಪೀಠ ಫೆಬ್ರವರಿ 19 ರಂದು ಈ ಆದೇಶ ನೀಡಿದೆ. ಅಲ್ಲದೇ, ಪ್ರಕರಣ ಸಂಬಂಧ ದೂರುದಾರರು ಸಾಕಷ್ಟು ದಾಖಲೆಗಳನ್ನು ಸಲ್ಲಿಸಿದ್ದಾರೆ.ಈ ಎಲ್ಲ ಅಂಶಗಳು ಆರೋಪ ಸಂಬಂಧ ಮೇಲ್ನೋಟಕ್ಕೆ ಪುಟ 2



## ನಾನು ಜೆಡಿಎಸ್ ರಾಜ್ಯಾಧ್ಯಕ್ಷ ಹುದ್ದೆಯ ಆಕಾಂಕ್ಷಿಯಲ್ಲ

**ಮೈಸೂರು:** ನಾನು ಜೆಡಿಎಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತ. ನಾನು ಎಆಖ ರಾಜ್ಯಾಧ್ಯಕ್ಷ ಹುದ್ದೆಯ ಆಕಾಂಕ್ಷಿಯಲ್ಲ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದ್ದಾರೆ.



ಮೈಸೂರಿನಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ನಿಖಿಲ್ ಕುಮಾರಸ್ವಾಮಿ, ತಳಮಟ್ಟದಿಂದ ಪಕ್ಷವನ್ನ ಕಾರ್ಯಕರ್ತರು ಕಟ್ಟಿ ಬೆಳೆಸಿದ್ದಾರೆ. ಮುಂದಿನ ದಿನಗಳಲ್ಲಿ ಜೆಡಿಎಸ್ ಅಧಿಕಾರಕ್ಕೆ ಬರಲಿದೆ. ರಾಜ್ಯ ಸರ್ಕಾರದ ವೈಫಲ್ಯದಿಂದ ಮುಂದೆ ಜೆಡಿಎಸ್ ಅಧಿಕಾರಕ್ಕೆ ಬರಲಿದೆ. ಎಲ್ಲಾ ಕಾರ್ಯಕರ್ತರಿಗೆ ಅಧಿಕಾರ ಕೊಡಿಸುವುದು ನಮ್ಮ ಗುರಿ. ರಾಜ್ಯದಲ್ಲಿ ಸಂಘಟನೆಗೆ ಮೊದಲ ಆದ್ಯತೆ ನೀಡುತ್ತಿದ್ದೇನೆ. ಮೊದಲು ಎಲ್ಲಾ ರೀತಿಯ ಸಂಘಟನೆಯಲ್ಲಿ ನಾನು ಪಾಲ್ಗೊಳ್ಳುತ್ತೇನೆ. ತಂದೆ, ತಾತ ಅವರ ಅನಾರೋಗ್ಯ ಹಿನ್ನಲೆ ಒತ್ತಡ ಬರುತ್ತಿದೆ. ಆದರೆ, ಪಕ್ಷದಲ್ಲಿ ಹಲವು ಹಿರಿಯ ನಾಯಕರು ಇದ್ದಾರೆ. ಸದ್ಯಕ್ಕೆ ರಾಜ್ಯಾಧ್ಯಕ್ಷ ಪಟ್ಟ ಎಂಬುದು ಅಪ್ರಸ್ತುತ ಎನಿಸಿದೆ ಎಂದು ತಿಳಿಸಿದರು.

ಕಾಂಗ್ರೆಸ್ ಪಕ್ಷ ನಾಯಕರು ಲೋಕಸಭೆಯಲ್ಲಿ ಸಂವಿಧಾನದ ಪುಟ 2

# ದೇವಸ್ಥಾನಕ್ಕೆ ಹೋಗುತ್ತಿದ್ದ ಭಕ್ತರ ಮೇಲೆ ಆನೆ ದಾಳಿ: ಮೂವರು ಬಲಿ



**ಗುಂಡಲಕೋಣ (ಆಂಧ್ರಪ್ರದೇಶ):** ಶಿವರಾತ್ರಿ ಹಿನ್ನೆಲೆ ದೇವಸ್ಥಾನಕ್ಕೆ ಹೋಗುತ್ತಿದ್ದ ಭಕ್ತರ ಮೇಲೆ ಆನೆಗಳು ದಾಳಿ ಮಾಡಿದ ಘಟನೆ ಅನ್ನಮಯ್ಯ ಜಿಲ್ಲೆಯ ಓಬುಲವರಿಪಲ್ಲೆ ಮಂಡಲ ವ್ಯಾಪ್ತಿಯ ಗುಂಡಲಕೋಣದಲ್ಲಿ ನಡೆದಿದೆ.

ದಾಳಿಯಲ್ಲಿ ಮೂವರು ಸಾವನ್ನಪ್ಪಿದ್ದು, ಇನ್ನಿಬ್ಬರ ಸ್ಥಿತಿ ಗಂಭೀರವಾಗಿದೆ. ಸಾವನ್ನಪ್ಪಿದ ಮೂವರು ಭಕ್ತರು ವೈ.ಕೋಟದವರು. ಗಂಭೀರವಾಗಿ ಗಾಯಗೊಂಡಿರುವವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಘಟನೆಗೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿರುವ ಡಿಸಿಎಂ ಪವನ್ ಕಲ್ಯಾಣ್ ಹಾಗೂ ಸಚಿವ ಮಂಡಿಪಲ್ಲಿ ರಾಮಪ್ರಸಾದ್ ರೆಡ್ಡಿ, ಗಾಯಗೊಂಡಿರುವವರಿಗೆ ಉತ್ತಮ ವೈದ್ಯಕೀಯ ಚಿಕಿತ್ಸೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಘಟನೆಯ ವಿವರ: ಜಿಲ್ಲೆಯ ಓಬುಲವರಿಪಲ್ಲೆ ಮಂಡಲದ ವೈ ಕೋಟ ಬಳಿಯ ಗುಂಡಲ ಕೋಣದಲ್ಲಿ ಶಿವ ದೇವಾಲಯಕ್ಕೆ ತೆರಳುತ್ತಿದ್ದ ಭಕ್ತರ ಮೇಲೆ ಆನೆಗಳ ಗುಂಪು ದಾಳಿ ನಡೆಸಿದ ಪರಿಣಾಮ ಮೂವರು ಭಕ್ತರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಇನ್ನಿಬ್ಬರ ಸ್ಥಿತಿ ಗಂಭೀರವಾಗಿದ್ದು, ಅವರನ್ನು ರೈಲ್ವೆ ಕೋಡೂರು ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಶಿವರಾತ್ರಿಯ ಸಂದರ್ಭದಲ್ಲಿ ಗುಂಡಲಕೋಣದ ಸಿದ್ಧೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಜಾಗರಣೆ ಆಚರಿಸಲು ವೈ. ಕೋಟ ಮತ್ತು ಕನ್ನೆಗುಂಟ ಕಾಲೋನಿಯ 30 ಭಕ್ತರು ಬೆಳಗ್ಗಿನ ಜಾವ 2 ಗಂಟೆಗೆ ನಡೆದುಕೊಂಡು ಹೋಗುತ್ತಿದ್ದರು.

ಗುಂಡಲಕೋಣ ಸಮೀಪಿಸುತ್ತಿದ್ದಂತೆ, ಕಾಡಿನಿಂದ ಬಂದ ಆನೆಗಳ ಗುಂಪು ಭಕ್ತರ ಮೇಲೆ ಇದ್ದಕ್ಕಿದ್ದಂತೆ ದಾಳಿ ಮಾಡಿದೆ. ಕನ್ನೆಗುಂಟ ಕಾಲೋನಿಯ ಮೂವರು ಭಕ್ತರನ್ನು ಮನಬಂದಂತೆ ತುಳಿದ ಕಾರಣ, ಅವರು ಸ್ಥಳದಲ್ಲೇ ಸಾವನ್ನಪ್ಪಿದರು. ಸತ್ತವರಲ್ಲಿ ಒಬ್ಬ ಮಹಿಳೆ ಕೂಡ ಸೇರಿದ್ದಾರೆ. ಪೊಲೀಸರು ಶವಗಳನ್ನು ಮತ್ತು ಗಾಯಾಳುಗಳನ್ನು ರೈಲ್ವೆ ಕೊಡೂರು ಸರ್ಕಾರಿ ಆಸ್ಪತ್ರೆಗೆ ಸಾಗಿಸಿದರು.

ಡಿಸಿಎಂ ಪವನ್ ಕಲ್ಯಾಣ್ ಕಳವಳ: ಡಿಸಿಎಂ ಪವನ್ ಕಲ್ಯಾಣ್, "ಆನೆ ದಾಳಿಯಲ್ಲಿ ಮೂವರು ಜನರು ಸಾವನ್ನಪ್ಪಿರುವುದು ದುಃಖಕರ" ಎಂದು ಹೇಳಿದರು. ಅಧಿಕಾರಿಗಳೊಂದಿಗೆ ದೂರವಾಣಿಯಲ್ಲಿ ಮಾತನಾಡಿ ಘಟನೆಯ ಬಗ್ಗೆ ವಿಚಾರಿಸಿದರು. ರೈಲ್ವೆ ಕೊಡೂರು ಶಾಸಕ ಶ್ರೀಧರ್ ಅವರು ತಕ್ಷಣ ವಿಧಾನಸಭೆಯಿಂದ ವೈ. ಕೋಟಾಗೆ ತೆರಳಿ ಸಂತ್ರಸ್ತ ಕುಟುಂಬಗಳನ್ನು ಭೇಟಿ ಮಾಡುವಂತೆ ಆದೇಶಿಸಿದರು. ಚಿಕಿತ್ಸೆ ಪಡೆಯುತ್ತಿರುವವರಿಗೆ ಉತ್ತಮ ವೈದ್ಯಕೀಯ ಚಿಕಿತ್ಸೆ ನೀಡುವಂತೆ ಅಧಿಕಾರಿಗಳಿಗೆ ಸಲಹೆ ನೀಡಿದರು. ಘಟನೆಯ ಕುರಿತು ಸಮಗ್ರ ವರದಿ ಸಲ್ಲಿಸುವಂತೆ ಪವನ್ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಆದೇಶಿಸಿದರು.

# ಐಎಂಎ: ರಂಜಾನ್ ಹಬ್ಬಕ್ಕೂ ಮುನ್ನ ಪರಿಹಾರ

**ಬೆಂಗಳೂರು:** ಐಎಂಎ (ಐ–ಮಾನಿಟರಿ ಅಡ್ವೈಸರಿ) ಬಹುಕೋಟಿ ವಂಚನೆ ಪ್ರಕರಣದಿಂದಾಗಿ ಹಣ ಕಳೆದುಕೊಂಡ ಎಲ್ಲಾ ಠೇವಣಿದಾರರಿಗೂ ರಂಜಾನ್ ಹಬ್ಬಕ್ಕೂ ಮುನ್ನ ನಿಗದಿತ ಪರಿಹಾರದ ಹಣವನ್ನು ನೀಡಲು ಸೂಕ್ತ ಕ್ರಮವಹಿಸಲಾಗುವುದು ಎಂದು ಸಚಿವ ಕೃಷ್ಣ ಬೈರೇಗೌಡ ಭರವಸೆ ನೀಡಿದರು.

ಐಎಂಎ ಹಗರಣದ ಮೊತ್ತ ಎಷ್ಟು? ಈ ವರೆಗೆ ಈ ಸಂಸ್ಥೆಯ ಎಷ್ಟು ಕೋಟಿ ಮೌಲ್ಯದ ಸ್ಥಿರಾಸ್ತಿ/ಚರಾಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ? ಕಳೆದ ಏಳು ವರ್ಷದಲ್ಲಿ ಈ ಕಂಪೆನಿಯಲ್ಲಿ ಹಣ ಹೂಡಿ ಕಳೆದುಕೊಂಡ ಎಷ್ಟು ಜನರಿಗೆ ಎಷ್ಟು ಪ್ರಮಾಣದಲ್ಲಿ ಹಣ ಹಿಂತಿರುಗಿಸಲಾಗಿದೆ ಮತ್ತು ಉಳಿದ ಸಂತ್ರಸ್ತರಿಗೆ ಯಾವಾಗ ಮತ್ತು ಹೇಗೆ ಹಣ ಹಿಂತಿರುಗಿಸಬೇಕು? ಎಂಬ ಕುರಿತು ಸೋಮವಾರ ವಿಕಾಸಸೌಧ ಕಚೇರಿಯಲ್ಲಿ ಸಭೆ ನಡೆಸಿ ಚರ್ಚಿಸಲಾಯಿತು.

ಈ ಸಭೆಯಲ್ಲಿ ಸಚಿವ ಜಮೀರ್ ಅಹ್ಮದ್, ಶಾಸಕ ರಿಜ್ವಾನ್ ಅರ್ಷದ್, ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್ ಅವರ ಜೊತೆಗೆ ಐಎಂಎ ಹಗರಣದಿಂದ ಹಣ ಕಳೆದುಕೊಂಡ ಹಲವರು ಭಾಗಿಯಾಗಿದ್ದರು.

ಈ ವೇಳೆ ಸಂತ್ರಸ್ತರಿಗೆ ಭರವಸೆ ನೀಡಿದ ಸಚಿವ ಕೃಷ್ಣ ಬೈರೇಗೌಡ ಅವರು, “ರಂಜಾನ್ ಹಬ್ಬಕ್ಕೂ ಹತ್ತು ದಿನ ಮೊದಲೇ ಐಎಂಎ ನಲ್ಲಿ ಹಣ ಹೂಡಿ ಮೋಸ ಹೋದವರಿಗೆ ಅವರ ಹೂಡಿಕೆಯ ಅನುಪಾತದ ಆಧಾರದಲ್ಲಿ ಪರಿಹಾರ ನೀಡಲು ಕ್ರಮವಹಿಸಲಾಗುವುದು ಎಂದರು.

ಹಣ ಡಬ್ಲಿಂಗ್ ಆಸೆಯಿಂದಾಗಿ ಸುಮಾರು ಒಂದು ಲಕ್ಷಕ್ಕೂ ಅಧಿಕ ಠೇವಣಿದಾರರು 3213.58 ಕೋಟಿ ರೂ.ಗಳನ್ನು ಐಎಂಎ ಕಂಪೆನಿಯಲ್ಲಿ ಹೂಡಿಕೆ ಮಾಡಿ ಮೋಸ ಹೋಗಿದ್ದಾರೆ. ಕಂಪೆನಿಯ ಒಟ್ಟು ಠೇವಣಿದಾರರ ಸಂಖ್ಯೆ 69069. ಈ ಪೈಕಿ 1400 ಕೋಟಿ ರೂ. ಗಳನ್ನು ಲಾಭಾಂಶದ ಮಾದರಿಯಲ್ಲಿ ಐಎಂಎ ಕಾಲಕಾಲಕ್ಕೆ ಠೇವಣಿದಾರರಿಗೆ ನೀಡುತ್ತಾ ಬಂದಿದೆ. ಹಗರಣ ಬೆಳಕಿಗೆ ಬಂದ ನಂತರ ವಿಶೇಷ ನ್ಯಾಯಾಲಯದ ಆದೇಶದಂತೆ ಕಂಪೆನಿ ಖಾತೆಯಲ್ಲಿದ್ದ 19.12 ಕೋಟಿ ರೂ. ಗಳನ್ನು 50,000 ರೂ.ಗಳಂತೆ 6858 ಜನ ಸಂತ್ರಸ್ತರ ಖಾತೆಗಳಿಗೆ 2022 ಏಪ್ರಿಲ್‌ನಲ್ಲಿ ಜಮೆ ಮಾಡಲಾಗಿತ್ತು.

66.66 ಕೋಟಿ ರೂ.ಗಳನ್ನು 53,142 ಜನ ಸಂತ್ರಸ್ತರ ಖಾತೆಗಳಿಗೆ 8/11/2023 ರಂದು ಜಮೆ ಮಾಡಲಾಗಿತ್ತು. 1.28 ಕೋಟಿ ರೂ.ಗಳನ್ನು 626 ಸಂತ್ರಸ್ತರ ಖಾತೆಗಳಿಗೆ 23/5/2024 ರಂದು ಜಮೆ ಮಾಡಲಾಗಿತ್ತು. 276 ಜನ ಸಂತ್ರಸ್ತರಿಗೆ 36.14 ಲಕ್ಷ ರೂ.ಗಳನ್ನು 7/11/2024 ರಂದು ಜಮೆ ಮಾಡಲಾಗಿತ್ತು. ಒಟ್ಟಾರೆ ಈವರೆಗೆ 87.43 ಕೋಟಿ ರೂ.ಗಳನ್ನು 60902 ಜನ ಸಂತ್ರಸ್ತರ ಖಾತೆಗಳಿಗೆ ಜಮೆ ಮಾಡಲಾಗಿದೆ ಎಂದು ಸಭೆಯಲ್ಲಿ ಮಾಹಿತಿ ಹಂಚಿಕೊಳ್ಳಲಾಯಿತು.

ಐಎಂಎ ಕಂಪೆನಿಗೆ ಸಂಬಂಧಿಸಿದ ಹತ್ತಕ್ಕೂ ಹೆಚ್ಚು ಆಸ್ತಿಗಳನ್ನು ಈಗಾಗಲೇ ಸರ್ಕಾರ ವಶಕ್ಕೆ ಪಡೆದಿದೆ. ಚರಾಸ್ಥಿಗಳ ಮೌಲ್ಯ 106.92 ಕೋಟಿ ಹಾಗೂ ಸ್ಥಿರಾಸ್ತಿಗಳ ಮೌಲ್ಯ 401.92 ಕೋಟಿ ರೂ. ಎಂದು ಅಂದಾಜಿಸಲಾಗಿದೆ.

ಇದಲ್ಲದೆ, ಕಂಪೆನಿಗೆ ಸಂಬಂಧಿಸಿದ ವಿವಿಧ ಬ್ಯಾಂಕ್ ಖಾತೆಗಳಿಂದ 2.88 ಕೋಟಿ ರೂ., ನಗದು ಹಣ 11.72 ರೂ. ಹೂಡಿಕೆ ಪತ್ರ 11.06 ಕೋಟಿ ರೂ. ಸೇರಿದಂತೆ ಒಟ್ಟಾರೆ 534.5 ಕೋಟಿ ರೂ.ಗಳನ್ನು ಸರ್ಕಾರ ಮುಟ್ಟುಗೋಲು ಈಗಾಗಲೇ ಹಾಕಿದೆ. ನ್ಯಾಯಮೂರ್ತಿ ಜಸ್ಟೀಸ್ ನಾಗಪ್ರಸನ್ನ ಪೀಠದ ಆದೇಶದಂತೆ ಶೀಘ್ರವೇ ಈ ಆಸ್ತಿಗಳನ್ನು ಹರಾಜಿಗೊಳಪಡಿಸಿ ಇದರಿಂದ ಬಂದ ಹಣವನ್ನು ಹೂಡಿಕೆದಾರರಿಗೆ ಹಿಂತಿರುಗಿಸಲಾಗುವುದು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಸಭೆಯಲ್ಲಿ ತಿಳಿಸಿದರು.

# ತಪ್ಪು ಮಾಹಿತಿಯ ಜಾಹೀರಾತು; ದೂರು ಸ್ವೀಕರಿಸಲು ವಿಶೇಷ ವ್ಯವಸ್ಥೆ ಬೇಕಿದೆ

ನವದೆಹಲಿ: ತಪ್ಪು ಮಾಹಿತಿ ನೀಡುವ ಜಾಹೀರಾತುಗಳ ಬಗ್ಗೆ ನಾಗರಿಕರು ನೇರವಾಗಿ ದೂರುಗಳನ್ನು ಸಲ್ಲಿಸಲು ವ್ಯವಸ್ಥೆ ರೂಪಿಸುವ ಅಗತ್ಯವಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ಡ್ರಗ್ಸ್ ಆ್ಯಂಡ್ ಮ್ಯಾಜಿಕ್ ರೆಮಿಡೀಸ್ (ಆಕ್ಷೇಪಾರ್ಹ ಜಾಹೀರಾತುಗಳು) ಕಾಯ್ದೆ– 1954 ಅನ್ನು ಪ್ರಮುಖವಾಗಿ ಬಳಸಿಕೊಳ್ಳಬೇಕಿದೆ ಎಂದು ನ್ಯಾಯಮೂರ್ತಿಗಳಾದ ಅಭಯ್ ಎಸ್ ಓಕಾ ಮತ್ತು ಉಜ್ಜಲ್ ಭುಯಾನ್ ಅವರಿದ್ದ ಪೀಠವು ಅಭಿಪ್ರಾಯಪಟ್ಟಿದೆ.

ಈ ಕಾಯ್ದೆಯು ಅತ್ಯಂತ ಮಹತ್ವದ್ದಾಗಿದೆ. ಅದರ ನಿಬಂಧನೆಗಳನ್ನು ಪಾಲಿಸುವುದು ಅತ್ಯಗತ್ಯ. ಈ ಕಾಯ್ದೆಯ ಅನುಸಾರ ತಪ್ಪುದಾರಿಗೆಳೆಯುವ ಜಾಹೀರಾತುಗಳ ಬಗ್ಗೆ ದೂರುಗಳನ್ನು ಸಲ್ಲಿಸಲು ಬಯಸುವ ನಾಗರಿಕರಿಗಾಗಿ ವಿಶೇಷ ವ್ಯವಸ್ಥೆಯನ್ನು ರೂಪಿಸಬೇಕು ಎಂದು ಹೇಳಿತು. ಈ ಕುರಿತಾಗಿ ಮಾರ್ಚ್ 7 ರಂದು ನಡೆಯುವ ಮುಂದಿನ ವಿಚಾರಣೆಯಲ್ಲಿ ಈ ಅಂಶವನ್ನು ಆದ್ಯತೆಯ ಮೇರೆಗೆ ಪರಿಗಣಿಸುವುದಾಗಿ ಇದೇ ವೇಳೆ ತಿಳಿಸಿತು.

ಪ್ರಕರಣವೇನು?: ಜಾರ್ಖಂಡ್, ಕರ್ನಾಟಕ, ಕೇರಳ, ಪಂಜಾಬ್, ಮಧ್ಯಪ್ರದೇಶ ಮತ್ತು ಕೇಂದ್ರಾಡಳಿತ ಪ್ರದೇಶ ಪುದುಚೇರಿಯಲ್ಲಿ ಔಷಧ ಮತ್ತು ಸೌಂದರ್ಯವರ್ಧಕ ಕಾಯ್ದೆ–1945 ನಿಯಮ 170ರ ಅನುಸಾರ, ತಪ್ಪು ಮಾಹಿತಿಯುಳ್ಳ ಜಾಹೀರಾತುಗಳ ಮೇಲೆ ಕ್ರಮ ಜರುಗಿಸಿಲ್ಲ ಎಂಬ ಅರ್ಜಿಯು ಪೀಠಕ್ಕೆ ಸಲ್ಲಿಸಲಾಗಿದೆ. ಸೋಮವಾರದ ವಿಚಾರಣೆಯ ವೇಳೆ, ಕರ್ನಾಟಕದಲ್ಲಿ ತಪ್ಪುದಾರಿಗೆಳೆಯುವ ಜಾಹೀರಾತುಗಳ 25 ಪ್ರಕರಣಗಳಲ್ಲಿ ವಸ್ತುವಿನ ವಿವರಗಳ ಕೊರತೆಯಿಂದಾಗಿ ಯಾವುದೇ ಕಾನೂನು ಕ್ರಮ ಜರುಗಿಸಲಾಗಿಲ್ಲ ಎಂದು ಪೀಠದ ಗಮನಕ್ಕೆ ತರಲಾಯಿತು.

ಇದಕ್ಕೆ ಬೇಸರಿಸಿದ ಪೀಠವು, ಇದು ಕರ್ನಾಟಕ ರಾಜ್ಯವು ನೀಡಿದ ನೆಪವಾಗಿದೆ. ರಾಜ್ಯವು ಪೊಲೀಸ್ ಇಲಾಖೆ, ಸೈಬರ್ ಸೆಲ್ ಅನ್ನು ಹೊಂದಿದೆ. ಇಂತಹ ಜಾಹೀರಾತುಗಳ ಮೂಲಗಳನ್ನು ಕಂಡುಹಿಡಿಯುವುದು ಅವರಿಗೆ ತುಂಬಾ ಸುಲಭ. ಆದರೆ, ಇದನ್ನು ಮಾಡಲು ಇಚ್ಛಾಶಕ್ತಿ ಹೊಂದಿರಬೇಕು" ಎಂದಿತು. ಜೊತೆಗೆ, ತಪ್ಪಿತಸ್ಥರನ್ನು ಪತ್ತೆಹಚ್ಚಲು ಮತ್ತು ನ್ಯಾಯಾಲಯಕ್ಕೆ ಈ ಕುರಿತ ವರದಿ ಸಲ್ಲಿಸಲು ಕರ್ನಾಟಕ ಸರ್ಕಾರಕ್ಕೆ ಒಂದು ತಿಂಗಳ ಗುಡುವು ನೀಡಿತು.



ಪ್ರಕರಣದಲ್ಲಿ ಅಮಿಕಸ್ ಕ್ಯೂರಿಯಾಗಿ ನ್ಯಾಯಾಲಯಕ್ಕೆ ಸಹಾಯ ಮಾಡುತ್ತಿರುವ ಹಿರಿಯ ವಕೀಲ ಶಾದನ್ ಫರಾಸತ್ ಅವರು, ಕೇರಳಕ್ಕೆ ರಾಜ್ಯದಲ್ಲಿ ನಿಯಮಗಳನ್ನು ಸರಿಯಾಗಿ ಅನುಷ್ಠಾನ ಮಾಡಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯಗಳಿಗೆ ಸಮನ್ಸ್: ಇನ್ನೂ, ಪ್ರಕರಣದ ಕುರಿತು ಫೆಬ್ರವರಿ 10 ರಂದು ನಡೆದಿದ್ದ ವಿಚಾರಣೆಯಲ್ಲಿ ಆಯುರ್ವೇದ, ಸಿದ್ಧ ಮತ್ತು ಯುನಾನಿ ಔಷಧಿಗಳ ತಪ್ಪು ಜಾಹೀರಾತುಗಳ ವಿರುದ್ಧ ಕ್ರಮ ಕೈಗೊಳ್ಳಲು ವಿಫಲವಾದ ದೆಹಲಿ, ಆಂಧ್ರಪ್ರದೇಶ ಮತ್ತು ಜಮ್ಮು ಮತ್ತು ಕಾಶ್ಮೀರ ಸೇರಿದಂತೆ ಹಲವಾರು ರಾಜ್ಯಗಳಿಗೆ ಸುಪ್ರೀಂ ಕೋರ್ಟ್ ಸಮನ್ಸ್ ಜಾರಿ ಮಾಡಿತ್ತು.

ದಾರಿತಪ್ಪಿಸುವ ಜಾಹೀರಾತುಗಳನ್ನು ನಿರ್ಬಂಧಿಸಲು, ಸಂಬಂಧಿತ ಜಾಹೀರಾತು ಬಿಡುಗಡೆ ಮಾಡುವ ಮೊದಲು ಕೇಬಲ್ ಟೆಲಿವಿಷನ್ ನೆಟ್‌ವರ್ಕ್ ನಿಯಮಗಳು– 1994 ರ ಪ್ರಕಾರ ಜಾಹೀರಾತುದಾರರಿಂದ ಸ್ವಯಂ ಘೋಷಣೆಯನ್ನು ಪಡೆಯಬೇಕೆಂದು ಕೋರ್ಟ್ ನಿರ್ದೇಶಿಸಿತ್ತು.

## ಮೊದಲ ಪುಟದಿಂದ

## ಅಸಮರ್ಥರಿಗೆ ಕೋಕ್

ರಾಜ್ಯದ ನೀರಾವರಿ ವಿಚಾರವಾಗಿ ಪ್ರತ್ಯೇಕ ಸಭೆ ಮಾಡುವುದಾಗಿ ಭರವಸೆ ನೀಡಿ ಸಮಯ ನಿಗದಿ ಮಾಡಿದ್ದರು.

25ರಂದು (ಇಂದು) ಬೆಳಗ್ಗೆ 11 ಗಂಟೆಗೆ ಕೇಂದ್ರ ಸಚಿವರು ಸಭೆ ನಿಗದಿ ಮಾಡಿದ್ದರು. ಒಂದು ದಿನ ಮುಂಚಿತವಾಗಿ ನಮ್ಮ ಇಲಾಖೆ ಅಧಿಕಾರಿಗಳನ್ನು ದೆಹಲಿಗೆ ಕಳುಹಿಸಿ ಪೂರ್ವಭಾವಿ ಸಭೆ ಮಾಡಲಾಗಿದೆ. ಈ ಸಭೆಯಲ್ಲಿ ನಮ್ಮ ನೀರಾವರಿ ಯೋಜನೆಗಳಿಗೆ ಅಗತ್ಯವಿರುವ ಅನುಮತಿ ನೀಡುವಂತೆ ಮನವಿ ಮಾಡುತ್ತೇನೆ" ಎಂದು ತಿಳಿಸಿದರು.

ಬೆಳಗಾವಿಯಲ್ಲಿ ಮರಾಠಿಗರ ದಾಳಿ ವಿಚಾರವಾಗಿ ಕೇಳಿದಾಗ, "ಗೃಹ ಸಚಿವರು, ಸಾರಿಗೆ ಮಂತ್ರಿಗಳು, ಜಿಲ್ಲಾ ಉಸ್ತುವಾರಿ ಸಚಿವರು ಈ ವಿಚಾರವನ್ನು ನಿಭಾಯಿಸುತ್ತಿದ್ದಾರೆ. ಅವರು ಎಲ್ಲವನ್ನು ನೋಡಿಕೊಳ್ಳುತ್ತಾರೆ" ಎಂದು ತಿಳಿಸಿದರು.

## 5.1ರಷ್ಟು ತೀವ್ರತೆ ದಾಖಲು

ಇದರ ಪರಿಣಾಮ ಕಂಡು ಬಂದಿಲ್ಲ ಎಂದು ಒಡಿಯಾದ ಕಂದಾಯ ಇಲಾಖೆ ಅದಿಕಾರಿಗಳು ತಿಳಿಸಿದ್ದಾರೆ.

ಪುರಿ ಸಮೀಪದಲ್ಲಿ ಇದು ಹೆಚ್ಚು ಅನುಭವಕ್ಕೆ ಬಂದಿದೆ. ಅದನ್ನು ಹೊರತುಪಡಿಸಿ, ಒಡಿಶಾದ ಪಾರಾದೀಪ್, ಪುರಿ, ಬಹಾರ್ಂಪುರ ಮತ್ತು ಇತರ ಕೆಲವು ಸ್ಥಳಗಳಲ್ಲಿ ಕಂಪನದ ಅನುಭವವಾಗಿದೆ ಎಂದು ವರದಿ ತಿಳಿಸಿದೆ.

ಕೋಲ್ಕತ್ತಾ ಭೂಕಂಪನ ವಲಯ ೩೩೩ : ಕೋಲ್ಕತ್ತಾ ಭೂಕಂಪನ ವಲಯ ೩೩೩ ರಲ್ಲಿ ಇಂದಿನ ಕಂಪನ ಬರುತ್ತದೆ. ಇದರರ್ಥ ನಗರವು ಭೂಕಂಪಗಳ ಮಧ್ಯಮ ಅಪಾಯದಲ್ಲಿದೆ ಎಂದು. ಇದು ಈಶಾನ್ಯ ಭಾರತ, ಹಿಮಾಲಯ ಅಥವಾ ಗುಜರಾತ್‌ನಂತಹ ಸ್ಥಳಗಳಂತೆ ದೊಡ್ಡ ಭೂಕಂಪಗಳಿಗೆ ಗುರಿಯಾಗದಿದ್ದರೂ, ಆಗಾಗ ಇಂತಹ ಕಂಪನಗಳು ಸದ್ದು ಮಾಡುತ್ತವೆ. ಇವುಗಳು ಸಾಮಾನ್ಯವಾಗಿ ಬಂಗಾಳಕೊಲ್ಲಿ, ನೇಪಾಳ, ಅಥವಾ ಈಶಾನ್ಯ ಭಾರತದಂತಹ ಹತ್ತಿರದ ಪ್ರದೇಶಗಳಲ್ಲಿ ಸಂಭವಿಸುತ್ತಿರುತ್ತವೆ. ಮ್ಯಾನ್ಮಾರ್ ಮತ್ತು ಈಶಾನ್ಯದ ಅಡಿಯಲ್ಲಿ ಕೋಲ್ಕತ್ತಾಗೆ ನೇರವಾಗಿ ಹತ್ತಿರದಲ್ಲಿಲ್ಲದ ಕಾರಣ ಸಾಮಾನ್ಯವಾಗಿ ನಡುಕ ಸಂಭವಿಸುವುದಿಲ್ಲ.

## ಸ್ನೇಹಮಯಿಗೆ ಅನುಮತಿ..!

ನಿರ್ದೇಶನ ನೀಡಿದೆ. ಕೃಷ್ಣ ಮತ್ತು ಲೋಕಾಯುಕ್ತ ಪೊಲೀಸರನ್ನು ಪ್ರತಿನಿಧಿಸುವ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ವೆಂಕಟೇಶ್ ಅರಬಟ್ಟಿ ಅವರ ವಾದ ಆಲಿಸಿದ ನಂತರ ಹಾಲಿ ಮತ್ತು ಮಾಜಿ ಸಂಸದರು ಮತ್ತು ಪುಟ 2

ಶಾಸಕರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ್ ಗಜಾನನ್ ಭಟ್ ಅವರು ಆದೇಶವನ್ನು ಹೊರಡಿಸಿ, ಕೃಷ್ಣ ಅವರ ಸಲ್ಲಿಕೆಗಾಗಿ ವಿಚಾರಣೆಯನ್ನು ಮಾರ್ಚ್ 7 ಕ್ಕೆ ಮುಂದೂಡಿದರು.

ಈ ಹಿಂದೆ, ಕೃಷ್ಣ ಅವರು ವೈಯಕ್ತಿಕವಾಗಿ ಪಕ್ಷಕಾರರಾಗಿ ಪ್ರಕರಣವನ್ನು ವಿಚಾರಣೆಗೆ ಒಳಪಡಿಸಲು ಅನುಮತಿ ನೀಡಬಹುದು ಎಂದು ಸಲ್ಲಿಸಿದರು. ಸಿಆರ್‌ಪಿಸಿಯ ಸೆಕ್ಷನ್ 173 ರ ಅಡಿಯಲ್ಲಿ ಅವರು ಅರ್ಜಿ ಸಲ್ಲಿಸಿದ್ದು, ಪ್ರಕರಣವನ್ನು ವಿಚಾರಣೆಗೆ ಒಳಪಡಿಸಲು ಅಂತಿಮ ವರದಿಯ ಪ್ರತಿಯನ್ನು ನೀಡುವಂತೆ ನ್ಯಾಯಾಲಯವನ್ನು ಕೋರಿದ್ದಾರೆ.

ನ್ಯಾಯಾಲಯವು ಮೆಮೋ ಮತ್ತು ಅರ್ಜಿ ಎರಡಕ್ಕೂ ಅನುಮತಿ ನೀಡಿತು ಮತ್ತು ಲೋಕಾಯುಕ್ತ ಪೊಲೀಸರು ಸಲ್ಲಿಸಿದ ಸಂಪೂರ್ಣ ಅಂತಿಮ ವರದಿಯ ಪ್ರತಿಯನ್ನು ಅವರ ಸಲ್ಲಿಕೆಗಳಿಗಾಗಿ ಸಲ್ಲಿಸುವಂತೆ ರಿಜಿಸ್ಟ್ರಿಗೆ ನಿರ್ದೇಶನ ನೀಡಿತು. ನಂತರ, ಎಸ್ ಪಿಪಿ ಪರವಾಗಿ, ತನಿಖಾ ಸಂಸ್ಥೆ ಪ್ರಕರಣಕ್ಕೆ ಸಂಬಂಧಿಸಿದ ಸಂಪೂರ್ಣ ದಾಖಲೆಗಳನ್ನು ಒಂದು ವಾರದೊಳಗೆ ಮೈಸೂರಿನ ತನಿಖಾಧಿಕಾರಿಗಳ ಕಚೇರಿಯಲ್ಲಿ ದೂರುದಾರರಿಗೆ ಸಲ್ಲಿಸಲಿದೆ ಎಂದು ಮೆಮೋ ಸಲ್ಲಿಸಲಾಯಿತು. ದೂರುದಾರರು ಸಹ ಒಪ್ಪಿಕೊಂಡರು ಮತ್ತು ಮಾರ್ಚ್ 1 ರಂದು ಅಥವಾ ಅದಕ್ಕೂ ಮೊದಲು ದಾಖಲೆಗಳನ್ನು ಒದಗಿಸಬಹುದು ಎಂದು ವಿನಂತಿಸಿದರು.

ಲೋಕಾಯುಕ್ತ ಪೊಲೀಸರು ಇತ್ತೀಚೆಗೆ ನ್ಯಾಯಾಲಯಕ್ಕೆ 'ಬಿ' ರಿಪೋರ್ಟ್ (ಮುಕ್ತಾಯ) ಸಲ್ಲಿಸಿದ್ದರು. ಈ ನಡೆ ಬಗ್ಗೆ ದೂರುದಾರ ಸ್ನೇಹಮಯಿ ಕೃಷ್ಣ ತೀವ್ರ ಬೇಸರ ವ್ಯಕ್ತಪಡಿಸಿದ್ದರು. ತನಿಖಾ ಸಂಸ್ಥೆ ಪ್ರಭಾವಕ್ಕೆ ಒಳಗಾಗಿ ಈ ನಿರ್ಧಾರ ತೆಗೆದುಕೊಂಡಿದೆ ಎಂದು ಆರೋಪಿಸಿದ್ದರು. ಈ ಸಲುವಾಗಿಯೇ ಇದೀಗ ತಾವೇ ಖುದ್ದು ಕೋರ್ಟ್ ನಲ್ಲಿ ಪ್ರಕರಣದ ಬಗ್ಗೆ ವಾದಿಸಲಿದ್ದಾರೆ. ಇದಕ್ಕೆ ಈಗ ಕೋರ್ಟ್ ಸಹ ಅನುಮತಿ ನೀಡಿದೆ.

## ಎಫ್‌ಐಆರ್ ರದ್ದತಿಗೆ ನಕಾರ

ಸಾಕ್ಷ್ಯಾಧಾರಗಳಾಗಿದ್ದು, ಪ್ರಕರಣ ರದ್ದುಪಡಿಸಲು ಸಾಧ್ಯವಿಲ್ಲ ಎಂದು ಪೀಠ ತಿಳಿಸಿದೆ.

ಪ್ರಕರಣದ ಹಿನ್ನೆಲೆ: ಲಕ್ಷ್ಯ ಸೇನ್ ಅವರು ಬ್ಯಾಡ್ಮಿಂಟನ್ ಕ್ರೀಡೆಯಲ್ಲಿ ಭಾಗವಹಿಸಿ ಸರ್ಕಾರಿ ಸೌಲಭ್ಯಗಳನ್ನು ಪಡೆಯುವುದಕ್ಕಾಗಿ ತಮ್ಮ ವಯಸ್ಸನ್ನು 2.5 ವರ್ಷಗಳ ಕಾಲ ಕಡಿಮೆ ತೋರಿಸಲಾಗಿದೆ. ಈ ಕೃತ್ಯಕ್ಕಾಗಿ ಅವರು ವಯಸ್ಸಿನ ಪ್ರಮಾಣ ಪತ್ರವನ್ನು ನಕಲಿ ಮಾಡಿ ತಪ್ಪಾಗಿ ಮಾಹಿತಿಯನ್ನು ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಷನ್‌ಗೆ ನೀಡಿರುವುದಾಗಿ ಆರೋಪ ಎದುರಾಗಿತ್ತು.

ಈ ಸಂಬಂಧ ಎಂ.ಜಿ.ನಾಗರಾಜ್ ಎಂಬುವರು ಭಾರತೀಯ ಕ್ರೀಡಾ ಪ್ರಾಧಿಕಾರದಿಂದ ಮಾಹಿತಿ ಹಕ್ಕು ಕಾಯಿದೆಯಡಿ ದಾಖಲೆಗಳನ್ನು ಪಡೆದುಕೊಂಡಿದ್ದರು. ಬಳಿಕ ಈ ಸಂಬಂಧ ಖಾಸಗಿ ದೂರು ಸಲ್ಲಿಸಿದ್ದರು. ಈ ದೂರು ಪರಿಗಣಿಸಿದ್ದ ನ್ಯಾಯಾಲಯ ಎಫ್‌ಐಆರ್ ದಾಖಲಿಸಿ ತನಿಖೆ ನಡೆಸಲು ಹೈಗ್ರೌಂಡ್ಸ್ ಪೊಲೀಸ್ ಠಾಣೆಗೆ ನಿರ್ದೇಶನ ನೀಡಿತ್ತು. ಇದನ್ನು ಪ್ರಶ್ನಿಸಿ ಲಕ್ಷ್ಯ ಸೇನ್ ಅವರ ಸಹೋದರ ಚಿರಾಗ್ ಸೇನ್ ಮತ್ತು ತರಬೇತುದಾರ ಯು. ವಿಮಲ್ ಕುಮಾರ್ ಮತ್ತಿತರರು ಹೈಕೋರ್ಟ್ ಮೆಟ್ಟಿಲೇರಿದ್ದರು.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಅರ್ಜಿದಾರರ ವಿರುದ್ಧ ದಾಖಲಾಗಿರುವ ಖಾಸಗಿ ದೂರು ಮತ್ತು ದಾಖಲಾಗಿರುವ ಎಫ್‌ಐಆರ್ ಆಧಾರ ರಹಿತವಾಗಿದೆ. ಅವರಿಗೆ ಕಿರುಕುಳ ನೀಡುವ ಸಲುವಾಗಿ ಈ ದೂರು ದಾಖಲಿಸಿದ್ದು, ಪ್ರಕರಣ ರದ್ದುಗೊಳಿಸಬೇಕು ಎಂದು ಪೀಠಕ್ಕೆ ಕೋರಿದ್ದರು. ಹೈಕೋರ್ಟ್‌ನ ಆದೇಶ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಕೆಯಾಗಿದ್ದು ವಿಚಾರಣಾ ಹಂತದಲ್ಲಿದೆ.

## ಅಪಘಾತ: 2 ಸಾವು

ಮೃತಪಟ್ಟವರು ಎನ್ನಲಾಗಿದೆ. ಮೃತಪಟ್ಟವರು ವಿಜಯಪುರ ಜಿಲ್ಲೆಯ ಚಡಚಣ ತಾಲೂಕಿನವರಾಗಿದ್ದು ನಿಂತಿದ್ದ ಟಿಪ್ಪರ್‌ಗೆ ವಾಹನವೊಂದು ವೇಗವಾಗಿ ಹಿಂದಿನಿಂದ ಬಂದು ಡಿಕ್ಕಿ ಹೊಡೆದ ಪರಿಣಾಮ ಈ ಅಪಘಾತ ಸಂಭವಿಸಿದೆ. ವಾಹನದಲ್ಲಿ 17 ಮಂದಿ ಪ್ರಯಾಣಿಸುತ್ತಿದ್ದರು ಎನ್ನಲಾಗಿದೆ.

## ಏ.8ಕ್ಕೆ ವಿಚಾರಣೆ

ನಡೆಸಿದ ನ್ಯಾಯಾಧೀಶರು ಏಪ್ರಿಲ್ 8ಕ್ಕೆ ವಿಚಾರಣೆ ಮುಂದೂಡಿ ಆದೇಶಿಸಿದರು. ನಟ ದರ್ಶನ್ ಹಾಗೂ ಪವಿತ್ರಗೌಡಗೆ ಹೈಕೋರ್ಟ್ ಷರತ್ತುಬದ್ಧ ಜಾಮೀನು ನೀಡಿದೆ. ಜಾಮೀನು ಪ್ರಶ್ನಿಸಿ ಸರ್ಕಾರ ಸುಪ್ರೀಂಕೋರ್ಟ್ ಮೊರೆ ಹೋಗಿದೆ.

## ಕೇಸ್ ವಾಪಸ್ ಪಡೆದಿದ್ದೇವೆ

ನಮ್ಮ ಮಗ, ಮಗಳು ಚಿಕಿತ್ಸೆಗೆಂದು ಆಸ್ಪತ್ರೆಗೆ ಹೋಗಿದ್ದರು. ಈ ವೇಳೆ ಬಸ್‌ನಲ್ಲಿ ಟಿಕೆಟ್ ವಿಚಾರವಾಗಿ ಜಗಳವಾಗಿದೆ. ಈ ವೇಳೆ ಕನ್ನಡ, ಮರಾಠಿಗರ ಗಲಾಟೆ ಅಂತ ಸುಳ್ಳು ಹಬ್ಬಿಸಲಾಗಿದೆ. ಇದರಿಂದ ಮಹಾರಾಷ್ಟ್ರ, ಕರ್ನಾಟಕದ ನಡುವೆ ಜಗಳ ಶುರುವಾಗಿದೆ. ಭಾಷೆ ಮರಾಠಿ ಆಗಿದ್ದರೂ, ನಾವು ಕನ್ನಡಿಗರೇ. ಇದರಿಂದ ನಮಗೂ ಬೇಸರವಾಗಿದೆ ಎಂದಿದ್ದಾರೆ.

ಪೋಕ್ಸೋ ಕೇಸ್ ಯಾಕೆ?: ತಮ್ಮ ಮೇಲೆ ನಡೆದ ಹಲ್ಲೆಯ ಸಂಬಂಧ ನಿರ್ವಾಹಕ ಮಹಾದೇವ ಹುಕ್ಕೇರಿ ಬೆಳಗಾವಿ ಮಾರಿಹಾಳ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಬಳಿಕ ಬಾಲಕಿ ನಿರ್ವಾಹಕ ಮಹಾದೇವ ಹುಕ್ಕೇರಿ ವಿರುದ್ಧ ಪೋಕ್ಸೋ ಪ್ರಕರಣ ದಾಖಲಿಸಿದರು. ನಿರ್ವಾಹಕ ಮಹಾದೇವ ಹುಕ್ಕೇರಿ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗುತ್ತಿದ್ದಂತೆ, ಆಕ್ರೋಶ ವ್ಯಕ್ತವಾಗಿದೆ. ನಿರ್ವಾಹಕ ಮಹಾದೇವ ಹುಕ್ಕೇರಿ ಮೇಲಿನ ಪೋಕ್ಸೋ ಪ್ರಕರಣದ ತನಿಖೆ ನಡೆಸಿದ ತನಿಖಾಧಿಕಾರಿ ಇಂದು (ಫೆ.25) ಬೆಳಗಾವಿ ಪೊಲೀಸ್ ಆಯುಕ್ತರಿಗೆ ಬಿ ರಿಪೋರ್ಟ್ ಸಲ್ಲಿಕೆ ಮಾಡಿದ್ದಾರೆ.

**ಸಿಪಿಐ ದಿಢೀರ್ ವರ್ಗಾವಣೆ:** ಕರ್ತವ್ಯಲೋಪ ಆರೋಪದ ಮೇಲೆ ಮಾರಿಹಾಳ ಠಾಣೆ ಸಿಪಿಐ ಗುರುರಾಜ್ ಕಲ್ಯಾಣಶೆಟ್ಟಿ ವರ್ಗಾವಣೆಯಾಗಿದ್ದಾರೆ. ಮಾರಿಹಾಳ ಠಾಣೆಯಿಂದ ಸಿಸಿಆರ್‌ಬಿಗೆ ವರ್ಗಾವಣೆ ಮಾಡಿ ಬೆಳಗಾವಿ ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಆದೇಶ ಹೊರಡಿಸಿದ್ದರೆ. ಮಾರಿಹಾಳ ಠಾಣೆಗೆ ಇನ್ಸ್‌ಪೆಕ್ಟರ್ ಮಂಜುನಾಥ್ ನಾಯಕ್‌ರನ್ನು ನಿಯುಕ್ತಿಗೊಳಿಸಲಾಗಿದೆ. ಇನ್ನು, ಸಿಪಿಐ ಗುರುರಾಜ್ ಕಲ್ಯಾಣಶೆಟ್ಟಿ ವಿರುದ್ಧ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಸತೀಶ್ ಜಾರಕಿಹೊಳಿ ಸೇರಿದಂತೆ ಹಲವರು ಆಕ್ರೋಶ ವ್ಯಕ್ತಪಡಿಸಿದ್ದರು.

## ಸತ್ಯಕ್ಕೆ ಸಂದ ಜಯ

ಹೋಗಲಿ ನಾವು ಯಾವುದೇ ತಪ್ಪು ಮಾಡಿಲ್ಲ. ನ್ಯಾಯಾಲಯದಲ್ಲೂ ನ್ಯಾಯ ಸಿಗುವ ವಿಶ್ವಾಸ ವ್ಯಕ್ತಪಡಿಸಿದರು.

ಉದಯಗಿರಿ ಪೊಲೀಸ್ ಠಾಣೆ ಮೇಲೆ ಕಿಡಿಗೇಡಿಗಳು ದಾಂಧಲೆ ನಡೆಸಿದ ಕುರಿತು ಪ್ರತಿಕ್ರಿಯಿಸಿದ ಅವರು ಯಾವುದೋ ಕಿಡಿಗೇಡಿ ವಿವಾದಿತ ಪೋಸ್ಟ್ ಹಾಕಿದ್ದರಿಂದ ಕೆಲವರು ಕಾನೂನು ಕೈಗೆತ್ತಿಕೊಂಡಿದ್ದಾರೆ. ಸರ್ಕಾರ ಇಬ್ಬರ ವಿರುದ್ಧ ಕ್ರಮಕೈಗೊಂಡಿದೆ. ಈ ವಿಚಾರದಲ್ಲಿ ರಾಜಕೀಯ ಮಾಡಲು ಬಿಜೆಪಿ ಹೊರಟಿತ್ತು ಎಂದು ಆರೋಪಿಸಿದರು.

ಸೋಮವಾರ ಬಿಜೆಪಿ ನಡೆಸಿದ ಪ್ರತಿಭಟನೆಯಲ್ಲಿ ಜನರೇ ಇರಲಿಲ್ಲ. ಹೀಗಾಗಿ ಪ್ರತಿಭಟನೆ ಯಶಸ್ವಿಯಾಗಿಲ್ಲ ಎಂದು ಹೇಳಿದರು. ಮುಖ್ಯಮಂತ್ರಿ ಬದಲಾವಣೆ ವಿಚಾರ ಕುರಿತಂತೆ ಬಿಜೆಪಿ ಹೇಳುತ್ತಲೇ ಇದೆ. ಆದರೆ, ಬಿಜೆಪಿಯಲ್ಲೇ ಕಚ್ಚಾಟ ಹೆಚ್ಚಾಗಿದ್ದು, ಯಾವುದೇ ಕಾರಣಕ್ಕೂ ಕಾಂಗ್ರೆಸ್‌ನಲ್ಲಿ ಸಿಎಂ ಬದಲಾವಣೆ ಆಗಲ್ಲ. ಸಿದ್ದರಾಮಯ್ಯ ಪರ ಹೈಕಮಾಂಡ್ ನಿಂತಿದೆ. ಹೀಗಾಗಿ ಮುಖ್ಯಮಂತ್ರಿಗಳ ಬದಲಾವಣೆ ಇಲ್ಲ ಎಂದು ಸ್ಪಷ್ಟಪಡಿಸಿದರು.

## ಪಾಲಿಸಲು ಸಚಿವರ ಮನವಿ

ನಿನ್ನೆಯ ಸಮಸ್ಯೆಯಲ್ಲ, ಸಾವಿರಾರು ವರ್ಷಗಳಿಂದಲೂ ಇದೆ. ಅರಣ್ಯ ಪ್ರದೇಶ ಕ್ಷೀಣಿಸುತ್ತಿದ್ದು, ವನ್ಯಜೀವಿಗಳ ಸಂಖ್ಯೆಯಲ್ಲಿ ಹೆಚ್ಚಳ ಸಮಸ್ಯೆ ಉಲ್ಬಣವಾಗುವಂತೆ ಮಾಡಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

**2024–25ನೇ ಸಾಲಿನಲ್ಲಿ 203 ಕಿ.ಮೀ. ರೈಲ್ವೆ ಬ್ಯಾರಿಕೇಡ್:**

ರಾಜ್ಯ ಸರ್ಕಾರ ವನ್ಯಜೀವಿ– ಮಾನವ ಸಂಘರ್ಷ ನಿಯಂತ್ರಿಸಲು ಟೆಂಟಕಲ್ ಫೆನ್ಸಿಂಗ್, ಸೌರ ಬೇಲಿ, ಆನೆ ಕಂದಕ ನಿರ್ಮಿಸಿ, ನಿರ್ವಹಿಸುತ್ತಿರುವುದರ ಜೊತೆಗೆ ರೈಲ್ವೆ ಬ್ಯಾರಿಕೇಡ್ ಸಹ ಹಾಕುತ್ತಿದೆ. 2024–25ನೇ ಸಾಲಿನಲ್ಲಿ 78.917 ಕಿ.ಮೀ ರೈಲ್ವೆ ಬ್ಯಾರಿಕೇಡ್ ಕಾಮಗಾರಿ ಪೂರ್ಣಗೊಂಡಿದ್ದು, 41.87 ಕಿ.ಮೀ. ಕಾಮಗಾರಿ ಪ್ರಗತಿಯಲ್ಲಿದೆ. ಇನ್ನೂ 103 ಕಿ.ಮೀ. ಗುರಿ ನಿಗದಿ ಮಾಡಲಾಗಿದ್ದು, ಮಾರ್ಚ್ 31ರೊಳಗೆ ಈ ಕಾಮಗಾರಿ ಪ್ರಕ್ರಿಯೆ ಆರಂಭವಾಗಲಿದೆ ಎಂದು ಈಶ್ವರ ಖಂಡ್ರೆ ತಿಳಿಸಿದ್ದಾರೆ.

ದೇಶದಲ್ಲಿಯೇ ಅತಿ ಹೆಚ್ಚು 6395 ಆನೆಗಳು ರಾಜ್ಯದಲ್ಲಿವೆ, ಸರ್ಕಾರ ಪುಂಡಾನೆ ಹಾವಳಿ ತಡೆಗೆ ಮಾರ್ಗೋಪಾಯ ಕಂಡುಹಿಡಿಯಲು ನೆರೆ ರಾಜ್ಯಗಳ ಸಚಿವರೊಂದಿಗೆ ಸಭೆ ನಡಸಿದೆ, ಅಂತಾರಾಷ್ಟ್ರೀಯ ಸಮಾವೇಶ ನಡೆಸಿದೆ. ತಜ್ಞರ ಸಮಿತಿ ರಚಿಸಿ ಅಧ್ಯಯನ ನಡೆಸುತ್ತಿದೆ. ಆನೆ ಕಾರ್ಯಪಡೆಯನ್ನೂ ರಚಿಸಿದೆ. ಸಾರ್ವಜನಿಕರಿಗೆ ಸಕಾಲದಲ್ಲಿ ಆನೆಗಳ ಓಡಾಟದ ಬಗ್ಗೆ ಮಾಹಿತಿ ನೀಡುವ ಕಾರ್ಯ ಮಾಡುತ್ತಿದೆ ಎಂದು ಈಶ್ವರ ಖಂಡ್ರೆ ತಿಳಿಸಿದ್ದಾರೆ.

**ಆನೆ ಧಾಮ ನಿರ್ಮಾಣ:**

ಕೊಡಗು, ಹಾಸನ, ಚಿಕ್ಕಮಗಳೂರು ಸುತ್ತಮುತ್ತ ಕಾಡಿನಿಂದ ಹೊರಬಂದು ಗುಂಪಾಗಿ ಸಂಚರಿಸುವ ಕೆಲವು ಆನೆಗಳಿಂದ ಸಮಸ್ಯೆ ಹೆಚ್ಚಾಗಿದೆ. ಹೀಗಾಗಿ 2ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಭದ್ರಾ ಅಭಯಾರಣ್ಯದಲ್ಲಿ ಆನೆ ಧಾಮ ನಿರ್ಮಿಸಲು ಯೋಜಿಸಲಾಗಿದೆ. ಇಲ್ಲಿ ಆನೆಗಳಿಗೆ ಅಗತ್ಯ ಆಹಾರ, ನೀರು ಲಭ್ಯವಾಗುವಂತೆ ಕ್ರಮ ವಹಿಸಲು ಸೂಚಿಸಲಾಗಿದೆ. ಕಾಡಿನ ಹೊರಗೇ ಓಡಾಡುವ 150ಕ್ಕೂ ಹೆಚ್ಚು ಆನೆಗಳನ್ನು ಗುರುತಿಸಲಾಗಿದ್ದು, ಮಿನಿ ಖೆಡ್ಡಾ ಕಾರ್ಯಾಚರಣೆ ರೂಪದಲ್ಲಿ ಆನೆಗಳನ್ನು ಧಾಮಕ್ಕೆ ಕಳಿಸಬೇಕಾಗುತ್ತದೆ. ಆದರೆ ಇದಕ್ಕೆ ಕಾಲಾವಕಾಶ ಬೇಕಾಗುತ್ತದೆ ಎಂದು ಈಶ್ವರ ಖಂಡ್ರೆ ತಿಳಿಸಿದ್ದರೆ.

**ಸಹಬಾಳ್ವೆ ಅನಿವಾರ್ಯ:**

ಜನಸಂಖ್ಯೆ ಹೆಚ್ಚಿದಂತೆಲ್ಲಾ ಕಾಡಿನಂಚಿನವರೆಗೆ ವಸತಿ ಪ್ರದೇಶಗಳ ವಿಸ್ತರಣೆ ಆಗಿದೆ. ಕಾಡಿನ ಅಂಚಿನಲ್ಲೇ ಕೃಷಿ ಚಟುವಟಿಕೆ ನಡೆಯುತ್ತದೆ. ಕಾಡಿನಂಚಿನ ಕೆರೆಗಳನ್ನು ತುಂಬಿಸುವ ಕಾರ್ಯವನ್ನು ಸರ್ಕಾರ ಮಾಡಿದೆ. ಹೀಗಾಗಿ ಆನೆಗಳು ಬಾಳೆ, ಹಲಸು, ಭತ್ತ ಇತ್ಯಾದಿ ಫಸಲು ತಿನ್ನಲು ನೀರು ಕುಡಿಯಲು ಊರಿಗೆ ಬರುತ್ತಿವೆ ಎಂದು ತಜ್ಞರು ಹೇಳುತ್ತಾರೆ. ಆದಾಗ್ಯೂ, ಆನೆಗಳು ನಾಡಿಗೆ ಬರಲು ಕಾರಣವೇನು ಎಂಬ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸೂಚಿಸಲಾಗಿದೆ. ಮಾನವ– ಆನೆ ಸಂಘರ್ಷ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದು ಈಶ್ವರ ಖಂಡ್ರೆ ತಿಳಿಸಿದ್ದಾರೆ.

## ಕನ್ನಡ ಭಾಷೆಯೇ ಸಾರ್ವಭೌಮ

ಅವರನ್ನು ಜೈಲಿನಲ್ಲಿಡಬೇಕು. ಅದೇ ರೀತಿ ಅವರನ್ನು ಕರ್ನಾಟಕದಿಂದ ಗಡಿಪಾರು ಮಾಡಬೇಕು“ ಎಂದು ಒತ್ತಾಯಿಸಿದರು."ನೀವು ಕಣ್ಣೀರು ಹಾಕಬೇಡಿ ಎಂದು ಕಂಡಕ್ಟರ್ ಅವರಿಗೆ ಹೇಳಿದ್ದೇನೆ. ಸರ್ಕಾರ ಅವರನ್ನುಹೇಗೆ ನಡೆಸಿಕೊಳ್ಳುತ್ತದೆಯೋ ಗೊತ್ತಿಲ್ಲ. ಆದರೆ, ಇಲ್ಲಿ ಅವರಿಗೆ ಚಿಕಿತ್ಸೆ ಸರಿ ಇಲ್ಲ ಎಂದಾದರೆ ಬೆಂಗಳೂರಿನ ಒಳ್ಳೆಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸುತ್ತೇವೆ. ಅದರ ಸಂಪೂರ್ಣ ವೆಚ್ಚವನ್ನು ಕರವೇ ಭರಿಸಲಿದೆ. ಚಾಲಕ ತಮ್ಮ ಮೇಲೂ ಹಲ್ಲೆ ಮಾಡಿದ್ದಾರೆ ಎಂದು ತಿಳಿಸಿದ್ದಾರೆ. ತಪ್ಪಿತಸ್ಥರ ವಿರುದ್ಧ ಪೊಲೀಸರು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಇದಕ್ಕೂ ಮುನ್ನ ಬೆಳಗಾವಿ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, "ಎಂಇಎಸ್ ಎಂಥ ಸಂಘಟನೆ ಅಂತಾ ಇಡೀ ದೇಶಕ್ಕೆ ಗೊತ್ತಿದೆ ಎಂದು ಹರಿಹಾಯ್ದರು. "ಒಬ್ಬ ಚಾಲಕ, ನಿರ್ವಾಹಕರನ್ನು ಬಸ್‌ನಿಂದ ಕೆಳಗಿಳಿಸಿ ಬಣ್ಣ ಹಾಕಿ, ಅವರಿಗೆ ಹಾರ ಹಾಕಿ ಜೈ ಮಹಾರಾಷ್ಟ್ರ ಅಂತಾ ಘೋಷಣೆ ಕೂಗಿಸುತ್ತೀರಿ. ಇಡೀ ಬೆಳಗಾವಿಯಲ್ಲಿರುವ ಪ್ರತಿಯೊಬ್ಬ ಮರಾಠಿಗನ ಬಾಯಿಯಿಂದಲೂ ಕರ್ನಾಟಕಕ್ಕೆ ಜೈ ಎನಿಸುವ ಕಾಲ ಬೇಗ ಬರುತ್ತದೆ. ಇದನ್ನೆಲ್ಲ ಬಿಟ್ಟು ಬಿಡಿ. ಬೆಳಗಾವಿಯಲ್ಲಿ ಎಂಇಎಸ್ ಸಂಪೂರ್ಣ ಅಂತ್ಯವಾಗಿದೆ. ಆ ಹೊಟ್ಟೆ ಉರಿಗೆ ಇಂಥ ಆಟ ಶುರು ಮಾಡಿದ್ದಾರೆ. ಬೆಳಗಾವಿ ಅಷ್ಟೇ ಅಲ್ಲದೇ ಇಡೀ ಕರ್ನಾಟಕದಲ್ಲಿ ಎಂಇಎಸ್ ಇಲ್ಲದಂತೆ ಮಾಡೋವರೆಗೂ ಕರವೇ ಹೋರಾಟ ಬಿಡುವುದಿಲ್ಲ" ಎಂದು ಎಚ್ಚರಿಸಿದರು.

ನಾನು ಬೆಳಗಾವಿಗೆ ಬಂದಷ್ಟು ಯಾವ ಸಚಿವರು ಬಂದಿಲ್ಲ: "ಇಡೀ ಕರ್ನಾಟಕದಲ್ಲಿ ಎಲ್ಲ ಕನ್ನಡಪರ ಹೋರಾಟಗಾರರ ಮೇಲಿನ ಕೇಸ್ ತೆಗೆಯುವಂತೆ ಹೋರಾಡುತ್ತಿರುವುದೇ ಕರವೇ. ಬೆಳಗಾವಿಗೆ ನಾನು ಬಂದಷ್ಟು ಯಾವ ಕರ್ನಾಟಕದ ಮುಖ್ಯಮಂತ್ರಿ, ಸಚಿವರೂ ಬಂದಿಲ್ಲ. ಬೆಳಗಾವಿ ಸಮಸ್ಯೆಗಳ ಬಗ್ಗೆ ಧ್ವನಿ ಎತ್ತಿ, ಸರ್ಕಾರದ ಮೇಲೆ ನನ್ನಷ್ಟು ಒತ್ತಡ ಬೇರೆ ಯಾರೂ ಹಾಕಿಲ್ಲ. ರಾಜ್ಯದ ಮುಖ್ಯಮಂತ್ರಿ ಒಳಗೊಂಡಂತೆ ಈ ಭಾಗದ ಮಂತ್ರಿಗಳನ್ನು ಒಳಗೊಂಡು ಯಾರೂ ಉಸಿರು ಬಿಡದೇ ಇದ್ದಾಗ ಮಾತಾಡಿದ್ದು, ಹೋರಾಟ ಮಾಡಿದ್ದು ಕರವೇ ಮಾತ್ರ" ಎಂದು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದರು.

ರಾಜ್ಯದಲ್ಲಿ ಆಡಳಿತ ಭಾಷೆ ಕನ್ನಡ, ಆಡಳಿತಾತ್ಮಕ ವ್ಯವಹಾರ ಕನ್ನಡದಲ್ಲೇ ಇರಲಿ: "ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ. ಯಾವುದೋ ರಾಜ್ಯದಿಂದ ಬಂದು ಇಲ್ಲಿ ಕೆಲಸ ಮಾಡುತ್ತಿರುವ ಜಿಲ್ಲಾಧಿಕಾರಿ ಇಲ್ಲಿಯ ಆಡಳಿತ ಭಾಷೆ ಕನ್ನಡ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು. ಯಾವುದೋ ರಾಜ್ಯದಿಂದ ಬಂದು ಇಲ್ಲಿ ಕರ್ನಾಟಕದ ಬೆಳಗಾವಿ ಗಡಿ ವಿಚಾರ ಸುಪ್ರೀಂಕೋರ್ಟ್‌ನಲ್ಲಿ ಇರುವಾಗ ಎಂಇಎಸ್‌ನವರು ಮರಾಠಿಯಲ್ಲಿ ದಾಖಲೆ ಕೊಟ್ಟರೆ ನಾಳೆ ಕರ್ನಾಟಕಕ್ಕೆ ಭಾರಿ ತೊಂದರೆ ಆಗುತ್ತದೆ. ನಿಮ್ಮ ಎಲ್ಲ ವ್ಯವಹಾರ, ಕಾಗದಪತ್ರಗಳನ್ನು ಕರ್ನಾಟಕದ ನೆಲದಲ್ಲಿ ನೀವು ಕನ್ನಡದಲ್ಲೆ ಕೊಡಬೇಕು. ಅವರು ಮರಾಠಿಯಲ್ಲಿ ಕೇಳುತ್ತಾರೆ, ಮತ್ತೊಬ್ಬರು ಮತ್ತೊಂದು ಭಾಷೆಯಲ್ಲಿ ಕೇಳುತ್ತಾರೆ ಎಂದರೆ ಜಿಲ್ಲಾಧಿಕಾರಿ ಕೊಡಬಾರದು" ಎಂದು ಒತ್ತಾಯಿಸಿದರು.

"ಇಲ್ಲ ನಾನು ಕೊಡುತ್ತೇನೆ ಅನ್ನುವುದಾದರೆ ಇಲ್ಲಿ ಕೆಲಸ ಮಾಡುವುದು ಸರಿಯಲ್ಲ. ನಿಮ್ಮ ರಾಜ್ಯಕ್ಕೆ ವಾಪಸ್ ಹೋಗುವವರೆಗೂ ಕರವೇ ಹೋರಾಟ ಮಾಡಲಿದೆ. ಅದು ಆಗೋದು ಬೇಡ ಎಂದರೆ ಕನ್ನಡದಲ್ಲಿ ಆಡಳಿತ ನಡೆಸಬೇಕು. ಅದನ್ನು ಬಿಟ್ಟು ಮರಾಠಿಗರನ್ನು ಓಲೈಸಲು ಮುಂದಾದರೆ ಜಿಲ್ಲಾಧಿಕಾರಿ ವಿರುದ್ಧ ಇಡೀ ಕರ್ನಾಟಕದಲ್ಲಿ ಕರವೇ ಹೋರಾಟ ಮಾಡಲಿದೆ" ಎಂದು ಎಚ್ಚರಿಸಿದರು.

## ಭಾರತ ಶೇ.88ರಷ್ಟು ಸ್ವಾವಲಂಬನೆ

ಇತರ ಸಂಸ್ಥೆಗಳು ಈ ನಿರ್ಣಾಯಕ ಕ್ಷೇತ್ರಗಳಲ್ಲಿ ಸಂಶೋಧನೆ ಮತ್ತು ಪ್ರಗತಿಗೆ ಮುಂದಾಗಬೇಕು ಎಂದು ಅವರು ಕರೆ ನೀಡಿದರು. ಐಐಟಿ (ಪ್ರಾರಂಭಿಸಿ, ಸುಧಾರಿಸಿ ಮತ್ತು ಪರಿವರ್ತಿಸಿ) ಮಂತ್ರವನ್ನು ಅಳವಡಿಸಿಕೊಳ್ಳುವ ಮೂಲಕ 2047 ರ ವೇಳೆಗೆ ಅಭಿವೃದ್ಧಿ ಹೊಂದಿದ ದೇಶವಾಗಬೇಕೆಂಬ ಭಾರತದ ಆಕಾಂಕ್ಷೆಯನ್ನು ಸುಗಮಗೊಳಿಸಲು ತಂತ್ರಜ್ಞಾನ ನಾವೀನ್ಯತೆಯನ್ನು ಅಳವಡಿಸಿಕೊಳ್ಳುವಂತೆ ಅವರು ವಿದ್ಯಾರ್ಥಿಗಳನ್ನು ಒತ್ತಾಯಿಸಿದರು.

## ನಾನು ಆಕಾಂಕ್ಷಿಯಲ್ಲ

ಪುಸ್ತಕ ಹಿಡಿದು ಉದ್ದುದ್ದ ಭಾಷಣ ಮಾಡುತ್ತಾರೆ. ಆದರೆ ರಾಹುಲ್ ಗಾಂಧಿ ಗುರುಗಳಾದ ಸ್ಯಾಮ್ ಪಿತ್ರೋಡ ಹಗರಣ ಬೆಳಕಿಗೆ ಬಂದಿದೆ. ಈ ಕುರಿತು ಸಚಿವ ಈಶ್ವರ್ ಖಂಡ್ರೆ ಏನ್ ಮಾಡ್ತಾರೆ ? ಕಾಂಗ್ರೆಸ್ ಪಕ್ಷ ಏನು ಮಾಡಲಿದೆ ಕಾದು ನೋಡಬೇಕಿದೆ ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದರು.

ಉದಯಗಿರಿ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಗೃಹಸಚಿವ ಪರಮೇಶ್ವರ್ ಅವರು ಅಸಹಾಯಕರಾಗಿ ಹೇಳಿಕೆ ನೀಡಿದ್ದಾರೆ. ಸೋಶಿಷಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿದ್ದಕ್ಕೆ ಯುವಕನ ಗಡಿಪಾರಿಗೆ ಚಿಂತನೆ ಮಾಡುತ್ತಿದ್ದಾರೆ. ಅಂತಹ ಗಡಿಪಾರು ಮಾಡುವುದಾದರೆ ನಮ್ಮ ಪಕ್ಷದ ಪೇಜ್ ಅಲ್ಲೂ ಹಲವು ಪೋಸ್ಟ್ ಹಾಕುತ್ತಾರೆ. ನಿತ್ಯವೂ ಪಕ್ಷದ ವಿರುದ್ಧ ಕ್ರಮ ಆಗುತ್ತೆ. ಉದಯಗಿರಿ ಪ್ರಕರಣ ಪೂರ್ವನಿಯೋಜಿತ ಕೃತ್ಯ ಎಂದು ನಿಖಿಲ್ ಆರೋಪಿಸಿದರು.

ಮುಡಾ ಹಗರಣ ಸಂಬಂಧ, ಲೋಕಾಯುಕ್ತ ತರಾತುರಿಯಲ್ಲಿ ಬಿ ರಿಪೋರ್ಟ್ ಹಾಕಿದೆ. ಅಂದಿನ ಜಿಲ್ಲಾಧಿಕಾರಿ, ಇಂದಿನ ರಾಯಚೂರು ಎಂಪಿ ಕುಮಾರ್ ನಾಯ್ಕ್ ನಿರ್ಲಕ್ಷ್ಯ ಎಂದು ಹೇಳುತ್ತಿದೆ. ಅಧಿಕಾರಿಗಳ ಮೇಲೆ ಲೋಕಾಯುಕ್ತ ಗೂಬೆ ಕೂರಿಸುತ್ತಿದೆ. ಸ್ಥಳ ಪರಿಶೀಲನೆ ನಡೆಸದೆ ಲೋಪ ಎಸಗಲು ಅದರ ಹಿಂದಿರುವ ವ್ಯಕ್ತಿಗಳು ಕಾರಣ ಅಲ್ಲವೇ? ಆ ಪ್ರಭಾವ ಬೀರಿರುವ ವ್ಯಕ್ತಿಗಳು ಯಾರು? ಆ ರಾಜಕಾರಣಿಗಳು ಯಾರು? ಎಂದು ನಿಖಿಲ್ ಕಿಡಿಕಾರಿದರು.

ಹಾಗೆಯೇ ನಮ್ಮ ಬಿಡದಿಯ ತೋಟದ ಮನೆ ವಿಚಾರ ಹಲವು ಬಾರಿ ಚರ್ಚೆಗೆ ಕಾರಣವಾಗಿದೆ. 2013 ರಿಂದ ನಿರಂತರ ತನಿಖೆ ಮಾಡಿದ್ದಾರ. 1985 ರಲ್ಲಿ ಕುಮಾರಸ್ವಾಮಿ ಅವರು ಖರೀದಿಸಿದ ಭೂಮಿ. ಎಚ್ ಡಿಕೆ ಇಂತಹ ಭೂಮಿ ಬೇಕೆಂದು ಎಂದೂ ಹೇಳಿದವರಲ್ಲ. ಬಿಡದಿಯಲ್ಲಿ ಯಾವುದೇ ಬೃಹತ್ ಬಿಲ್ಡಿಂಗ್ ಕಟ್ಟಿ ವ್ಯವಹಾರ ಮಾಡುತ್ತಿಲ್ಲ. ದೇವೇಗೌಡರು ರಾಮನಗರದಲ್ಲಿ ಇರಬೇಕೆಂದು ರೈತರು ನೀಡಿದ ಜನರು ಕಾನೂನು ತನಿಖೆ ಎದುರಿಸಲು ನಾವು ಸಿದ್ಧ. ಎಲ್ಲದ್ದಕ್ಕೂ ದೇವರಿದ್ದಾನೆ, ಮುಂದಿನ ದಿನಗಳಲ್ಲಿ ಉತ್ತರ ಸಿಗಲಿದೆ ಎಂದು ನಿಖಿಲ್ ಕುಮಾರಸ್ವಾಮಿ ತಿಳಿಸಿದರು.

## ಬಿಡೋದಿಲ್ಲ

ಅಥವಾ ಬೇರೆ ರಾಜ್ಯದಲ್ಲಿದ್ದೀವೋ? ಎಂದು ಪ್ರಶ್ನಿಸಿದರು.

ಮರಾಠೀ ಪುಂಡರು ಕನ್ನಡಿಗರ ಸ್ವಾಭಿಮಾನ ಹತ್ತಿಕ್ಕಲು ಬಿಡೋದಿಲ್ಲ, ಕಂಡಕ್ಟರ್ ವಿರುದ್ಧ ಹಾಕಿರುವ ಕೇಸನ್ನು ವಾಪಸ್ಸು ಪಡೆಯಬೇಕು ಮತ್ತು ಅದನ್ನು ಹಾಕಿದ ಇನ್ಸ್‌ಪೆಕ್ಟರ್‌ನನ್ನು ಸಸ್ಪೆಂಡ್ ಮಾಡಬೇಕು ಎಂದು ಹೇಳಿದರು.

# ದಲ್ಲಾಳಿಗಳಿಗೆ ಅವಕಾಶ ನೀಡಬೇಡಿ: ಶಾಸಕ ಬಿ.ಎನ್.ರವಿಕುಮಾರ್

**ಶಿಡ್ಲಘಟ್ಟ:** ಇ-ಖಾತೆ ವಿಷಯಕ್ಕೆ ಸಂಬಂಧಿಸಿದಂತೆ ಮುಸ್ಲಿಂರು ಹೆಚ್ಚಿರುವ ವಾರ್ಡ್‌ಗಳಲ್ಲಿ ಉರ್ದುವಿನಲ್ಲಿ ಉಳಿದಂತೆ ಕನ್ನಡದಲ್ಲಿ ಕರಪತ್ರ ಮುದ್ರಿಸಿ ಹಂಚಿ ವ್ಯಾಪಕ ಪ್ರಚಾರ ಮಾಡಿ ಯಾವುದೇ ಕಾರಣಕ್ಕೂ ದಲ್ಲಾಳಿಗಳಿಗೆ ಅವಕಾಶ ನೀಡಬಾರದು ಅಂತದ್ದೇನಾದರೂ ಕಂಡು ಬಂದರೆ ನಿಮ್ಮ ಮೇಲೆ ಕ್ರಿಮಿನಲ್ ಕೇಸನ್ನು ದಾಖಲಿಸಬೇಕಾಗುತ್ತದೆ ಎಂದು ಶಾಸಕ ಬಿ.ಎನ್. ರವಿಕುಮಾರ್ ಅವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ನಗರದ ನಗರಸಭೆ ಕಛೇರಿಯಲ್ಲಿ ಅಧ್ಯಕ್ಷರಾದ ಎಂ.ವಿ.ವೆಂಟಸ್ವಾಮಿ ಅಧ್ಯಕ್ಷತೆಯಲ್ಲಿ ಕಚೇರಿಯ ಸಭಾಂಗಣದಲ್ಲಿ ನಡೆದ ಇ-ಖಾತೆ ಅಭಿಯಾನ ಹಾಗೂ ಆಯ-ವ್ಯಯ ಮಂಡನೆ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ನಗರದಲ್ಲಿ ನಿಮ್ಮ ಸರ್ವೇ ಪ್ರಕಾರ 6600 ಆದರೆ ನನ್ನ ಪ್ರಕಾರ 7600 ಅನಧಿಕೃತ ಆಸ್ತಿಗಳು ಇವೆ ಎನ್ನುವ ಅಂದಾಜಿಸದೇ, ಪ್ರತಿ ಐದು ಅಥವಾ ಆರು ವಾರ್ಡುಗಳಿಗೆ ಒಂದು ತಂಡವನ್ನು ರಚಿಸಿ. ಆಯಾ ವಾರ್ಡಿನಲ್ಲಿ ವಾರ್ಡಿನ ಸದಸ್ಯರ ಜತೆಗಿಟ್ಟುಕೊಂಡು ಸಂಬಂಧಿಸಿದ ಆಸ್ತಿ ಬಳಿ ತೆರಳಬೇಕು. ಆಸ್ತಿಯ ಅಳತೆ ಮಾಡಿ ಚೆಕ್ಕು ಬಂಧಿ ಗುರ್ತಿಸಿ ಅಕ್ಕ ಪಕ್ಕದವರ ಮಹಜರು ಪಡೆದು ನಂತರ 8 ದಿನಗಳ ಒಳಗೆ ಇ-ಖಾತೆ ದಾಖಲೆಗಳನ್ನು ನೀಡಬೇಕು ಎಂದು ಪೌರಾಯುಕ್ತರಿಗೆ ಸೂಚಿಸಿದರು.

ಒಂದೇ ಒಂದು ಪೈಸೆ ಹಣದ ಕ್ಯಾಷನ್ನು ಯಾರು ಕೂಡ ಸ್ವೀಕರಿಸಬಾರದು, ಬ್ಯಾಂಕ್ ಚಲನ್ ಮೂಲಕವೇ ಕಂದಾಯ ಶುಲ್ಕವನ್ನು ಸ್ವೀಕರಿಸಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ನಗರಸಭೆಯಲ್ಲಿ 2025-26ನೇ ಸಾಲಿನ ಆಯ-ವ್ಯಯ ಪೂರ್ವಭಾವಿ ಸಭೆ ಹಾಗೂ ಇ-ಖಾತೆ ಅಭಿಯಾನದ ಸಭೆಯನ್ನು ಕರೆದಿದ್ದು, ಇ-ಖಾತೆ ನೀಡಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಲಾಯಿತು,ಆದರೆ ಆಯ-ವ್ಯಯದ ಬಗ್ಗೆ ಚರ್ಚೆಯೆ ನಡೆಯದೆ ಆಯ-ವ್ಯಯ ಸಭೆ ಗೊಂದಲದಲ್ಲೆ ಮುಗಿಯಿತು.

ಶಾಸಕರಾದ ಬಿ.ಎನ್.ರವಿಕುಮಾರ್, ನಗರಸಭೆ ಅಧ್ಯಕ್ಷ,ವೆಂಕಟಸ್ವಾಮಿ, ಉಪಾಧ್ಯಕ್ಷೆ, ಸದಸ್ಯರು, ಅಧಿಕಾರಿಗಳು ಭಾಗವಹಿಸಿದ್ದರಾದರೂ ಇ-ಖಾತೆ ಅಭಿಯಾನ ಕುರಿತು ಚರ್ಚೆಗಳು ನಡೆದು ಇ-ಖಾತೆ ಅಭಿಯಾನವನ್ನು ಸುಗಮವಾಗಿ ನಡೆಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಆದರೆ ಆಯ-ವ್ಯಯದ ವಿಷಯ ಬಂದಾಗ ಕಳೆದ ವರ್ಷ 2 ಕೋಟಿಯ ಉಳಿತಾಯ ಬಜೆಟ್



ಮಂಡಿಸಲಾಗಿತ್ತು,ಆದರೆ ಪೌರಕಾರ್ಮಿಕರಿಗೆ ಸರಿಯಾಗಿ ಸಂಬಳ ಕೂಡ ನೀಡಲಿಲ್ಲ, ಮೂಲ ಸೌಕರ್ಯಗಳನ್ನು ಕೂಡ ಕಲ್ಪಿಸಲಾಗಿಲ್ಲ, ಹಾಗಾಗಿ ಕಳೆದ ವರ್ಷದ ಬಜೆಟ್ ಮೇಲೆ ಚರ್ಚೆಗಳು ನಡೆಯಲಿ, ಅದರಲ್ಲಿನ ತಪ್ಪು ಒಪ್ಪುಗಳನ್ನು ತಿದ್ದಿಕೊಂಡು ಈ ಸಾಲಿನ ಆಯ-ವ್ಯಯದ ಬಗ್ಗೆ ಚರ್ಚಿಸೋಣ ಎಂದು ಸದಸ್ಯ ಅಪ್ಸರ್‌ಪಾಷ ಸಭೆಯಲ್ಲಿ ತಿಳಿಸಿದರು.

ಪೌರಾಯುಕ್ತ ಮಂಜುನಾಥ್ ಮಾತನಾಡಿ 2017ರಿಂದ ಪೌರಕಾರ್ಮಿಕರಿಗೆ ಸಾಕಷ್ಟು ಸಂಬಳ ಬಾಕಿ ಇತ್ತು, ಅದೆಲ್ಲವನ್ನೂ ನಾನು ಹಂತ ಹಂತವಾಗಿ ತೀರಿಸಿಕೊಂಡು ಬಂದಿದ್ದೇನೆ, ನನ್ನ ಅವಧಿಯಲ್ಲಿ ಯಾವುದೆ ಸಾಲ ಕೂಡ ಮಾಡಿಲ್ಲ ಎಂದು ವಿವರಿಸತೊಡಗಿದರು.

ಆದರೆ ಮತ್ತೆ ಮದ್ಯ ಪ್ರವೇಶಿಸಿದ ಅಪ್ಸರ್‌ಪಾಷ, ಅದೆಲ್ಲವನ್ನೂ ದಾಖಲೆ ಸಮೇತ ಸಭೆಯಲ್ಲಿಡಿ ಚರ್ಚಿಸೋಣ ನಂತರ ಆಯ ವ್ಯಯದ ಬಗ್ಗೆ ಸಲಹೆ ಸೂಚನೆಗಳನ್ನು ಸ್ವೀಕರಿಸುವ ಕೆಲಸ ಆಗಲಿ, ಅದು ಬಿಟ್ಟು ಅಷ್ಟು ಕೋಟಿ ಇಷ್ಟು ಕೋಟಿ ಉಳಿತಾಯ ಎಂದು ಬಜೆಟ್ ಮಂಡಿಸಿ ನಂತರ ಯಾವ ಕೆಲಸಕ್ಕೂ ಹಣ ಇಲ್ಲ ಎನ್ನುವ ಉತ್ತರ ಕೊಡಬೇಡಿ ಎಂದರು.

ಅಷ್ಟರಲ್ಲಿ ಸದಸ್ಯ ಲಕ್ಷ್ಮಣ್, ಮೌಲಾ ಇನ್ನಿತರೆ ಸದಸ್ಯರು ನಗರದಲ್ಲಿ ಅನಧಿಕೃತ ಕಟ್ಟಡಗಳು ಸಾಕಷ್ಟು ನಿರ್ಮಾಣವಾಗುತ್ತಿವೆ, ಪರವಾನಗಿ ಪಡೆಯದೆ ಕಟ್ಟಡಗಳನ್ನು ಕಟ್ಟುತ್ತಿದ್ದಾರೆ, ನಗರಸಭೆ ನಿವೇಶನಗಳನ್ನು ಒತ್ತುವರಿ ಮಾಡಿಕೊಂಡಿದ್ದರೂ ನೀವು ಏನೂ ಮಾಡುತ್ತಿಲ್ಲ ಎಂದು ದೂರಿದರು.

ನಾವೇ ಹೇಳಿದರೂ ನೀವು ಕಾಟಾಚಾರಕ್ಕೆ ನೋಟೀಸ್ ಕೊಟ್ಟು ನಂತರ ಅವರೊಂದಿಗೆ ಕಮಿಂಟ್‌ಮೆಂಟ್ ಆಗಿ ಸುಮ್ಮನಾಗಿ ಬಿಡುತ್ತೀರಿ, ನಾವು ಅವರಿಗೆ ಶತೃಗಳಾಗುತ್ತಿದ್ದೇವೆ ಎಂದು ಗಂಭೀರ ಆರೋಪ ಮಾಡಿದರು.

ಈ ಜಟಾಪಟಿ ಮಾತುಕತೆ ಮದ್ಯೆ ಆಯ-ವ್ಯಯದ ಬಗ್ಗೆ ಚರ್ಚೆಗಳು ನಡೆಯದೆ ವಿಷಯಾಂತರವಾಯಿತು. ಆಯ-ವ್ಯಯದ ತಯಾರಿಕೆಗಾಗಿ ಮತ್ತೊಂದು ಸಭೆ ಕರೆಯಿರಿ ಎಂದು ಕೆಲವು ಸದಸ್ಯರು ಸಭೆಯಲ್ಲಿ ಹೇಳಿದರಾದರೂ ಆಯ-ವ್ಯಯ ಪೂರ್ವಭಾವಿ ಸಭೆ ಮುಗಿಯಿತಾ ಅಥವಾ ಮುಂದೊಂದು ದಿನ ದಿನಾಂಕವನ್ನು ಗೊತ್ತುಪಡಿಸುತ್ತಾರಾ ಗೊತ್ತಾಗಲಿಲ್ಲ.

ಈ ಸಂದರ್ಭದಲ್ಲಿ ಅದ್ಯಕ್ಷರಾದ ಎಂ.ವಿ.ವೆಂಕಟಸ್ವಾಮಿ, ಉಪಾಧ್ಯಕ್ಷೆಯಾದ ರೂಪ ನವೀನ್,ಸದಸ್ಯರಾದ ಅನಿಲ್ ಕುಮಾರ್, ಕೃಷ್ಣಮೂರ್ತಿ, ನಾರಾಯಣಸ್ವಾಮಿ, ಮುನಿರಾಜು ಮುಂತಾದವರು ಹಾಜರಿದ್ದರು.

# ಅತ್ಯಾಚಾರ ಆರೋಪಿಗಳನ್ನು ಬಂಧಿಸಿ

**ಬಳ್ಳಾರಿ:** ನಗರದಲ್ಲಿ ಕರ್ನಾಟಕ ಎಸ್ ಸಿ/ಎಸ್ ಟಿ ಅಲೆಮಾರಿ ಬುಡಕಟ್ಟು ಮಹಾಸಭಾದ ಬಳ್ಳಾರಿ ಜಿಲ್ಲಾ ಘಟಕ ಹಾಗೂ ಪ್ರಜಾಪ್ರವರ್ತನ ವೇದಿಕೆ ಬಳ್ಳಾರಿ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾಧ್ಯಕ್ಷರಾದ ಶಿವಕುಮಾರ್ ಮತ್ತು ಜಿಲ್ಲಾಧ್ಯಕ್ಷರಾದ ಆನಂದ್ ಕುಮಾರ್ ಕುಡುತಿನಿ ಇವರುಗಳು ಸೇರಿ ಪದಾಧಿಕಾರಿಗಳ ಸಮ್ಮುಖದಲ್ಲಿ ನಗರದ ನಗರೂರು ನಾರಾಯಣರಾವ್ ಪಾರ್ಕ್‌ನಿಂದ ಬಳ್ಳಾರಿ ಜಿಲ್ಲಾಧಿಕಾರಿಗಳ ಕಚೇರಿ ಅವರಿಗೆ ಪಾದಯಾತ್ರೆ ಮೂಲಕ ಪ್ರತಿಭಟನಾ ಮೆರವಣಿಗೆಯನ್ನು ಹಮ್ಮಿಕೊಂಡು ಅಲೆಮಾರಿ ಸಮುದಾಯದಲ್ಲಿ ಮೃತಪಟ್ಟ ಇಬ್ಬರು ಹೆಣ್ಣು ಮಕ್ಕಳಿಗೆ ನ್ಯಾಯವನ್ನು ಒದಗಿಸಬೇಕು ಮತ್ತು ಅಲೆಮಾರಿ ಸಮುದಾಯದ ಇಬ್ಬರ ಹೆಣ್ಣು ಮಕ್ಕಳನ್ನು ಅತ್ಯಾಚಾರವನ್ನು ಎಸಗಿ ಕೆರೆಗೆ ಎಸೆದಿರುವ ಆರೋಪಿಗಳನ್ನು ಬಂಧಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಪತ್ರವನ್ನು ಜಿಲ್ಲಾಧಿಕಾರಿಗಳ ಮೂಲಕ ಸಲ್ಲಿಸಿದರು.

ಘಟನೆ ನಡೆದ ಯಾದಗಿರಿ ಜಿಲ್ಲೆಯ ಕುರುಮಟ್ಕಲ್ ತಾಲೂಕಿನ ಇಂದಿರಾನಗರದಲ್ಲಿ ನಿವಾಸಿಗಳಾದ ಶ್ರೀಮತಿ ಶಾಮಮ್ಮ ಗಂಡ ಹುಸೇನಪ್ಪ ಮತ್ತು ಸಾಯಮ್ಮ ತಂದೆ ಭೀಮಪ್ಪ ಇವರು ಜಂಗಮದ ಅಲೆಮಾರಿ ಸಮುದಾಯದ ಜಾತಿಗೆ ಸೇರಿದವರಾಗಿದ್ದು, ಇವರು ದಿನನಿತ್ಯ ಜೀವನಕ್ಕಾಗಿ ಚಿಂದಿ ಹಾಯುವ ಕೆಲಸಕ್ಕೆ ಹೋಗುತ್ತಿದ್ದರು. ಆದರೆ ದುಷ್ಕರ್ಮಿಗಳು ಹೆಣ್ಣು ಮಕ್ಕಳನ್ನು ಅತ್ಯಾಚಾರ ಗೈದು ಇಬ್ಬರ ಮೃತ ದೇಹವನ್ನು ಸೈದಾಪುರ ಪಕ್ಕದ ನೀಲ ಹಳ್ಳಿಯ ಕೆರೆಯಲ್ಲಿ ಎಸೆದಿದ್ದಾರೆ

ಈ ಸಾವಿನ ಬಗ್ಗೆ ಸೂಕ್ತವಾದ ತನಿಖೆ ನಡೆಸಿ



ಅತ್ಯಾಚಾರ ಎಸಗಿದ ಆರೋಪಿಗಳನ್ನು ಬಂಡಿಸಿ ತನಿಖೆ ನಡೆಸಲು ಈ ಪ್ರಕರಣವನ್ನು ಸಿಹಿಡಿಗೆ ಹಸ್ತಾಂತರ ಮಾಡಿ ಕೊಲೆಗಾರರನ್ನು ಪತ್ತೆಹಚ್ಚಬೇಕು ಮತ್ತು ನಂದು ಬಂದಿರುವಂತಹ ಈ ಕುಟುಂಬದವರಿಗೆ ಪರಿಹಾರ ಸಹಾಯಧನವನ್ನು ಅಥವಾ ಸರ್ಕಾರಿ ಉದ್ಯೋಗವನ್ನು ಒದಗಿಸಬೇಕೆಂದು ಜಿಲ್ಲಾ ಘಟಕದ ವತಿಯಿಂದ ಜಿಲ್ಲಾಧ್ಯಕ್ಷರುಗಳು ಹಾಗೂ ಕನ್ನಡಪರ ಸಂಘಟನೆಗಳ ಮುಖಂಡರುಗಳು ಮತ್ತು ಪದಾಧಿಕಾರಿಗಳು ಸೇರಿ ಕರ್ನಾಟಕದ ಮುಖ್ಯಮಂತ್ರಿಗಳಿಗೆ ಮಾನ್ಯ ಜಿಲ್ಲಾಧಿಕಾರಿಗಳ ಮೂಲಕ ಮನವಿ ಪತ್ರವನ್ನು ಸಲ್ಲಿಸಿದ್ದಾರೆ.

ಈ ಪ್ರತಿಭಟನಾ ರ್ಯಾಲಿಗೆ ಕರ್ನಾಟಕ ಏಕೀಕರಣ ರಕ್ಷಣಾ ಸೇನಾ ಸಮಿತಿಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಪಿಶೇಖರ್ ಮತ್ತು ಕರ್ನಾಟಕ ಮಾನವ ಹಕ್ಕುಗಳ ಸಮಿತಿಯ ರಾಜ್ಯಾಧ್ಯಕ್ಷರಾದ ಯು.ಉರುಕುಂದ ರೆಡ್ಡಿ ಮತ್ತು ಕನ್ನಡ ಕ್ರಾಂತಿ ಸಂಗೊಳ್ಳಿ ರಾಯಣ್ಣ ಹಿತರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷರಾದ ಭಟ್ಟಿ ಹರಿಸ್ವಾಮಿಯವರು ಮತ್ತು ಪದಾಧಿಕಾರಿಗಳು ಸೇರಿ ಬೆಂಬಲವನ್ನು ಸೂಚಿಸಿ ಆರೋಪಿಗಳನ್ನು ಪತ್ತೆ ಹಚ್ಚಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಅಲೆಮಾರಿ ಬುಡಕಟ್ಟು ಮಹಾಸಭಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಿ ರಂಗಯ್ಯ, ಬಳ್ಳಾರಿ ಜಿಲ್ಲಾ ಚೆನ್ನ ದಾಸರ ಸಂಘ ಗೌರವಾಧ್ಯಕ್ಷ ಮಹಾದೇವಪ್ಪ, ಸಂಘಟನಾ ಕಾರ್ಯದರ್ಶಿ ಡಿ ಲಕ್ಷ್ಮಣ ಮೋಕ, ಡಿ ಭೀಮಲಿಂಗ, ಡಿ ಸೂರ್ಯನಾರಾಯಣ, ಡಿ ಮಹೇಶ್ ಕುಮಾರ್, ಕರ್ಮ ಕೊರಚ ಸಮುದಾಯದ ಮುಖಂಡರಾದ ರಮಣಪ್ಪ ಭಜಂತ್ರಿ, ಶಂಕರ ಬಂಡೆ ಅಂಜಿ ಹಾಗೂ ಅಲೆಮಾರಿ ಸಮುದಾಯದವರು ಮತ್ತು ಕನ್ನಡಪರ ಸಂಘಟನೆಗಳ ಮುಖಂಡರು ಕಾರ್ಯಕರ್ತರು ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ನಿರ್ವಾಹಕನ ಮೇಲಿನ ಹಲ್ಲೆ ಖಂಡಿಸಿ ಪ್ರತಿಭಟನೆ

**ಬಳ್ಳಾರಿ:** ಬೆಳಗಾವಿ ಜಿಲ್ಲೆಯಲ್ಲಿ ರಾಜ್ಯದ ಸಾರಿಗೆ ವಾಹನ ಚಾಲಕನ ಹಾಗೂ ನಿರ್ವಾಹಕನ ಮೇಲೆ ಮರಾಠಿ ಭಾಷೆಯಲ್ಲಿ ಮಾತನಾಡು ಎಂದು ಮರಾಠಿಗರ ಗೂಂಡಾ ವರ್ತನೆಯನ್ನು ಕರ್ನಾಟಕ ಏಕೀಕರಣ ರಕ್ಷಣಾ ಸೇನಾ ಸಮಿತಿ ರಾಜ್ಯ ಘಟಕ ಮತ್ತು ಬಳ್ಳಾರಿ ಜಿಲ್ಲಾ ಘಟಕವು ಖಂಡಿಸಿ ಬೃಹತ್ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿದರು.

ಬೆಳಗಾವಿ ಜಿಲ್ಲೆ ಭಾಗದಲ್ಲಿ ಕರ್ನಾಟಕ ಸರ್ಕಾರಿ ಸಾರಿಗೆ ಬಸ್‌ನ ಚಾಲಕ ಮತ್ತು ನಿರ್ವಾಹಕನ ಮೇಲೆ ಎಂಇಎಸ್ ಮತ್ತು ಶಿವಸೇನೆ ಮರಾಠಿ ಬೆಂಬಲಿತ ಪುಂಡರು, ಮರಾಠಿಯಲ್ಲಿ ಮಾತನಾಡು ಎಂದು ಟಿಕೇಟಿನ ವಿಚಾರದಲ್ಲಿ ಮರಾಠ ಪುಂಡರು ಚಾಲಕ ಮತ್ತು ನಿರ್ವಾಹಕನ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದ್ದಲ್ಲದೆ, ಕರ್ನಾಟಕ ಪೊಲೀಸರು ಪೋಕ್ಸೋ ಕೇಸ್ ದಾಖಲಿಸಿರುವುದು ಕನ್ನಡಿಗರೇ ಕನ್ನಡಿಗರನ್ನು ಹತ್ತಿಕ್ಕುವುದು ಹೀನ ಕೃತ್ಯ ಈ ಮರಾಠಿಗರ ದಬ್ಬಾಳಿಕೆ ಬೆಳಗಾವಿ ಜಿಲ್ಲೆಯಲ್ಲಿ ನಿರಂತರವಾಗಿ, ಕನ್ನಡಿಗರ ಶಕ್ತಿಯನ್ನು ಕುಗ್ಗಿಸುವ ಕುಗ್ಗಿಸುವಂತಹ ಹೀನ ಕೃತ್ಯ ಮಾಡುತ್ತಿರುವ ಎಂಇಎಸ್ ಮತ್ತು ಶಿವಸೇನೆ ಮರಾಠಿ ಪುಂಡರು ಮಾಡುತ್ತಿದ್ದಾರೆ ಕನ್ನಡಿಗರು ಇಂತ ಅದೃಷ್ಟ ಶಕ್ತಿಗಳು ಅವರ ಹೀನ ಕೃತ್ಯಗಳನ್ನು ಮಾಡಿ ಕನ್ನಡಿಗರನ್ನು ಅತ್ತಿಕ್ಕುವಂತ ಕೆಲಸ ಮಾಡಿದರೆ ಕನ್ನಡಿಗರು ಎದುರುವಂತರಲ್ಲ ಬೆಳಗಾವಿ ಜಿಲ್ಲೆ, ಕರ್ನಾಟಕ ರಾಜ್ಯದ ಅವಿಭಾಜ್ಯ ಅಂಗ ಇದನ್ನು ಕಿತ್ತುಕೊಳ್ಳುವ ಪ್ರಯತ್ನ ಯಾವ ಮೂರ್ಖ ಎಂಇಎಸ್ ಮತ್ತು ಶಿವಸೇನೆ ನಾಡದ್ರೋಹಿಗಳ ಮಹಾರಾಷ್ಟ್ರ ಮರಾಠಿಗರಿಂದ ಸಾಧ್ಯವಿಲ್ಲ ಆದರೆ ನಮ್ಮದೇ



ಕರ್ನಾಟಕ ರಾಜ್ಯದ ಜನ ಪ್ರತಿನಿಧಿಗಳು ತಮ್ಮ ರಾಜಕೀಯ ಇಚ್ಛಾ ಶಕ್ತಿಗೋಸ್ಕರ ಮರಾಠಿಗರನ್ನ ಬೆಂಬಲಿಸುತ್ತಾ ಬಂದು ಕನ್ನಡಿಗರ ಶಕ್ತಿಯನ್ನು ಕುಗ್ಗಿಸುವಂತಹ ಕೆಲಸವನ್ನು ಮಾಡುತ್ತಿರುವುದು ವಿಪರ್ಯಾಸ ಮತ್ತು ದುರದೃಷ್ಟ ಯಾರಾದರೂ ಸರಿಯೇ ಎಂಥ ಶಕ್ತಿಯಾದರೂ ಸರಿಯೇ ಕನ್ನಡಿಗರ ಮೇಲೆ ಹಲ್ಲೆ ಮಾಡುವ ದುಷ್ಟರನ್ನು ಕನ್ನಡಪರ ಸಂಘಟನೆಗಳು ಸಹಿಸುವುದಿಲ್ಲ ಹೀನ ಕೃತ್ಯ ಮಾಡುವಂತಹ ಯಾವುದೇ ದುಷ್ಟ ಶಕ್ತಿ ಇರಲಿ ಎದುರಿಸುವ ಶಕ್ತಿ ಕನ್ನಡಪರ ಹೋರಾಟಗಾರರಿಗೆ ಕನ್ನಡಿಗರಿಗೆ ಇದೆ ಎಂದು ಕರ್ನಾಟಕ ಏಕೀಕರಣ ರಕ್ಷಣಾ ಸೇನಾ ಸಮಿತಿ ಸಂಸ್ಥಾಪಕ ರಾಜ್ಯಾಧ್ಯಕ್ಷ ಪಿ.ಶೇಖರ್ ಅವರು ಮಾತನಾಡಿದರು.

ಪ್ರತಿಭಟಿಸಿ ಕರ್ನಾಟಕ ಏಕೀಕರಣ ರಕ್ಷಣಾ ಸೇನಾ ಸಮಿತಿ ಜಿಲ್ಲಾಧ್ಯಕ್ಷ ಕೃಷ್ಣ ವಾಲ್ಮೀಕಿ ಮಾತನಾಡಿ ಕನ್ನಡಿಗ ನಿರ್ವಾಹಕ ಮತ್ತು ಚಾಲಕರ ಮೇಲೆ ಹಲ್ಲೆ ಮಾಡಿದ ದುಷ್ಟರನ್ನು ಕಠಿಣ ಶಿಕ್ಷೆಗೆ ಗುರಿಪಡಿಸಿ ಜೈಲಿಗಟ್ಟಬೇಕು ಶಾಶ್ವತವಾಗಿ ಕರ್ನಾಟಕದಿಂದ ಗಡಿಪಾರು ಮಾಡಬೇಕು ನಿರ್ವಾಹಕರ ಮೇಲೆ ಸುಳ್ಳು ಫೋಕ್ಸ್ ದೂರನ್ನು ದಾಖಲಿಸಿರುವ ಪೊಲೀಸರು ಆ ದೂರನ್ನು ವಾಪಸ್ ಪಡೆದು ಕನ್ನಡ ಚಾಲಕ ಮತ್ತು ನಿರ್ವಾಹಕರಿಗೆ ನ್ಯಾಯ ಕೊಡಿಸುವಂತಹ ಕೆಲಸ ಮಾಡಬೇಕು ಇಲ್ಲದೆ ಹೋದರೆ ಕರ್ನಾಟಕ ಏಕೀಕರಣ ರಕ್ಷಣಾ ಸೇನಾ ಸಮಿತಿ ಉಗ್ರ ಹೋರಾಟವನ್ನು ಹಮ್ಮಿಕೊಳ್ಳಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ರಾಜ್ಯ ಘಟಕದ ಪದಾಧಿಕಾರಿಗಳಾದ ಪಿ. ಕಾಟಯ್ಯ,ಎಸ್. ಪ್ರಕಾಶ್‌ಮೂರ್ತಿ, ಸದರಿ ಸಂಘಟನೆಯ ವಿವಿಧ ಘಟಕಗಳ ಅಧ್ಯಕ್ಷರುಗಳಾದ ಗಂಗಾಧರ, ರಮೇಶ್, ಮನೋಹರ್, ಮಲ್ಲಿಕಾರ್ಜುನ, ಚಂದ್ರ, ಬಸವರಾಜ ಎರಿಸ್ವಾಮಿ, ಸೇರಿದಂತೆ ಉಪಸ್ಥಿತರಿದ್ದರು.

# ಸರ್ಕಾರಗಳು ಸುಳ್ಳು ಹೇಳಿ ಯುವಜನತೆಯ ದಾರಿತಪ್ಪಿಸುತ್ತಿದೆ: ನಿವೃತ್ತ ನ್ಯಾ.ಗೋಪಾಲಗೌಡ



**ಶಿಡ್ಲಘಟ್ಟ:** ನಮ್ಮ ದೇಶದಲ್ಲಿ ನಿರುದ್ಯೋಗ ಸಮಸ್ಯೆ ಸೇರಿದಂತೆ ಎಲ್ಲಾ ಸಮಸ್ಯೆಗಳಿಗೂ ಜನಸಂಖ್ಯಾ ಸ್ಫೋಟ, ಮಿತಿ ಮೀರಿದ ಜನಸಂಖ್ಯೆ ಕಾರಣ ಎಂದು ಸರ್ಕಾರಗಳು ಸುಳ್ಳು ಹೇಳಿಕೊಂಡು ಯುವಜನರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ ಎಂದು ಸುಪ್ರೀಂಕೋರ್ಟ್ ನಿವೃತ್ತ ನ್ಯಾಯಮೂರ್ತಿ ಗೋಪಾಲಗೌಡ ಅವರು ತಿಳಿಸಿದ್ದಾರೆ.

ನಗರದ ವಾಸವಿ ವಿದ್ಯಾಸಂಸ್ಥೆಯ ಆವರಣದಲ್ಲಿ ಲಿಯೋ ಕ್ಲಬ್ ಸೇರಿದಂತೆ ಹಲವು ಸಂಘ ಸಂಸ್ಥೆಗಳ ಆಶ್ರಯದಲ್ಲಿ ಉದ್ಯೋಗ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜನಸಂಖ್ಯೆ ಸಮಸ್ಯೆಯಲ್ಲ ಜನಸಂಖ್ಯೆ ಅಭಿವೃದ್ದಿಗೂ ಅಡ್ಡಿಯಲ್ಲ, ಜನಸಂಖ್ಯೆಯು ಮಾನವ ಸಂಪನ್ಮೂಲವಾಗಿದ್ದು ದೇಶದ ಸಂಪತ್ತು ಅದು ಎಂದರು.

ಸರ್ಕಾರಗಳು ವಿದ್ಯಾವಂತರು ಹಾಗೂ ಅವಿದ್ಯಾವಂತರಿಗೆ ಉದ್ಯೋಗವನ್ನು ಕೊಡಲು ಆಗದೆ ಜನ ಸಂಖ್ಯೆ ಹೆಚ್ಚಳದಿಂದ ನಿರುದ್ಯೋಗ ಸಮಸ್ಯೆ ಎದುರಾಗಿದೆ ಎಂದು ಸುಳ್ಳು ಹೇಳಿ ಜನ ಸಾಮಾನ್ಯರನ್ನು ಹಾಗೂ ನಿರುದ್ಯೋಗ ಯುವಕ ಯುವತಿಯರನ್ನು ದಾರಿ ತಪ್ಪಿಸುತ್ತಿದೆ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ನಮ್ಮ ದೇಶದಲ್ಲಿ ಜನಸಂಖ್ಯಾ ಸಮಸ್ಯೆ ಒಂದು ಸಮಸ್ಯೆಯೆ ಅಲ್ಲಾ ಸಮಸ್ಯೆ ಇರುವುದು ನಮ್ಮನ್ನು ಆಳುವ ಸರ್ಕಾರಗಳದ್ದು, ಜನಪ್ರತಧಿನಿಧಿಗಳ ಇಚ್ಛಾಶಕ್ತಿ, ಜನ ಸಾಮಾನ್ಯರ ಬಗ್ಗೆ ಕಾಳಜಿ ತೋರದಿರುವುದು ಅಂತಹ ಜನಪ್ರತಿನಿಗಳನ್ನು ನೀವು ಆಯ್ಕೆ ಮಾಡುತ್ತಿದ್ದೀರಿ ,ನಾವು ಆಯ್ಕೆ ಮಾಡಿದ ಸರ್ಕಾರ ನಿಷ್ಕ್ರಿಯೆ ಆದಾಗ, ಉದ್ಯೋಗ ನೀಡುವುದು ಸೇರಿದಂತೆ ತನ್ನ ಕರ್ತವ್ಯವನ್ನು ಮಾಡದೇ ಇದ್ದಾಗ ಜನ ಸಾಮಾನ್ಯರು ಸುಮ್ಮನಿರೊಲ್ಲ ಎಂದು ಹೇಳಿದರು.

ಈ ಅವ್ಯವಸ್ಥೆಯ ಪರಿಣಾಮ ಸಂಘ ಸಂಸ್ಥೆಗಳು ಹೆಚ್ಚು ಕ್ರಿಯಾ ಶೀಲವಾಗುತ್ತವೆ ಇಂತಹ ಉದ್ಯೋಗ ಮೇಳವೋ, ಇನ್ನೇನೋ ಮತ್ತೇನನ್ನೋ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ತಿಳಿಸಿದರು.

ವಿವಿಧ ಕ್ಷೇತ್ರಗಳ 16ಕ್ಕೂ ಹೆಚ್ಚು ಖಾಸಗಿ ಕಂಪನಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಿದ್ದವು. 782 ಮಂದಿ ನೋಂದಾಯಿಸಿಕೊಂಡಿದ್ದು 7 ಮಂದಿ ವಿಶೇಷ ಚೇತನರು ಸೇರಿದಂತೆ 215 ಮಂದಿಗೆ ಸ್ಥಳದಲ್ಲೆ ನೇಮಕಾತಿ ಪತ್ರ ನೀಡಲಾಯಿತು.

ಈ ಸಂದರ್ಭದಲ್ಲಿ ಡಿವೈಎಸ್ಪಿ ಕೆ.ಎನ್. ರಮೇಶ್, ವಾಸವಿ ಶಾಲೆಯ ಕಾರ್ಯದರ್ಶಿ ರೂಪಸಿರಮೇಶ್, ಲಿಯೋ ಕ್ಲಬ್‌ನ ಜಿಲ್ಲಾಧ್ಯಕ್ಷ ನವೀನ್ ಜಿ.ಕೃಷ್ಣ, ತಾಲ್ಲೂಕು ಗೌರವಾಧ್ಯಕ್ಷ ಬಂಕ್ ಶ್ರೀನಿವಾಸ್, ಅಧ್ಯಕ್ಷ ಶ್ರೀಕಾಂತ್, ಕಾರ್ಯಧರ್ಶಿ ಲೋಕೇಶ್, ತಮೀಮ್ ಮಹಮದ್ ಅನ್ಸಾರಿ,ಕೃಷಿ ಪಂಡಿತರಾದ ಹೆಚ್.ಜಿ.ಗೋಪಾಲಗೌಡ ಮೂರ್ತಿ ಸಾಮ್ರಾಟ್ ಮತ್ತಿತರರು ಹಾಜರಿದ್ದರು.

# ವಿದ್ಯುತ್ ಚಾಲಿತ ಕಸ ವಿಲೇವಾರಿ ವಾಹನಗಳಿಗೆ ಚಾಲನೆ

**ಮುಳಬಾಗಿಲು:** ನಗರಸಭೆ ಅವರಣದಲ್ಲಿ ಸೋಮವಾರ ಮುಖ್ಯಮಂತ್ರಿಗಳ ಸುಮಾರು 58.91 ಲಕ್ಷಗಳ ಅಮೃತ ನಗರೋತ್ಥಾನ ಯೋಜನೆ ಹಂತ-4 ರಲ್ಲಿ ನಿರ್ಮಿಸಲಾಗಿದ್ದ ಪೌರ ಕಾರ್ಮಿಕರಿಗೆ ನೂತನ ಉಪಹಾರ ಗೃಹ, ವಿಶ್ರಾಂತಿ ಕೊಠಡಿ ಹಾಗೂ ವಿದ್ಯುತ್ ಚಾಲಿತ ಕಸ ವಿಲೇವಾರಿ ವಾಹನಗಳಿಗೆ ಶಾಸಕ ಸಮೃದ್ಧಿ ಮಂಜುನಾಥ್ ಚಾಲನೆ ನೀಡಿದರು.

ನಂತರ ಮಾತನಾಡಿದ ಶಾಸಕ ಸಮೃದ್ಧಿ ಮಂಜುನಾಥ್ ಅವರು, ನಗರವನ್ನು ಸ್ವಚ್ಛವಾಗಿಡಲು ಹಗಲು ಇರುಳು ಶ್ರಮಿಸುವ ಪೌರಕಾರ್ಮಿಕರಿಗೆ ವಿಶ್ರಾಂತಿ ಪಡೆಯಲು ಸಮಯವೇ ಇರುವುದಿಲ್ಲ ಇದನ್ನು ಮನಗೊಂಡು ಸರ್ಕಾರ ವಿಶ್ರಾಂತಿ ಕೊಟ್ಟಡಿ, ಉಪ ಹಾರ ಗೃಹ ಕಲ್ಪಿಸಲು ಅನುಕೂಲ ಮಾಡಿಕೊಟ್ಟಿರುವುದು ಹೆಮ್ಮೆ ಪಡುವ ವಿಚಾರವಾಗಿದೆ ಎಂದರು.

ಈಗಾಗಲೇ ನಗರದ ಅಭಿವೃದ್ಧಿಯಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ, ನಗರದ ಪ್ರಮುಖ ರಸ್ತೆಗಳು ಅಂದವಾಗಿ ಕಾಣುತ್ತಿವೆ, ಬೇಸಿಗೆಕಾಲ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ 10 ಕೊಳವೆ ಬಾವಿಗಳನ್ನು ಕೊರಸಲಾಗಿದ್ದು. ಎಂಟು ಕೊಳವೆ ಭಾಗಗಳಲ್ಲಿ ನೀರು ಬರುತ್ತಿದ್ದು ಮುಂದಿನ ದಿನಗಳಲ್ಲಿ ನಗರದ ಎಲ್ಲಾ ವಾರ್ಡುಗಳಿಗೆ ನೀರಿನ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಬೇಕು ಮುಂದಿನ ಏಳು ತಿಂಗಳಲ್ಲಿ ನಗರಸಭೆ ಚುನಾವಣೆ ನಡೆಯಲಿದ್ದು. ಚುನಾವಣೆಗೂ ಮುನ್ನ ಎಲ್ಲಾ ವಾರ್ಡ್ಗಳಲ್ಲಿ ಮತದಾರರ




ಪ್ರೀತಿ ವಿಶ್ವಾಸ ಗಳಿಸಿ. .ಯಾವುದೇ ಸಮಸ್ಯೆ ಇಲ್ಲದಂತೆ ನೋಡಿಕೊಳ್ಳಬೇಕು. ಪಕ್ಷಬೇಧ ಮರೆತು ನಗರಸಭೆಗೆ ಅಭಿವೃದ್ಧಿಗಾಗಿ ಎಲ್ಲರೂ ಒಗ್ಗಟ್ಟಾಗಿ ಶ್ರಮಿಸೋಣ ಎಂದರು

ನಗರಸಭೆ ಪೌರಯುಕ್ತ ವಿ. ಶ್ರೀಧರ್, ಅಧ್ಯಕ್ಷೆ ಶಭಾನ ಬೇಗಂ, ಉಪಾಧ್ಯಕ್ಷೆ ಸರಳ, ಮಾಜಿ ಅಧ್ಯಕ್ಷರಾದ ರಿಯಾಜ್ ಅಹಮದ್. ಜೆಡಿಎಸ್ ನ ಕಾರ್ಯದರ್ಶಿ ರಘುಪತಿ ರೆಡ್ಡಿ. ಸದಸ್ಯರಾದ ಸೋಮಣ್ಣ, ನಿರುಪಮ ಜಗನ್ ಮೋಹನ್ ರೆಡ್ಡಿ, ಮುನಿರಾಜು, ಜಬಿವುಲ್ಲಾ, , ಗರಡಿ ಶಂಕರ್, ಶಾಹಿದ್ ಭಾಷಾ. ಅಪ್ಪಿ, ಗ್ಯಾಸ್ ರಘು, ಚಂದಾ ಪಾಷ, ವಹೀದ್, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಮಾನುಲ್ಲಾ, ಕಂದಾಯಾಧಿಕಾರಿ ತ್ಯಾಗರಾಜ್, ನಗರಸಭೆಯ ನೋಡಲ್ ಇಂಜಿನಿಯರ್ ಡಾಕ್ಟರ್ ಸುನಿಲ್ ರಾಜ್. ಹಿರಿಯ ಆರೋಗ್ಯ ನಿರೀಕ್ಷಿಕಿ ವಿ.ಪ್ರತಿಭಾ, ವ್ಯವಸ್ಥಾಪಕಿ ಶೈಲಜಾ ಹಾಗೂ ಸಿಬ್ಬಂದಿ . ಸುಬ್ರಮಣಿ. ವಿಜಯಕುಮಾರ್ ಕೆಜಿಎಫ್. ನಾಗರಾಜ್. ಇದ್ದರು.

# ಹಲಸಬೆಲೆಯಲ್ಲಿ 26-27ಕ್ಕೆ ಬ್ರಹ್ಮರಥೋತ್ಸವ

**ಮಾಗಡಿ:** ತಾಲೂಕಿನ ಹಲಸಬೆಲೆ ಶ್ರೀಶನೇಶ್ವರಸ್ವಾಮಿ ಮತ್ತು ಶ್ರೀಮುನೇಶ್ವರಸ್ವಾಮಿ ದೇವಾಲಯದಲ್ಲಿ ಮಹಾ ಶಿವರಾತ್ರಿ ಹಬ್ಬದ ಪ್ರಯುಕ್ತ ಶ್ರೀಶನೇಶ್ವರಸ್ವಾಮಿ ಮತ್ತು ಶ್ರೀಮುನೇಶ್ವರ ಸ್ವಾಮಿಯ ವಾರ್ಷಿಕೋತ್ಸವ ಹಾಗೂ ಬ್ರಹ್ಮರಥೋತ್ಸವ ಫೆ. 26ರ ಬುಧವಾರದಿಂದ ಫೆ.27ರ ಗುರುವಾರದವರೆಗೆ ನಡೆಯಲಿದೆ ಎಂದು ಅರ್ಚಕ ಶಿವಣ್ಣ ತಿಳಿಸಿದ್ದಾರೆ.



ಫೆ. 26 ರ ಬೆಳಗ್ಗೆ 8-15 ಕ್ಕೆ ಗಂಗೆಪೂಜೆ, ಗಣಪತಿ ಪೂಜೆ, ಪಂಚಾಮೃತ ಅಭಿಷೇಕ, ರುದ್ರಾಭಿಷೇಕ, ಧ್ವಜಾರೋಹಣ, ಮಹಾ ಮಂಗಳಾರತಿ, ಪ್ರಸಾದ ವಿನಿಯೋಗ ನಡೆಯಲಿದೆ. ಫೆ.27 ರಂದು ಬೆಳಗ್ಗೆ 5-30ಕ್ಕೆ ದೇವರುಗಳಿಗೆ ಪಂಚಾಮೃತ ಅಭಿಷೇಕ, ಪುಷ್ಪ ಅಲಂಕಾರ, ಹಣ್ಣಿನ ಅಲಂಕಾರ, ಹೂವಿನ ಅಲಂಕಾರ, ಅಗ್ನಿಕೊಂಡೋತ್ಸವ,ಮಹಾ ಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ. ಮಧ್ಯಾಹ್ನ 12-10 ಕ್ಕೆ ಬ್ರಹ್ಮರಥೋತ್ಸವ ನಡೆಯಲಿದೆ.

ಮದ್ಯಾಹ್ನ 12-30 ಕ್ಕೆ ಹಲಸಬೆಲೆ,ಬಸವನಗುಡಿ ಪಾಳ್ಯ ಅಕ್ಕಪಕ್ಕದ ಗ್ರಾಮಸ್ಥರಿಂದ ಭಕ್ತಾದಿಗಳಿಂದ ಸಾವಿರಾರು ಮಂದಿಗೆ ಅನ್ನಸಂತರ್ಪಣೆ ನಡೆಯಲಿದೆ.

ಫೆ.27ರ ಗುರುವಾರ ರಾತ್ರಿ 8-30 ಕ್ಕೆ ಹಲಸಬೆಲೆ ಕಲಾವಿದರಿಂದ ಶನಿಪ್ರಭಾವ ಅಥವಾ ರಾಜ ಸತ್ಯವ್ರತ ಪೌರಾಣಿಕ ನಾಟಕ ಪ್ರದರ್ಶನ ನಡೆಯಲಿದೆ. ಶಾಸಕ ಎಚ್.ಸಿ.ಬಾಲಕೃಷ್ಣ ಕಾರ್ಯಕ್ರಮ ಉದ್ಘಾಟಿಸಲಿದ್ದು ಮಾಜಿ ಸಂಸದ ಡಿ.ಕೆ.ಸುರೇಶ್ ಅಧ್ಯಕ್ಷತೆ ವಹಿಸಲಿದ್ದಾರೆ, ಮಾಜಿ ಸಚಿವ ಎಚ್.ಎಂ.ರೇವಣ್ಣ, ಮಾಜಿ ಶಾಸಕ ಎ.ಮಂಜುನಾಥ್, ಕೆಂಪೇಗೌಡ ಆಸ್ಪತ್ರೆ ಅಧ್ಯಕ್ಷ ಎಚ್.ಎನ್.ಆಶೋಕ್, ವೀರಶೈವ ಮುಖಂಡ ಕೆಪಿ.ಮಹದೇವಶಾಸ್ತ್ರಿ, ಜೆಪಿ.ಚಂದ್ರೇಗೌಡ, ಹೆಚ್. ಎಂ.ಕೃಷ್ಣಮೂರ್ತಿ, ತಮ್ಮಣ್ಣಗೌಡ, ಗ್ರಾ.ಪಂ. ಮಾಜಿ ಅಧ್ಯಕ್ಷ ಮಲ್ಲಕಾರ್ಜುನಯ್ಯ, ಎ.ಎಚ್.ಬಸವರಾಜು ಸೇರಿದಂತೆ ಚುನಾಯಿತ ಪ್ರತಿನಿಧಿಗಳು, ಸಂಘ,ಸಂಸ್ಥೆಗಳ ಮುಖಂಡರು, ಸುತ್ತಮುತ್ತಲ ಹತ್ತಾರು ಗ್ರಾಮಸ್ಥರು ಭಾಗವಹಿಸಲಿದ್ದಾರೆ ಎಂದರು.

# ಅನುದಾನ ತರಲು ಪ್ರಯತ್ನ



**ಕೆ.ಆರ್.ಪೇಟೆ:** ವಿರೋಧಪಕ್ಷದ ಶಾಸಕನಾದರೂ ನನ್ನ ಶಕ್ತಿಮೀರಿ ಅನುದಾನ ತರಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ ಎಂದು ಶಾಸಕ ಹೆಚ್.ಟಿ.ಮಂಜು ತಿಳಿಸಿದರು.

ಅವರು ತಾಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಹಳೇ ದಡದಹಳ್ಳಿ ಗ್ರಾಮದಲ್ಲಿ ಸುಮಾರು ಹತ್ತು ಲಕ್ಷ, ಹಾಗೂ ಪಟ್ಟಣದ ಕ್ರಿಶ್ಚಿಯನ್ ಕಾಲೋನಿಯಲ್ಲಿ ಸುಮಾರು ನಲವತ್ತೈದು ಲಕ್ಷ, ಮತ್ತು ಶೀಳನೆರೆ ಹೋಬಳಿಯ ಸಿಂಧುಘಟ್ಟ ಗ್ರಾಮದಲ್ಲಿ ಎಪ್ಪತ್ತೈದು ಲಕ್ಷ ವೆಚ್ಚದ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಹೆಚ್.ಟಿ.ಮಂಜು ಗುದ್ದಲಿಪೂಜೆ ನೇವೇರಿಸಿ ಮಾತನಾಡಿದರು.

# ಅಭ್ಯರ್ಥಿಗಳ ಅಭಿಪ್ರಾಯ ಸಂಗ್ರಹಿಸಿ ವರಿಷ್ಠರ ಗಮನಕ್ಕೆ ತರುತ್ತೇನೆ: ನಿಖಿಲ್

**ದೇವನಹಳ್ಳಿ:** ಮುಂಬರುವ ಜಿಲ್ಲಾ ಪಂಚಾಯತಿ ಹಾಗೂ ತಾಲೂಕು ಪಂಚಾಯತಿ ಚುನಾವಣೆ ಎದುರಿಸುವ ಬಗ್ಗೆ ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಹಾಗೂ ಕೋಲಾರ ಜಿಲ್ಲೆಯ ಹಾಲಿ ಹಾಗೂ ಮಾಜಿ ಶಾಸಕರು ಸಂಸದರೊಂದಿಗೆ ಸುದೀರ್ಘ ಚರ್ಚೆ ಮಾಡಿದ್ದೇವೆ ಹಾಗೂ ಅಭ್ಯರ್ಥಿಗಳ ಅಭಿಪ್ರಾಯವನ್ನು ಸಂಗ್ರಹಿಸಿದ್ದು ವರದಿಯನ್ನು ವರಿಷ್ಠರ ಗಮನಕ್ಕೆ ತರುತ್ತೇನೆ ಎಂದು ಜೆಡಿಎಸ್ ಯುವಘಟಕ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದರು.

ದೇವನಹಳ್ಳಿ ತಾಲೂಕಿನ ಕನ್ನಮಂಗಲ ಗೇಟ್ ಬಳಿ ಇರುವ ಪ್ರೆಸ್ಟೀಜ್ ಹೋಟಲ್‌ನಲ್ಲಿ ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಹಾಗೂ ಕೋಲಾರ ಜಿಲ್ಲೆಯ ಹಾಲಿ ಹಾಗೂ ಮಾಜಿ ಶಾಸಕರು, ಸಂಸದರು ಪ್ರಮುಖ ಮುಖಂಡರ ಸಭೆಯ ಬಳಿಯ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪಕ್ಷ ಸಂಘಟನೆಯ ದೃಷ್ಠಿಯಿಂದ ಪಕ್ಷದ ವರಿಷ್ಠರಾದ ಹೆಚ್.ಡಿ.ದೇವೇಗೌಡರ ಮಾರ್ಗದರ್ಶನ ಹಾಗೂ ಹೆಚ್.ಡಿ.ಕುಮಾರಸ್ವಾಮಿ ಅವರ ನಿರ್ದೇಶನದಂತೆ ಹಲವಾರು ವರ್ಷಗಳಿಂದ ಪಕ್ಷದಲ್ಲಿ ಶಾಸಕರಾಗಿ ಮಂತ್ರಿಗಳಾಗಿ ಕೆಲಸ ನಿರ್ವಹಿಸಿರುವ ಹಾಲಿ ಹಾಗೂ ಮಾಜಿ ಸದಸ್ಯರು ಹಾಗೂ ಎಲ್ಲಾ ಪ್ರಮುಖ ಮುಖಂಡರ ಜೊತೆ ಸಭೆಗಳನ್ನು ಹಾಸನದಿಂದ ಪ್ರಾರಂಭಿಸಿದ್ದೇವೆ. ಸದಸ್ಯತ್ವ ಅಭಿಯಾನ ಪ್ರಾರಂಭಿಸಲು ತಿಳಿಸಿದ್ದಾರೆ ಸದಸ್ಯತ್ವ ಅಭಿಯಾನ ಡಿಜಿಟಲ್ ಮೂಲಕ ಮಾ.15ರ ಒಳಗೆ 31 ಜಿಲ್ಲೆಗಳಲ್ಲಿ ಅಭ್ಯರ್ಥಿಗಳೊಂದಿಗೆ ಚರ್ಚಿಸಲು ಆದೇಶ ಹೊರಡಿಸಿದ್ದಾರೆ. ಹಾಗಾಗಿ ಸಭೆ ಸೇರಿ ಅಭ್ಯರ್ಥಿಗಳ ಅಭಿಪ್ರಾಯಗಳನ್ನು ಸಂಗ್ರಹಿಸಿದ್ದೇನೆ. ಮುಂಬರುವ ತಾ.ಪಂ, ಜಿ.ಪಂ ಚುನಾವಣೆಗಳಲ್ಲಿ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿಯವ ಬಗ್ಗೆ ಪ್ರತಿಕ್ರಿಯಿಸಿ ಮಾತನಾಡಿ ಕಳೆದ ಲೋಕಸಭಾ ಚುನಾವಣೆಯಲ್ಲಿ ಎನ್.ಡಿ.ಎ ಮಿತ್ರಪಕ್ಷವಾಗಿ ಜೆಡಿಎಸ್ ಪಕ್ಷ ರಾಜ್ಯದಲ್ಲಿ 19 ಜನ ಎನ್.ಡಿ.ಎ ಅಭ್ಯರ್ಥಿಗಳು ಸಂಸತ್‌ಗೆ ಆಯ್ಕೆಯಾಗಿದ್ದಾರೆ. ಎರಡು ಪಕ್ಷದ ಸಮ್ಮಿಲನ ತಳಮಟ್ಟದ ಕಾರ್ಯಕರ್ತರ ಮನಸ್ಸಿನ ಆರೋಗ್ಯಕವಾದ ವಾತಾವರಣ ಸೃಷ್ಠಿಯಾಗಿದ ಹಿನ್ನೆಲೆ ಎಚ್ಚು ಸಂಸದರು ಆಯ್ಕೆಯಾಗಿದ್ದಾರೆ. ಮುಂಬರುವ ತಾ,ಪಂ, ಜಿ.ಪಂ ಚುನಾವಣೆ ಕಾರ್ಯಕರ್ತರ ಚುನಾವಣೆಯಾಗಿರುವುದರಿಂದ ಎರಡು ಪಕ್ಷಗಳಿಂದ ಹೆಚ್ಚು ಕಾರ್ಯಕರ್ತರ ಆಕಾಂಕ್ಷಿಗಳಾಗಿರುತ್ತಾರೆ. ಮೈತ್ರಿ ಅಂತಿಮವಾಗಿ ತೀರ್ಮಾನ ವಾಗುವುದು ರಾಷ್ಟ್ರ ಹಾಗೂ ರಾಜ್ಯಮಟ್ಟದಲ್ಲಿ ಜೆಡಿಎಸ್ ಬಿಜೆಪಿಯ ಮೈತ್ರಿ ಸಮನ್ವಯತೆ ಕಾಪಾಡುವ ದೃಷ್ಠಿಯಿಂದ ಸಮಿತಿ



ರಚನೆಯಾಗಬೇಕು. ಕಮಿಟಿ ಜಿಲ್ಲೆ ಹಾಗೂ ತಾಲೂಕಿಗೂ ವಿಸ್ತರಣೆ ಮಾಡಬೇಕು. ಪಕ್ಷದ ವರಿಷ್ಠರ ತೀರ್ಮಾನದ ನಂತರ ಅಧಿಕೃತವಾಗಿ ಮಾಹಿತಿ ದೊರೆಯಲಿದೆ.

ಕಾಂಗ್ರೆಸ್ ಗ್ಯಾರಂಟಿಯಿಂದ ಜೆಡಿಎಸ್‌ಗೆ ಹಿನ್ನಡೆಯಾಗುತ್ತಿದೆ ಎಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿ ಮಾತನಾಡಿದ ನಿಖಿಲ್‌ಕುಮಾರಸ್ವಾಮಿ ಗ್ಯಾರಂಟಿ ಯೋಜನೆಗಳಿಂದ ಪಕ್ಷಕ್ಕೆ ಯಾವುದೇ ಹಿನ್ನಡೆಯಾಗಿಲ್ಲ ಕಳೆದ ಸಂಸತ್ ಚುನಾವಣೆಯಲ್ಲಿ 19 ಸ್ಥಾನಗಳನ್ನು ಮತದಾರರು ನೀಡಿದ್ದಾರೆ. ಗೃಹಲಕ್ಷ್ಮೀ ಯೋಜನೆ ಉಪಚುನಾವಣೆ ವೇಳೆ ಗೃಹಲಕ್ಷ್ಮೀ ಯೋಜನೆ 4 ತಿಂಗಳು ಹಣ ತಡೆಹಿಡಿದು ಚುನಾವಣೆ ವೇಳೆ ಹಣಬಿಡುಗಡೆ ಮಾಡಿದರು. ಮತ್ತೆ 4–5 ತಿಂಗಳಿನಿಂದ ಗೃಹಲಕ್ಷ್ಮೀ ಹಣ ಮಹಿಳೆಯರಿಗೆ ತಲುಪಿಲ್ಲ. ಮುಂಬರುವ ಚುನಾವಣೆ ಸಮಯದಲ್ಲಿ ಹಣ ಬಿಡುಗಡೆ ಮಾಡಲಿದ್ದಾರೆ. ಎಲ್ಲವನ್ನು ರಾಜ್ಯದ ಜನತೆ ಗಮನಿಸುತ್ತಿದ್ದಾರೆ. ಮುಂಬರುವ ಚುನಾವಣೆಗಳಲ್ಲಿ ರಾಜ್ಯದ ಜನ ಕಾಂಗ್ರೇಸ್‌ನ್ನು ಸಂಪೂರ್ಣವಾಗಿ ತಿರಸ್ಕಾರ ಮಾಡುವುದರಲ್ಲಿ ಯಾವುದೇ ಸಂಶಯವಿಲ್ಲ.

ಇದೆ ವೇಳೆ ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ, ಕೋಲಾರ ಸಂಸದ ಮಲ್ಲೇಶ್‌ಬಾಬು, ಶಿಡ್ಲಘಟ್ಟ ಶಾಸಕ ರವಿಕುಮಾರ್, ಮುಳಬಾಗಿಲು ಸಮೃದ್ಧಿ ಮಂಜುನಾಥ್, ವೆಂಕಟಶಿವಾರೆಡ್ಡಿ, ವಿಧಾನ ಪರಿಷತ್ ಸದಸ್ಯ ಗೋವಿಂದರಾಜ್, ಜಿ ಕೃಷ್ಣಾರೆಡ್ಡಿ ಶ್ರೀನಿವಾಸ್ ಮೂರ್ತಿ ರಾಮೇಗೌಡ ನರಸಿಂಹಮೂರ್ತಿ ಬೆಂಗಳೂರು ಗ್ರಾಮಾಂತರ ಜೆಡಿಎಸ್ ಜಿಲ್ಲಾಧ್ಯಕ್ಷ ಬಿ.ಮುನೇಗೌಡ ತಾಲೂಕು ಅಧ್ಯಕ್ಷ ಆರ್ ಮುನೇಗೌಡ ಪ್ರಧಾನ ಕಾರ್ಯದರ್ಶಿ.ಜಿ.ಎ ರವೀಂದ್ರ, ಇರಿಗೇನಹಳ್ಳಿ ಶ್ರೀನಿವಾಸ್ ಹೊಸಳ್ಳಿ.ಟಿ.ರವಿಕುಮಾರ್ ತಾಲೂಕಿನ ಮುಖಂಡರು ಇದ್ದರು.

# ಚಿಕ್ಕಬಳ್ಳಾಪುರದಲ್ಲಿ ನಡೆದ ಅದ್ದೂರಿ ಭಕ್ತ ಸಂಗಮ

**ಚಿಕ್ಕಬಳ್ಳಾಪುರ:** ಆದಿಚುಂಚನಗಿರಿ ಮಹಾ ಸಂಸ್ಥಾನ ಮಠ ಚಿಕ್ಕಬಳ್ಳಾಪುರ ಶಾಖೆವತಿಯಿಂದ ಯುಗಯೋಗಿ ಪದ್ಮಭೂಷಣ ಡಾ.ಬಾಲಗಂಗಾಧರನಾಥಸ್ವಾಮೀಜಿ ಅವರ 80ನೇ ವರ್ಷದ ಜಯಂತೋತ್ಸವವನ್ನು ಡಾ. ನಿರ್ಮಲಾನಂದನಾಥಸ್ವಾಮೀಜಿ ರವರ 12ನೇ ವರ್ಷದ ಪಟ್ಟಾಭಿಷೇಕ ವರ್ಷಾಚರಣೆ ಹಾಗೂ ರಜತ ತುಲಾಭಾರ, ವೀರಾಂಜನೇಯಸ್ವಾಮಿ 12ನೇ ವರ್ಷದ ಮಹಾಕುಂಭಾಭೀಷೇಕ, ಬಿಜಿಎಸ್ ಚಿಕ್ಕಬಳ್ಳಾಪುರ ಶಾಖೆಯ 27ನೇ ವರ್ಷದ ವಾರ್ಷಿಕೋತ್ಸವ ಮತ್ತು ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಸ್ಥಾಪಿತ 50ನೇ ವರ್ಷದ ಸುವರ್ಣಮಹೋತ್ಸವ ಸೇರಿ ಒಟ್ಟಿಗೆ ಹಮ್ಮಿಕೊಂಡಿದ್ದ ಭಕ್ತಸಂಗಮ ಕಾರ್ಯಕ್ರಮದಲ್ಲಿ ಮಾಜಿ ಪ್ರಧಾನಿ ಹಾಲಿ ರಾಜ್ಯ ಸಭಾ ಸದಸ್ಯರಾದ ಹೆಚ್.ಡಿ.ದೇವೇಗೌಡರು ಸೇರಿದಂತೆ ಶಾಸಕರು,ಜನಪ್ರತಿನಿಧಿಗಳು ಭಾಗವಹಿಸಿ ಆಶೀರ್ವಾದ ಪಡೆದರು.

ಚಿಕ್ಕಬಳ್ಳಾಪುರ ಬಿಜಿಎಸ್ ಶಾಖಾ ಮಠದಿಂದ ಯುಗಯೋಗಿ ಪದ್ಮಭಷಣ ಡಾ. ಬಾಲಗಂಗಾಧರ ನಾಥಸ್ವಾಮೀಜಿ ಅವರ 80ನೇ ವರ್ಷದ ಜಯಂತೋತ್ಸವ ಡಾ. ನಿರ್ಮಲಾನಂದನಾಥಸ್ವಾಮೀಜಿ ರವರ 12ನೇ ವರ್ಷದ ಪಟ್ಟಾಭಿಷೇಕ ವರ್ಷಾಚರಣೆ ಹಾಗೂ ರಜತ ತುಲಾಭಾರ,ವೀರಾಂಜನೇಯಸ್ವಾಮಿ 12ನೇ ವರ್ಷದ ಮಹಾಕುಂಬಾಬಿಷೇಕ,ಬಿಜಿಎಸ್ ಚಿಕ್ಕಬಳ್ಳಾಪುರ ಶಾಖೆಯ 27ನೇ ವರ್ಷದ ವಾರ್ಷಿಕೋತ್ಸವ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಸ್ಥಾಪಿತ 50ನೇ ವರ್ಷದ ಸುವರ್ಣಮಹೋತ್ಸವ ಸೇರಿ ಒಟ್ಟಿಗೆ ಹಮ್ಮಿಕೊಂಡಿದ್ದ ಭಕ್ತಸಂಗಮ ಕಾರ್ಯಕ್ರಮದಲ್ಲಿ ಮಾಜಿ ಪ್ರಧಾನಿ ಹಾಲಿ ರಾಜ್ಯ ಸಭಾ ಸದಸ್ಯರಾದ ಹೆಚ್.ಡಿ.ದೇವೇಗೌಡರು ಸೇರಿದಂತೆ ಶಾಸಕರು,ಜನಪ್ರತಿನಿಧಿಗಳು ಬಾಗವಹಿಸಿ ಆಶೀರ್ವಾದ ಪಡೆದರು.





ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಸ್ವಾಮೀಜಿಯವರ ತೂಕದಷ್ಟು ಬೆಳ್ಳಿ ನೀಡಿದ ಭಕ್ತರು ತುಲಾಭಾರದಲ್ಲಿ ಮಠದ ಪರಂಪರೆಯಂತೆ ಚಿನ್ನದ ಕಿರೀಟ, ಚಿನ್ನದ ಸರಗಳು ಹಾಕಿ ಸ್ವಾಮೀಜಿಯಿಂದ ಆಶೀರ್ವಾದ ಪಡೆದರು.

ವೇದಿಕೆ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ದಿವಂಗತ ಪದ್ಮಭೂಷಣ ಡಾ.ಬಾಲಗಂಗಾಧರ ನಾಥ ಸ್ವಾಮೀಜಿ ಇದ್ದಾಗಿಂದಲೂ ಆದಿಚುಂಚನಗಿರಿ ಜತೆ ಸಂಪರ್ಕ ಇಟ್ಟುಕೊಂಡು ಈಗಿನ ಮಹಾ ಪೀಠಾಧ್ಯಕ್ಷರಾದ ಡಾ. ನಿರ್ಮಲಾನಂದನಾಥಸ್ವಾಮೀ ವರೆಗೂ ಅವರ ಆಶೀರ್ವಾದ ಪಡೆದುಕೊಂಡೆ ರಾಜ್ಯದ ಜನರ ಸೇವೆಯಲ್ಲಿ ತೊಡಗಿಕೊಂಡಿದ್ದೇನೆ. ಅವರ ಆಶೀರ್ವದ ದಿಂದ ಕೆಂಪುಕೋಟೆ ಮೇಲೆ ಬಾವುಟ ಹಾರಿಸಿದ್ದೇನೆ.

ಲಕ್ಷಾಂತರ ಜನರ ನೀರಿನ ದಾಹ ತೀರಿಸಲು ಪ್ರಯತ್ನ ಮಾಡಿದ್ದೇನೆ ಇಷ್ಟಾದರೂ ಜನಸೇವೆಯ ದಾಹ ನನಗೆ ತೀರಿಲ್ಲ ವೀರಾಂಜನೇಯಸ್ವಾಮಿ ಆಶೀರ್ವಾದ ನೀಡಿದರೆ ಇನ್ನಷ್ಟು ವರ್ಷಗಳ ಕಾಲ ಜನಸೇವೆ ಮಾಡಬೇಕೆಂದಿದ್ದೇನೆ. ಚಿಕ್ಕಬಳ್ಳಾಪುರ ಕ್ಕೂ ನನಗೂ ಕುಟುಂಬ ಸಂಬಂದವಿದೆ ಇಲ್ಲಿ ಆಲೂಗಡ್ಡೆ ತೆಗೆದುಕೊಂಡು ಹೋಗಲು ಬರುತಿದ್ದೆ. ಆಗಿಂದಲೂ ಇಲ್ಲಿತನಕ ರೈತರ ಜತೆ ಸಂಭಂದ ಇಟ್ಟುಕೊಂಡಿದ್ದೇನೆ ಎಂದು ತಿಳಿಸಿದರು.

ಇಂದು ನಡೆದ ಬಿಜಿಎಸ್ ಮಠದ ಭಕ್ತ ಸಂಗಮ ಕಾರ್ಯಕ್ರಮದಲ್ಲಿ ಸಾವಿರಾರು ಜನ ಪಾಲ್ಗೊಂಡು ಕುಂಬಾಬಿಷೇಕ ಹೋಮ ಹವನ ಹಾಗೂ ಇಲ್ಲಿ ನಡೆದ ಭಕ್ತಿಯ ಎಲ್ಲಾ ಪೂಜೆಗಳ ದರ್ಶನ ಪಡೆದು ಪುನೀತರಾದರು.

ವೇದಿಕೆಯಲ್ಲಿ ಚಿತ್ರದುರ್ಗದ ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ, ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಎಲ್ಲಾ ಶಾಖೆಯ ಸ್ವಾಮೀಜಿಗಳು, ಶಿಡ್ಲಘಟ್ಟ ಶಾಸಕರಾಧ ರವಿಕುಮಾರ್, ಪುಟ್ಟಸ್ವಾಮಿಗೌಡ, ಶಾಸಕ ಕೆ.ವೈ.ನಂಜೇಗೌಡ, ವೆಂಕಟಶೀವಾ ರೆಡ್ಡಿ, ವಿಧಾನ ಪರಿಷತ್ ಸದಸ್ಯ ಕೋಲಾರ ಅನಿಲ್ ಕುಮಾರ್, ಮಾಜಿ ಶಾಸಕ ಕೆ.ಪಿ.ಬಚ್ಚೇಗೌಡರ ಕುಟುಂಬ, ಮಾಜಿ ಎಂ.ಎಲ್.ಸಿ ವೈಎ ನಾರಾಯಣಸ್ವಾಮಿ, ಕೇಶವರೆಡ್ಡಿ, ಯಲುವಹಳ್ಳಿ ರಮೇಶ್,ಕೆ.ವಿ. ನಾಗರಾಜ್,ಟಿ.ಪಿ.ಎಸ್ ಮಾಜಿ ಅಧ್ಯಕ್ಷ ಗರಿಗರೆಡ್ಡಿ,ಗಿರೀಶ್ ಹರಿಸ್ಥಳ, ಮರಳಕುಂಟೆ ಕೃಷ್ಣಮೂರ್ತಿ, ಅಂಜಿನಯ ರೆಡ್ಡಿ, ಪ್ರಕಾಶ್, ಉಷಾ ಅಂಜಿನಯ ರೆಡ್ಡಿ ಹಾಗೂ ಮುಖಂಡರ ಮತ್ತು ಭಕ್ತ ಸಮೂಹ ಭಾಗವಹಿಸಿದ್ದರು.

# ಸಹಕಾರ ಸಂಘದ ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆ

**ಕೊರಟಗೆರೆ:** ತಾಲ್ಲೂಕಿನ ಕೋಡ್ಲಹಳ್ಳಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ–ಉಪಾಧ್ಯಕ್ಷರ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಕೆ.ಸಿ.ಪ್ರದೀಪ್, ಉಪಾಧ್ಯಕ್ಷೆಯಾಗಿ ಸಿ.ಎಸ್.ಲಕ್ಷ್ಮೀರಂಗಧಾಮಯ್ಯ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಸಿಡಿಒ ಗುರುರಾಜ್ ಘೋಷಣೆ ಮಾಡಿದ್ದಾರೆ.

ಕೊರಟಗೆರೆತಾಲ್ಲೂಕಿನ ಹೊಳವನಹಳ್ಳಿ ಹೋಬಳಿಯ ಕ್ಯಾಮೇನಹಳ್ಳಿ ಗ್ರಾಪಂ ವ್ಯಾಪ್ತಿಯ ಕೋಡ್ಲಹಳ್ಳಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ–ಉಪಾಧ್ಯಕ್ಷರ ಚುನಾವಣೆಯಲ್ಲಿ–ಅಧ್ಯಕ್ಷ ಸ್ಥಾನಕ್ಕೆ ಕೆ.ಸಿ.ಪ್ರದೀಪ್ ಉಪಾಧ್ಯಕ್ಷೆ ಸ್ಥಾನಕ್ಕೆ ಸಿ.ಎಸ್.ಲಕ್ಷ್ಮೀರಂಗಧಾಮಯ್ಯ ಅವರು ಮಾತ್ರ ನಾಮಪತ್ರ ಸಲ್ಲಿಸಿದ ಕಾರಣ ಇಬ್ಬರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನೂತನಅಧ್ಯಕ್ಷರಾಗಿ ಪ್ರದೀಪ್ ಮಾತನಾಡಿಗೃಹ ಸಚಿವ ಡಾ.ಜಿ.ಪರಮೇಶ್ವರ್ ಹಾಗೂ ಸಹಕಾರ ಸಚಿವರಾಜಣ್ಣಅವರವರ್ಮಾಗದರ್ಶನ ಹಾಗೂ ಸಹಕಾರ ಪಡೆದ ನಮ್ಮ ಸಂಘದ ವ್ಯಾಪ್ತಿಗೆ ಬರುವರೈತರಿಗೆ , ಬೀದಿಬದಿಯ ವ್ಯಾಪಾರಿಗಳಿಗೆ ಸರ್ಕಾರ ಸೌಲಭ್ಯವನ್ನ ನೀಡಲು ಪ್ರಮಾಣಿಕ ಪ್ರಯತ್ನ ಮಾಡಲಾಗುವುದು, ನನ್ನ ಸಹಕಾರ ಸಂಘದಅಧ್ಯಕ್ಷನಾಗಿಆಯ್ಕೆ ಮಾಡಿದ ನನ್ನಎಲ್ಲಾ ನಿರ್ದೇಶಕರಿಗೆ , ಊರಿನಗ್ರಾಮಸ್ಥರಿಗೆ, ಹಾಗೂ ಮುಖಂಡರಿಗೆ ಧನ್ಯವಾದವನ್ನ ತಿಳಿಸಿದರು.

ಉಪಾಧ್ಯಕ್ಷೆ ಸಿ.ಎಸ್.ಲಕ್ಷ್ಮೀರಂಗಧಾಮಯ್ಯ ಮಾತನಾಡಿಒಂದು ಸಹಕಾರ ಸಂಘ ಅಭಿವೃದ್ಧಿ ಹೊಂದಬೇಕಾದರೆ ನಮ್ಮರೈತರು, ಊರಿನ ವ್ಯಾಪಾರಿಗಳ ಸಹಕಾರ ಮುಖ್ಯ. ಸಾಲ ಸೌಲಭ್ಯ ಸೇರಿದಂತೆಇಲ್ಲಾ ವ್ಯವಹಾರವನ್ನ ಸಹಕಾರ ಸಂಘಗಳಲ್ಲಿ ನಡೆಸಿದರೆ.ಸಂಘಗಳು ಅಭಿವೃದ್ಧಿ ಆಗಲು ಸಾಧ್ಯ.ಊರಿನ ಮುಖಂಡರುಗ್ರಾಮಸ್ಥರ ಸಹಕಾರದಿಂದಉ ಪಾಧ್ಯಕ್ಷೆಯಾಗಿಅಧಿಕಾರ ವಹಿಸಿಕೊಳ್ಳುತ್ತಿದ್ದೇನೆ ಎಲ್ಲಾರಿಗೂ ನನ್ನಹೃದಯ ಪೂರ್ವಕ ಧನ್ಯವಾದಗಳು ಎಂದು ಹೇಳಿದರು.

ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷಆಶ್ವಥ್‌ನಾರಾಯಣ್ ಮಾತನಾಡಿಗೃಹ ಸಚಿವ ಡಾ.ಜಿ.ಪರಮೇಶ್ವರ್ ಹಾಗೂ ಸಹಕಾರ ಸಚಿವರಾಜಣ್ಣಅವರಆದೇಶದಂತೆ ಕೋಡ್ಲಹಳ್ಳಿ ಸಹಕಾರ ಸಂಘದಅಧ್ಯಕ್ಷಉಪಾಧ್ಯಕ್ಷೆ ಸ್ಥಾನಗಳಿಗೆ ಅವಿರೋಧಆಯ್ಕೆಯಾಗಿದ್ದು, ಸುಮಾರು 30 ವರ್ಷಗಳ ನಂತರಅವಿರೋದವಾಗಿಆಯ್ಕೆಯಾಗಿರುವುದು ಸಂತಸತಂದಿದೆ. ಎಂದು ತಿಳಿಸಿದರು. ಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಬೋರಣ್ಣ ಮಾತನಾಡಿಕಳೆದ 30 ವರ್ಷಗಳ ಹಿಂದೆ ಸಹಕಾರದಲ್ಲಿಚುನಾವಣೆಇಲ್ಲದೇಆಯ್ಕೆಯಾಗಿದೆ.ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷಆಶ್ವಥ್‌ನಾರಾಂಯಣ್‌ಅವರ ನೇತೃತ್ವದಲ್ಲಿಎಲ್ಲ ನಿರ್ದೇಶಕರ ಸಹಕಾರ ಪಡೆದುಅವಿರೋಧವಾಗಿಆಯ್ಕೆ ಮಾಡಿದ್ದಾರೆ.ನಮ್ಮ ಸಹಕಾರ ಸಂಘದ ವಹಿವಾಟು 900 ಕ್ವಂಟಲ್‌ನಷ್ಟುಅಡಿಕೆದಾಸ್ತಾನು ಮಾಡಲಾಗಿದೆ.ಅಡಿಕೆಅಂತ 2 ಕೋಟಿಯಷ್ಟು ಸಾಲ ನೀಡಲಾಗಿದೆ.ಸುಮಾರು 2.5 ಕೋಟಿಯಷ್ಟು ಸಾಲವನ್ನ ನೀಡಲಾಗಿದೆಎಂದು ತಿಳಿಸಿದರು.

ಇದೆ ಸಂದರ್ಭದಲ್ಲಿಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಬೋರಣ್ಣಮುಖ್ಯಕಾರ್ಯನಿರ್ವಣಾಧಿಕಾರಿಐ.ಕೆ.ಬಾಬು ನಿರ್ದೇಶಕರಾದಜಗದೀಶ್, ಬಸವರಾಜು, ಬಲರಾಜು, ಮಂಜುನಾಥ್, ಪಾರ್ವತಮ್ಮ, ಕೆಂಪರಾಜು, ಸಿದ್ದಲಿಂಗಪ್ಪ, ಶಿವರಾಜು, ನರಸಿಂಹಮೂರ್ತಿ, ರಾಜಗೋಪಾಲರೆಡ್ಡಿ ಮುಖಂಡರಾದಚಂದ್ರಣ್ಣ, ಉಮಣ್ಣ, ಶ್ರೀನಿವಾಸ್, ಶಶಿಕುಮಾರ್, ರಾಘವೇಂದ್ರ, ಕುಮಾರ್, ಹನುಮಂತರಾಜು, ನಾಗರಾಜು, ವರದರಾಜು, ವಿದ್ಯಾಶಂಕರ್, ರಾಮಚಂದ್ರ, ಸೇರಿದಂತೆಇತರರುಇದ್ದರು.



# ಮಲೆ ಮಾದಪ್ಪನ ಸನ್ನಿಧಿಯಲ್ಲಿ ಇಂದಿನಿಂದ 5 ದಿನ ಶಿವರಾತ್ರಿ ಜಾತ್ರೆ

**ವರದಿ: ಪ್ರಕಾಶ್ ಕಾಮಗೆರೆ**

**ಹನೂರು:** ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಮಹಾಲಯ ಅಮಾವಾಸ್ಯೆ ವಿಶೇಷ ಮಹಾಶಿವರಾತ್ರಿ ಜಾತ್ರಾ ಮಹೋತ್ಸವ ಕಾರ್ಯಕ್ರಮಗಳು 5 ದಿನಗಳ ಕಾಲ ವಿಶೇಷ ಪೂಜೆ ಸೇವೆ. ಎಣ್ಣೆಮಜ್ಜನ ಸೇವೆ, ಅಮಾವಾಸ್ಯೆ ಪೂಜೆ, ಮಹಾರಥೋತ್ಸವದ ಸೇವೆ ಮಹದೇಶ್ವರರ ಸಾಂಪ್ರದಾಯಿಕ ಪೂಜಾ ಕೈಂಕರ್ಯಗಳು ಲಕ್ಷಾಂತರ ಭಕ್ತಾದಿಗಳ ಸಮ್ಮುಖದಲ್ಲಿ ಜರುಗಲಿದೆ.


ಮಹದೇಶ್ವರ ಸ್ವಾಮಿ ದೇವಾಲಯದಲ್ಲಿ ಫೆ 25 ರಿಂದ ಮಹಾಶಿವರಾತ್ರಿ ಜಾತ್ರಾ ಮಹೋತ್ಸವ ಪ್ರಾರಂಭವಾಗಲಿದೆ. ಫೆ 26 ರಂದು ಮಹದೇಶ್ವರ ಸ್ವಾಮಿಗೆ ಎಣ್ಣೆ,ಮಜ್ಜನ ಸೇವೆ, ಉತ್ಸವಾಧಿಗಳು, ಜಾಗರಣೆ ಉತ್ಸವ ಜರುಗಲಿದ್ದು, ಫೆ 27 ರಂದು ಶ್ರೀ ಮಹದೇಶ್ವರಸ್ವಾಮಿಗೆ ವಿಶೇಷ ಸೇವೆ ಉತ್ಸವಗಳು ನಡೆಯುತ್ತವೆ.

ಫೆ.28ರಂದು ಅಮಾವಾಸ್ಯೆ ಪ್ರಯುಕ್ತ ವಿಶೇಷಪೂಜೆ, ಸೇವಾ ಉತ್ಸವಾಧಿಗಳು, ಮಾ 1 ರ ಬೆಳಗ್ಗೆ ಶಿವರಾತ್ರಿ ಜಾತ್ರೆ ಮಹಾರಥೋತ್ಸವ ಜರುಗಲಿದೆ. ರಾತ್ರಿ ಅಭೀಷೇಕ ಪೂಜೆ ಬಳಿಕ ಕೊಂಡೋತ್ಸವ ನಡೆಯಲಿದ್ದು, ಕೊಂಡೋತ್ಸವದ ಮೂಲಕ ಮಹಾ ಶಿವರಾತ್ರಿ ಜಾತ್ರೆಗೆ ತೆರೆ ಎಳೆಯಲಾಗುತ್ತದೆ.

ಮಹದೇಶ್ವರ ಬೆಟ್ಟದ ಬೇಡಗಂಪಣ ಅರ್ಚಕರು ಮಹಾಶಿವರಾತ್ರಿ ಜಾತ್ರಾ ಮಹೋತ್ಸವದ ರಥ ನಿರ್ಮಾಣ ಕಾರ್ಯ ಕೈಗೆತ್ತಿಕೊಂಡು ಈಗಾಗಲೇ ಮಹಾರಥಃ ಸಿದ್ಧಗೊಂಡಿದೆ. ಇದನ್ನು ಬಿದುರು ಹಾಗೂ ಉರಿಯ ಹಗ್ಗಗಳಿಂದ ರಥವನ್ನು ನಿರ್ಮಾಣ ಮಾಡಲಾಗಿದ್ದು, ವಸ್ತ್ರ ಧಾರಣೆ ಸಹ ಆಗಿದ್ದು ಆಕರ್ಷಣೆಯಾಗಿ ತೇರನ್ನು ಕಂಗೊಳಿಸುವಂತೆ ಮಾಡಿದ್ದಾರೆ.

ಮಾ:01ರ ಶನಿವಾರ ಬೆಳಗ್ಗೆ 8.10ರಿಂದ 8.45ರ ಒಳಗೆ ಶಿವರಾತ್ರಿ ಮಹಾರಥೋತ್ಸವ ಪ್ರಾರಂಭವಾಗಲಿದ್ದು, ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ವಿಬೃಂಜಣೆಯಿಂದ ಸಾಗಲಿದೆ.

ಮಲೆ ಮಾದಪ್ಪನ ಭಕ್ತರಿಗೆ ಪ್ರಾಧಿಕಾರದಿಂದ **ಸಕಲ ಸಿದ್ಧತೆ:** ಐದು ದಿನಗಳ ಕಾಲ ವಿಬೃಂಜಣೆಯಿಂದ ಮಹಾಶಿವರಾತ್ರಿ ಜಾತ್ರೆ ಜರುಗಲಿದ್ದು, ಶ್ರೀ ಮಲೆ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ವಿಶೇಷ ದಾಸೋಹ ವ್ಯವಸ್ಥೆ ಸೇರಿದಂತೆ



ರಾಜಗೋಪುರದ ಮುಂಭಾಗ ಹಾಗೂ ಕ್ಯೂ ಲೇನ್, ನೆರಳಿನ ವ್ಯವಸ್ಥೆ ಮಾಡಲಾಗಿದೆ.

ದರ್ಶನ ಮಾಡುವ ವೇಳೆ ಭಕ್ತರ ನೂಕ ನುಗ್ಗಲು ತಡೆಗಟ್ಟಲು ಸರತಿ ಸಾಲು ನಿರ್ಮಾಣ ಮಾಡಲಾಗಿದ್ದು, ಹೆಚ್ಚುವರಿ ಲಾಡು ಕೌಂಟರ್ ತೆರೆಯಲಾಗಿದೆ. 3 ಲಕ್ಷ ಲಾಡು ಸಂಗ್ರಹವಾಗಿದ್ದು, ಅಗತ್ಯ ತಕ್ಕಂತೆ ಲಾಡು ಸಿದ್ದವಾಗಲಿದೆ. ವಿವಿಧ ಕಡೆಗಳಲ್ಲಿ ಕುಡಿಯುವ ನೀರು, ಶೌಚಗೃಹ ಮತ್ತು ಇನ್ನಿತರ ಅಗತ್ಯ ಸೌಕರ್ಯ ಒದಗಿಸಿ ಜಾತ್ರೆಗೆ ಸಜ್ಜಾಗಿದ್ದಾರೆ.

ವಿಶೇಷವಾಗಿ 500 ಬಸ್ ಸಂಚಾರ ಮಾಡಲಿದ್ದು, ಫೆ 25 ರಿಂದ ಮಾ.01 ರವರೆಗೆ ಶಿವರಾತ್ರಿ ಜಾತ್ರಾ ಜರುಗಲಿದೆ ಹೀಗಾಗಿ ಮಹದೇಶ್ವರಬೆಟ್ಟಕ್ಕೆ ತೆರಳುವ ದ್ವಿ–ಚಕ್ರ ವಾಹನಗಳನ್ನು ತಾತ್ಕಲಿಕ ನಿರ್ಬಂಧ ವಿಧಿಸಿದ್ದು, ಕೌದಳ್ಳಿ ಗ್ರಾಮದ ಬಳಿ ದ್ವಿಚಕ್ರ ವಾಹನ ನಿಲುಗಡೆ ಸೌಲಭ್ಯ ಕಲ್ಪಿಸಲಾಗಿದೆ.

ದೇವಾಲಯ ಹಾಗೂ ಸುತ್ತಮುತ್ತ ಕಣ್ಮನಸೆಳೆಯುವ ವಿದ್ಯುತ್ ದೀಪಾಲಂಕ ಮಾಡಲಾಗಿದ್ದು ಪೋಲೀಸ್ ಬಂದೋಬಸ್ತ್ ಸಹ ಕೈಗೊಳ್ಳಲಾಗಿದೆ. ಈಗಾಗಲೆ ಜಾತ್ರೆ ಪ್ರಯುಕ್ತ ಕಾಲ್ನಡಿಗೆ ಹಾಗೂ ವಾಹನಗಳ ಮೂಲಕ ಆಗಮಿಸಿದ ಲಕ್ಷಾಂತರ ಭಕ್ತರು ಪ್ರಾರಂಗಣ, ಶ್ರೀ ಸಾಲೂರು ಬೃಹನ್ಮಠ ಹಾಗೂ ಇನ್ನಿತರ ಖಾಲಿ ಜಾಗಗಳಲ್ಲಿ ಬಿಡಾರ ಹೂಡಿದ್ದಾರೆ.

ಪ್ಲಾಸ್ಟಿಕ್ ಮುಕ್ತ ಹಾಗೂ ಸ್ವಚ್ಛತೆ ಕಾಪಾಡಲು ತಾಳುಬೆಟ್ಟದಿಂದ ಮಹದೇಶ್ವರ ಬೆಟ್ಟತನಕ ಅಲ್ಲಲ್ಲಿ ಕಸದ ಬುಟ್ಟಿ, ಲಗೇಜ್ ಕೌಂಟರ್, ಕುಡಿಯುವ ನೀರು, ಅಂತರ ಗಂಗೆಯಲ್ಲಿ ಸ್ನಾನ ವ್ಯವಸ್ಥೆ, ದಾಸೋಹ, ನೆರಳಿನ ವ್ಯವಸ್ಥೆ, ಪಾಕಿರ್‌ಂಗ್, ಶೌಚಗೃಹ, ಲಾಡು, ಕಲ್ಲು ಸಕ್ಕರೆ ಪ್ರಸಾದ, ಸೇವಾ ಕೌಂಟರ್ , ವಸತಿಗೃಹ ಸೇರಿ ಅಗತ್ಯ ಅನುಕೂಲಗಳನ್ನು ಕಲ್ಪಿಸಲು ಈಗಾಗಲೇ ಶ್ರೀಮಲೆ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಸಿದ್ಧತೆ ಕೈಗೊಂಡಿದೆ.

**ಕಾವೇರಿ ನದಿ ದಾಟಿದ ಸಹಸ್ರಾರು ಭಕ್ತಾದಿಗಳು:**

ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶಿವರಾತ್ರಿ ಜಾತ್ರಾ ಮಹೋತ್ಸವದ ಪ್ರಯುಕ್ತ ಶ್ರೀ ಮಲೆ ಮಹದೇಶ್ವರ ಸ್ವಾಮಿಯ ಬೆಟ್ಟಕ್ಕೆ ಕಾಲ್ನಡಿಗೆಯಲ್ಲಿ ಹೋಗುವ ಎಲ್ಲಾ ಭಕ್ತಾದಿಗಳು ರಾಮನಗರ ಜಿಲ್ಲೆಯ ಕನಕಪುರ ತಾಲೂಕು ವ್ಯಾಪ್ತಿಯಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ಭಕ್ತಾದಿಗಳು ಕಾವೇರಿ ನದಿ ದಾಟಿ ಆಗಮಿಸಿದ್ದಾರೆ. ಹರಕೆ ಹೊತ್ತ ಭಕ್ತರು ಊಟ ತಿಂಡಿ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ನದಿ ದಾಟಿ ಬರುವ ಭಕ್ತಾದಿಗಳ ಸುರಕ್ಷತೆಗಾಗಿ ಅರಣ್ಯ ಇಲಾಖೆ ಹಾಗೂ ಪೊಲೀಸ್ ಇಲಾಖೆ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲಾಗಿದೆ.

**ಕಾವೇರಿ ನದಿಪಾತ್ರದ ಸ್ಥಳಕ್ಕೆ ಎಸ್ಪಿ ಭೇಟಿ:**

ಹನೂರು ಠಾಣಾ ವ್ಯಾಪ್ತಿಯ ಬಸವನಕಡ ಗ್ರಾಮದ ಕಾವೇರಿ ನದಿಪಾತ್ರದ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕವಿತಾ ಅವರು ಭೇಟಿ ನೀಡಿ ಮಹಾಶಿವರಾತ್ರಿ ಪ್ರಯುಕ್ತ ಮಲೈ ಮಹದೇಶ್ವರ ಬೆಟ್ಟಕ್ಕೆ ನದಿಪಾತ್ರದ ಮುಖಾಂತರ ಸಾವಿರಾರು ಭಕ್ತರು ಕಾಲ್ನಡಿಗೆಯಲ್ಲಿ ಭೇಟಿ ನೀಡುತ್ತಿರುವ ಸಂಬಂಧ ಸ್ಥಳ ಪರಿಶೀಲನೆ ನಡೆಸಿ ಸೂಕ್ತ ಸುರಕ್ಷತಾ ಕ್ರಮಗಳನ್ನು ಅನುಸರಿಸುವಂತೆ ಅಧಿಕಾರಿಗಳಿಗೆ ಸಲಹೆ ಸೂಚನೆಗಳನ್ನು ನೀಡಿದ್ದಾರೆ. ಹಾಗೂ ಮಲೆ ಮಾದೇಶ್ವರ ಬೆಟ್ಟದಲ್ಲಿ ಜರಗಲಿರುವ ಶಿವರಾತ್ರಿ ಜಾತ್ರಾ ಮಹೋತ್ಸವಕ್ಕೆ ಪೋಲಿಸ್ ಬಿಗಿ ಭದ್ರತೆ ಒದಗಿಸಲಾಗಿದೆ.

ಪಾದಯಾತ್ರೆ ಭಕ್ತಾದಿಗಳಿಗೆ ನೇರ ದರ್ಶನದ ವ್ಯವಸ್ಥೆ: ಪವಾಡ ಪುರುಷ ಶ್ರೀ ಮಲೆ ಮಾದಪ್ಪನ ದರ್ಶನ ಪಡೆದು ಹರಕೆ ಪೂಜೆ ಸೇವೆ ಸಲ್ಲಿಸಲು ಕಾಲ್ನಡಿಗೆಯಲ್ಲಿ ಆಗಮಿಸುವ ಸಹಸ್ರಾರು ಭಕ್ತಾದಿಗಳಿಗೆ ನೇರ ದರ್ಶನಕ್ಕೆ ಪ್ರಾಧಿಕಾರ ಆಡಳಿತ ಮಂಡಳಿ ವ್ಯವಸ್ಥೆ ಕಲ್ಪಿಸಲಾಗಿದೆ. ಬೆಳಗ್ಗೆಯಿಂದ ಸಂಜೆಯವರೆಗೂ ಕಾಲ್ನಡಿಗೆಯಲ್ಲಿ ಬರುವಂತಹ ಭಕ್ತಾದಿಗಳು ಸರತಿ ಸಾಲಿನಲ್ಲಿ ತೆರಳಿ ಮಲೆ ಮಾದಪ್ಪನ ದರ್ಶನವನ್ನು ಪಡೆಯುತ್ತಿದ್ದಾರೆ.

ಶಿವರಾತ್ರಿ ಜಾತ್ರೆ ಹಿನ್ನೆಲೆ ಡಿವೈಎಸ್ಪಿ. 9 ಜನ ಇನ್ಸ್ಪೆಕ್ಟರ್. 421 ಕಾನ್ಸ್‌ಟೆಬಲ್ 98 ಜನ. ಮಹಿಳಾ ಪೊಲೀಸರು. 481 ಗೃಹರಕ್ಷಕರು ಕೆಎಸ್‌ಆರ್‌ಪಿ ಒಂದು ತುಕುಡಿಯನ್ನು. ನಿಯೋಜನೆ ಮಾಡಲಾಗಿದೆ. ಹಾಗೂ ಮಹಾಶಿವರಾತ್ರಿ ಜಾತ್ರಾ ಮಹೋತ್ಸವಕ್ಕೆ ಕೆ.ಎಸ್. ಆರ್.ಟಿ.ಸಿ ವತಿಯಿಂದ ರಾಮನಗರ ಚನ್ನಪಟ್ಟಣ ಬೆಂಗಳೂರು ಚಾಮರಾಜನಗರ ಮಂಡ್ಯ ಹಾಗೂ ಇನ್ನಿತರ ಡಿಪೋಗಳಿಂದ ಒಟ್ಟು 500 ಕೆಎಸ್‌ಆರ್‌ಟಿಸಿ ಸಾರಿಗೆ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ.

ಬಾಕ್ಸ್

**ಮಲೆ ಮಾದಪ್ಪನ ದರ್ಶನ ಪಡೆದ ವಿದೇಶಿಗರು (ವಿದೇಶಿಗರು)**

ಹನೂರು: ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆಯುವ ಮಹಾವಿದ್ಯಾಲಯ ಅಮಾವಾಸ್ಯೆ ಶಿವರಾತ್ರಿ ಜಾತ್ರಾ ಮಹೋತ್ಸವದ ವೀಕ್ಷಣೆಗೆ ವಿದೇಶಿ ಭಕ್ತರು ಆಗಮಿಸಿ ಮಲೆ ಮಾದಪ್ಪನ ದರ್ಶನ ಪಡೆದಿದ್ದಾರೆ. ಹಾಗೂ ಇಲ್ಲಿನ ಸಾಂಪ್ರದಾಯಿಕ ಪೂಜಾ ಆಚರಣೆಗಳ ಬಗ್ಗೆ ತಿಳಿದುಕೊಂಡು ಸಂತಸ ವ್ಯಕ್ತಪಡಿಸಿದ್ದಾರೆ.

ಶ್ರೀ ಮಲೆ ಮಹದೇಶ್ವರ ಬೆಟ್ಟಕ್ಕೆ ಬಂದಿರುವ ವಿದೇಶದ ಪ್ರವಾಸಿಗ ಭಕ್ತರು ಸಾಮಾನ್ಯರಲ್ಲಿ ಸಾಮಾನ್ಯರಂತೆ ಸರತಿ ಸಾಲಿನಲ್ಲಿ ನಿಂತು ಮಲೆ ಮಹದೇಶ್ವರ ಸ್ವಾಮಿ ಅವರ ದರ್ಶನ ಪಡೆದಿದ್ದಾರೆ. ಈ ಹಿಂದೆಯೂ ಕೂಡ ವಿಶೇಷ ದಿನಗಳಲ್ಲಿ ವಿದೇಶಿಗರು ಶ್ರೀ ಕ್ಷೇತ್ರಕ್ಕೆ ಬಂದು ಮಲೆ ಮಾದಪ್ಪನ ದರ್ಶನ ಪಡೆದಿದ್ದರು.

ಮಲೆ ಮಹದೇಶ್ವರರು ನೆಲೆಸಿರುವ ನೆಲದಲ್ಲಿ ಭಕ್ತಿ ಮತ್ತು ಸಂಪ್ರದಾಯವು ತುಂಬಾ ವಿಶೇಷವಾಗಿದೆ. ಇಲ್ಲಿ ನಡೆಯುವ ಹಬ್ಬದ ಆಚರಣೆ ಜಾತ್ರೆಯನ್ನು ವೀಕ್ಷಿಸಿಸಲು ಭಾರತ ಮತ್ತು ವಿದೇಶಗಳಿಂದ ಅಸಂಖ್ಯಾತ ಭಕ್ತರನ್ನು ಈ ಕ್ಷೇತ್ರ ಗಮನ ಸೆಳೆಯುವಲ್ಲಿ ಯಶಸ್ವಿಯಾಗುತ್ತಿರುವುದು ವಿಶೇಷವಾಗಿದೆ.

ಬಾಕ್ಸ್

**ತಾಳು ಬೆಟ್ಟದಲ್ಲಿ ವಾಹನಗಳ ತಪಾಸಣೆ: ಮದ್ಯ. ನೀರಿನ ಬಾಟಲ್ ವಶ(ಬಾಟಲ್)**

ಹನೂರು: ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಪ್ಲಾಸ್ಟಿಕ್ ನಿರ್ಬಂಧ ಹೇರಲಾಗಿದ್ದು. ಪ್ಲಾಸ್ಟಿಕ್ ನಿಷೇಧ ಮಾಡಲು ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ತಾಳು ಬೆಟ್ಟದಲ್ಲಿ ಚೆಕ್ ಪೋಸ್ಟ್ ನಿರ್ಮಾಸಿ ವಾಹನಗಳನ್ನು ತಪಾಸಣೆ ಮಾಡಲಾಗುತ್ತದೆ.

ಶ್ರೀ ಮಲೆ ಮಹದೇಶ್ವರ ಬೆಟ್ಟ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಸಿಬ್ಬಂದಿಗಳು ಹಾಗೂ ಅರಣ್ಯ ಇಲಾಖೆ ಪೊಲೀಸ್ ಇಲಾಖೆ ಸಹಯೋಗದೊಂದಿಗೆ ತಾಳು ಬೆಟ್ಟದಲ್ಲಿಯೇ ವಾಹನಗಳನ್ನು ತಪಾಸಣೆ ನಡೆಸಿ ನಂತರ ಬೆಟ್ಟದ ಕಡೆಗೆ ಬಿಡಲಾಗುತ್ತಿದೆ.

ತಾಳುಬೆಟ್ಟದಲ್ಲಿ ವಾಹನಗಳನ್ನು ತಪಾಸಣೆ ನಡೆಸಿದಾಗ ವಾಹನಗಳಲ್ಲಿ ಸಿಗುವಂತಹ ಪ್ಲಾಸ್ಟಿಕ್ ನೀರಿನ ಬಾಟಲ್. ಜ್ಯೂಸ್ ಬಾಟಲ್ ವಶಪಡಿಸಿಕೊಳ್ಳಲಾಗಿದೆ. ತಪಾಸಣೆಯ ವೇಳೆ ಮಧ್ಯಪ್ರಿಯರು ವಾಹನದಲ್ಲಿ ತಮಗೆ ಇಷ್ಟಾನುಸಾರ ಮಧ್ಯದ ಬಾಟಲ್ ಪೌಚ್ ತಂದಿರುತ್ತಾರೆ. ಅದನ್ನು ಸಹ ವಶಕ್ಕೆ ಪಡೆದುಕೊಳ್ಳಲಾಗಿದೆ.

ಮಹದೇಶ್ವರ ಬೆಟ್ಟಕ್ಕೆ ಬರುವ ಭಕ್ತಾದಿಗಳು ತಮ್ಮ ವಾಹನದಲ್ಲಿ ಪ್ಲಾಸ್ಟಿಕ್ ಬಳಕೆಯ ವಸ್ತುಗಳು ಹಾಗೂ ಮದ್ಯವನ್ನು (ಸಾರಾಯಿ) ತರದಂತೆ ನಿರ್ಬಂಧಿಸಲಾಗಿರುವ ಬಗ್ಗೆ ತಿಳಿಸಲಾಗಿದ್ದು. ಸಾರ್ವಜನಿಕ ಭಕ್ತಾದಿಗಳು ಪ್ರಾಧಿಕಾರದ ಅಗತ್ಯ ಸೂಚನೆ ನಿಯಮಗಳನ್ನು ಪಾಲಿಸಬೇಕೆಂದು ತಿಳಿಸಲಾಗಿದೆ.

# ಶುದ್ಧ ಕುಡಿಯುವ ನೀರು ಸರಬರಾಜು ಪಾಲಿಕೆಗೆ ಹಸ್ತಾಂತರ

**ಬೆಂಗಳೂರು :** ಬೆಂಗಳೂರು ನಗರದ ಶುದ್ಧ ಕುಡಿಯುವ ನೀರು ಘಟಕಗಳ ನಿರ್ವಹಣೆಯನ್ನು ಬಿಬಿಎಂಪಿಯಿಂದ ಬೆಂಗಳೂರು ಜಲಮಂಡಳಿಗೆ ಹಸ್ತಾಂತರಿಸುವಂತೆ ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ಸೂಚನೆ ನೀಡಿದ್ದಾರೆ. ಈ ಸಂಬಂಧ ನಗರರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಪತ್ರ ಮುಖೇನ ಸೂಚನೆ ನೀಡಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಬೆಂಗಳೂರು ನಗರದ ನಾಗರಿಕರಿಗೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವ ಜವಾಬ್ದಾರಿಯನ್ನು ಬೆಂಗಳೂರು ಜಲಮಂಡಳಿ ನಿರ್ವಹಿಸುತ್ತಿದೆ. ಪ್ರಸ್ತುತ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ ಬಿಬಿಎಂಪಿ ಸುಪರ್ದಿನಲ್ಲಿದೆ. ಇದನ್ನು ತಕ್ಷಣದಿಂದಲೇ ಬೆಂಗಳೂರು ಜಲಮಂಡಳಿಯ ಸುಪರ್ದಿಗೆ ವಹಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡುವಂತೆ ಅವರು ಪತ್ರದಲ್ಲಿ ತಿಳಿಸಿದ್ದಾರೆ. ಬೇಸಿಗೆ ಕಾಲದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ನೀರು ಪೂರೈಸುವ ಕೊಳವೆ ಬಾವಿಗಳು ಬತ್ತಿ ಹೋದಲ್ಲಿ ಈ ಘಟಕಗಳಿಗೆ ಬೇಕಾಗುವ ನೀರನ್ನು ಬೆಂಗಳೂರು ಜಲಮಂಡಳಿ ಮುಖಾಂತರವೇ ಪೂರೈಸಬೇಕಾಗುತ್ತದೆ. ಈ ಸಮಯದಲ್ಲಿ ಸಮನ್ವಯದ ಕೊರತೆ ಉಂಟಾಗಿ ನಾಗರಿಕರಿಗೆ ತೊಂದರೆಯಾಗುವುದನ್ನು ತಪ್ಪಿಸುವ ದೃಷ್ಠಿಯಿಂದ ಬೆಂಗಳೂರು ನಗರದ ನೀರು ಸರಬರಾಜು ನಿರ್ವಹಣೆ ಮಾಡುತ್ತಿರುವ ಬೆಂಗಳೂರು ಜಲಮಂಡಳಿಯವರಿಗೆ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ ಜವಾಬ್ದಾರಿ ವಹಿಸುವಂತೆಯೂ ಅವರು ಸೂಚಿಸಿದ್ದಾರೆ.

# ತೆಂಗಿನ ಮರ ಬಿದ್ದು ಮಗು ಸಾವು

**ಗೌರಿಬಿದನೂರು:** ಮನೆಯ ಮುಂದೆ ಆಟವಾಡುತ್ತಿದ್ದ 3 ವರ್ಷದ ಮಗುವಿನ ಮೇಲೆ ತೆಂಗಿನ ಮರ ಬಿದ್ದು ಸಾವನ್ನಪ್ಪಿರುವ ಘಟನೆ ತಾಲೂಕಿನ ಹಾಲಗಾನಹಳ್ಳಿಯಲ್ಲಿ ನಡೆದಿದೆ. ಪೃಥ್ವಿರಾಜ್ (3) ಮೃತ ಮಗುವಾಗಿದ್ದು, ಗರ್ಭಿಣಿ ತಾಯಿ ಮೋನಿಕಾ ಕಾಲಿಗೆ ಗಂಭೀರ ಗಾಯಗಳಾಗಿವೆ. ಕಳೆದ 15 ದಿನಗಳ ಹಿಂದೆ ಹೆರಿಗೆಗಾಗಿ ಮೋನಿಕಾ ತವರು ಮನೆ ಹಾಲಗಾನಹಳ್ಳಿಗೆ ಬಂದಿದ್ದರು. ಈ ವೇಳೆ ಈ ಅವಘಡ ಸಂಭವಿಸಿದೆ. ಮನೆಯ ಮುಂದೆ ಇದ್ದ ತೆಂಗಿನ ಮರ ಏಕಾ ಏಕಿ ಮುರಿದು ಬಿದ್ದಿದೆ ಮನೆಯವರು ಆತಂಕಗೊಂಡಿದ್ದಾರೆ. ಮಗು ಅಲ್ಲೇ ಆಟವಾಡುವಾಗ ಗರಿಗಳು ತಲೆಯ ಮೇಲೆ ಬಿದ್ದು ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಸಾವನ್ನಪ್ಪಿದೆ. ಗೌರಿಬಿದನೂರು ಗ್ರಾಮಾಂತರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಪ್ರಪಾತಕ್ಕೆ ಬಿದ್ದ ಯುವಕ

**ಹಾಸನ :** ರೀಲ್ಸ್ ಮಾಡಲು ಬೆಟ್ಟದ ತುದಿಯಲ್ಲಿ ನಿಂತ ಯುವಕ ಆಯತಪ್ಪಿ ಪ್ರಪಾತಕ್ಕೆ ಬಿದ್ದು ಗಾಯಗೊಂಡ ಘಟನೆ ಸಕಲೇಶಪುರ ತಾಲೂಕಿನ ಗವಿಬೆಟ್ಟದಲ್ಲಿ ನಡೆದಿದೆ. ರಾಕಿದ್ (18) ನೂರು ಅಡಿಗೂ ಹೆಚ್ಚು ಆಳದ ಪ್ರಪಾತಕ್ಕೆ ಬಿದ್ದು ಗಂಭೀರವಾಗಿ ಗಾಯಗೊಂಡ ಯುವಕ. ಶನಿವಾರಸಂತೆಯಿಂದ ತನ್ನ ಇಬ್ಬರು ಸ್ನೇಹಿತ ರೊಂದಿಗೆ ಸಕಲೇಶಪುರದ ಗವಿ ಬೆಟ್ಟಕ್ಕೆ ಬಂದಿದ್ದ ರಾಕಿದ್, ಬೆಟ್ಟದ ತುದಿ ಯಲ್ಲಿ ನಿಂತು ರೀಲ್ಸ್ ಮಾಡುತ್ತಿದ್ದ ವೇಳೆ ಜಾರಿ ಬಿದ್ದ ಪರಿಣಾಮ ಆತನ ತಲೆ ಹಾಗೂ ಕಾಲಿಗೆ ಗಾಯಗಳಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಸ್ಥಳೀಯರು ಮತ್ತು ಯಸಳೂರು ಠಾಣೆ ಪೊಲೀಸರ ಸಹಾಯದಿಂದ ರಾಕಿದ್‌ನನ್ನು ಮೇಲೆತ್ತಿ ತಕ್ಷಣವೇ ಶನಿವಾರಸಂತೆ ಅಸ್ಪತ್ರೆಗೆ ಕರೆದೊಯ್ಯಲಾಯಿತು. ನಂತರ ವೈದ್ಯರ ಸಲಹೆ ಮೇರೆಗೆ ಹಾಸನದ ಹಿಮ್ಸ್‌ಗೆ ಕರೆತಂದು ಚಿಕಿತ್ಸೆ ಕೊಡಿಸಲಾಗುತ್ತಿದೆ. ಯಸಳೂರು ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಪೊಲೀಸರು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

# ಸತ್ಯ ಹೇಳಿದ್ದಕ್ಕೆ ನನ್ನ ಮೇಲೆ ಕೇಸ್ ಹಾಕಿದ್ದಾರೆ

**ಮೈಸೂರು:** ಫೆ.10 ರಂದು ಉದಯಗಿರಿ ಪೊಲೀಸ್ ಠಾಣೆ ಮೇಲೆ ಕಿಡಿಗೇಡಿಗಳು ಕಲ್ಲು ತೂರಿದ್ದರು ಆ ಘಟನೆಗೆ ಸಂಬಂಧಿಸಿದಂತೆ ಆರ್.ಅಶೋಕ್ ಜೊತೆ ನಾನು ಹೋಗಿದ್ದೆ. ನಾವು ಧೈರ್ಯ ತುಂಬುವ ಕೆಲಸ ಮಾಡಿದ್ದೇವೆ. ಅದಕ್ಕೆ ನನ್ನ ವಿರುದ್ಧ ಎಫ್ ಐ ಆರ್ ದಾಖಲಾಗಿದೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಕಿಡಿಕಾರಿದರು. ಸೋಮವಾರ ಮಾಧ್ಯಮಗಳ ಜೊತೆ ಮಾತನಾಡಿದ ಮಾಜಿ ಸಂಸದ ಪ್ರತಾಪ್ ಸಿಂಹ, ವರುಣಾ, ಶಿಗ್ಗಾವಿ, ಬಸವೇಶ್ವರನಗರ, ಮಾಗಡಿ ಸೇರಿದಂತೆ ಎಲ್ಲಾ ಕಡೆ ನನ್ನ ವಿರುದ್ಧ ಎಫ್ ಐ ಆರ್ ಆಗ್ತಿದೆ. ನನ್ನ ಆತ್ಮಸ್ಥೈರ್ಯ ಕುಗ್ಗಿಸುವ ಯತ್ನ ಮಾಡುತ್ತಿದ್ದಾರೆ. ನಾವು ಯಾರಿಗೂ ಕೂಡ ಪ್ರಚೋದನಾಕಾರಿ ಹೇಳಿಕೆ ನೀಡಿಲ್ಲ. ಒಬ್ಬ ಮುಸ್ಲಿಂ ಮುಖಂಡನೊಬ್ಬ ಪ್ರಚೋದನಾಕಾರಿ ಭಾಷಣ ಮಾಡಿದ್ದ. ಪುರುಸೋತ್ತಿಲ್ಲದೆ ಮಕ್ಕಳು ಹುಟ್ಟಿಸುತ್ತಿದ್ದಾರೆ. ಒಂದೇ ಮಕ್ಕಳು, ಎರಡೇ ಮಕ್ಕಳು ಇರುವವರನ್ನ ತೋರಿಸಿ ಎಂದು ಹರಿಹಾಯ್ದರು.

# ‘ಪ್ರಗತಿ ಪಥ’ ಯೋಜನೆಯನ್ನು ಸರಕಾರ ಜಾರಿಗೊಳಿಸಲಿದೆ

**ಮಂಗಳೂರು:** ಸರಕಾರದ ವಿರುದ್ಧ ದುಡ್ಡಿಲ್ಲ ಎಂದು ಸುಮ್ಮನೆ ಅಪಪ್ರಚಾರ ಮಾಡಲಾಗುತ್ತಿದೆ. ದುಡ್ಡಿಲ್ಲ ಎಂದು ಯಾವ ಕಾಮಗಾರಿಯನ್ನೂ ನಿಲ್ಲಿಸಲಾಗಿಲ್ಲ. ಪ್ರಧಾನ ಮಂತ್ರಿ ಗ್ರಾಮ ಸಡಕ ಯೋಜನೆಗಿಂತ ಭಿನ್ನವಾಗಿ ಪ್ರಗತಿ ಪಥ ಎಂಬ ಯೋಜನೆಯನ್ನು ರಾಜ್ಯ ಸರಕಾರ ಒಂದು ತಿಂಗಳೊಳಗೆ ಜಾರಿಗೊಳಿಸಲಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಗ್ರಾಮ ಸ್ವರಾಜ್ ಪ್ರತಿಷ್ಠಾನ ನೇತೃತ್ವದಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಪಂಚಾಯತ್ ಹಾಗೂ ಇತರ ಸ್ಥಳೀಯಾಡಳಿತ ಸಂಸ್ಥೆಗಳ ಸಹಕಾರದೊಂದಿಗೆ ಮಂಗಳೂರು ಅಡ್ಯಾರ್ ಸಹ್ಯಾದ್ರಿ ಕ್ಯಾಂಪಸ್‌ನಲ್ಲಿ ನಡೆದ ‘ಹೊಂಬೆಳಕು’ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ರಾಜ್ಯದಲ್ಲಿ ಪ್ರಗತಿ ಪಥ ಹೆಸರಿನಲ್ಲಿ 7110 ಕಿ.ಮೀ. ಗ್ರಾಮೀಣ ರಸ್ತೆಗಳಿಗೆ 5190 ಕೋಟಿ ರೂ.ಗಳನ್ನು ಖರ್ಚು ಮಾಡಲಾ ಗುತ್ತದೆ. ಇಲ್ಲಿ ಪ್ರಗತಿ ಪಥವಾದರೆ, ನಮ್ಮಲ್ಲಿ ಕಲ್ಯಾಣ ಪಥದಡಿ 1150 ಕಿ.ಮೀ. ರಸ್ತೆಯನ್ನು 1 ಸಾವಿರ ಕೋಟಿ ರೂ.ಗಳಲ್ಲಿ ಅಭಿವೃದ್ಧಿಪಡಿಸಲಾಗುವುದು. ಮುಂದಿನ ಶನಿವಾರ ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಚಾಲನೆ ನೀಡಲಿದ್ದಾರೆ ಎಂದು ಅವರು ಹೇಳಿದರು.

ಪ್ರಾಕೃತಿಕ ವಿಕೋಪದಿಂದ ಹಾಳಾಗಿರುವ ಗ್ರಾಮೀಣ ರಸ್ತೆಗಳ ದುರಸ್ತಿಗೆ ಪ್ರತಿ ಕ್ಷೇತ್ರಕ್ಕೆ ತಲಾ 10 ಕೋಟಿ ರೂ. ಗಳಂತೆ 189 ಕ್ಷೇತ್ರಗಳಿಗೆ 1890 ಕೋಟಿ ರೂ. ಬಿಡುಗಡೆ ಕೆಲವೆಡೆ ಕೆಲಸ ಆರಂಭವಾಗಿದೆ. . ರಾಜ್ಯದ 5770 ಅರಿವು ಕೇಂದ್ರಗಳಲ್ಲಿ 51 ಲಕ್ಷ ವಿದ್ಯಾರ್ಥಿಗಳು ನೋಂದಣಿ ಮಾಡಿದ್ದು, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುತ್ತಿದ್ದಾರೆ. ಕೆಎಎಸ್ ಪ್ರಿಲಿಮ್ಸ್‌ನಲ್ಲಿಯೂ ಅರಿವು ಕೇಂದ್ರದಲ್ಲಿ ತರಬೇತು ಹೊಂದಿದ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. ಭಾರತ ಸರಕಾರದ ಸ್ವಚ್ಛ ಭಾರತದ ಕನಸು ನನಸಾಗಿಸಲು ರಾಜ್ಯದಲ್ಲಿ 5712 ಘನತ್ಯಾಜ್ಯ ವಿಲೇವಾರಿ ಘಟಕಗಳಿಗೆ ತಲಾ 2 ಕೋಟಿ ರೂ. ಖರ್ಚು ಮಾಡಲಾಗುತ್ತಿದ್ದು, ಅವಿಭಜಿತ ದ.ಕ. ಜಿಲ್ಲೆಯಲ್ಲಿ ಈ ಘಟಕಗಳು ಅತ್ಯಂತ ಪರಿಣಾಮಕಾರಿ ಕಾರ್ಯಗತವಾಗುತ್ತಿವೆ ಎಂದು ಅವರು ಹೇಳಿದರು.

2005ರಲ್ಲಿ ಜಾರಿಗೆ ತಂದ ಉದ್ಯೋಗ ಖಾತ್ರಿ ಯೋಜನೆಯಡಿ ನಮ್ಮ ಇಲಾಖೆಯಿಂದ 13 ಕೋಟಿ ಮಾನವ ದಿನ ಸೃಷ್ಟಿಸುವ ಗುರಿ ಹೊಂದಲಾಗಿದೆ. 27 ಲಕ್ಷ ಕುಟುಂಬಗಳ 47 ಲಕ್ಷ ಜನ ಇದರ ಪ್ರಯೋಜನ ಪಡೆದಿದ್ದಾರೆ ಎಂದು ಸಚಿವರು ತಿಳಿಸಿದರು.

ಸರಕಾರ ಹಂತದಲ್ಲಿ ಆಗದ 1466000 ಸಣ್ಣ ಪುಟ್ಟ ಕಾಮಗಾರಿಗಳನ್ನು ಸ್ಥಳೀಯಾಡಳಿತದ ಮೂಲಕ ನಡೆಯುತ್ತಿದೆ. ಕೂಸಿನ ಮನೆ ಎಂಬ ವಿನೂತ 3867 ಕೂಸಿನ ಮನೆಗಳು ರಾಜ್ಯಾದ್ಯಂತ ನಡೆಯುತ್ತಿದೆ ಎಂದರು.

ವೇದಿಕೆಯಲ್ಲಿ ಸಂಸದ ಬ್ರಿಜೇಶ್ ಚೌಟ, ಶಾಸಕರಾದ ಗುರ್ಮೆ ಸುರೇಶ್ ಶೆಟ್ಟಿ, ಅಶೋಕ್ ರೈ, ಉಮಾನಾಥ ಕೋಟ್ಯಾನ್, ಐವನ್ ಡಿಸೋಜಾ, ಕಿಶೋರ್ ಕುಮಾರ್, ಮಾಜಿ ಶಾಸಕ ಅಭಯ ಚಂದ್ರ ಜೈನ್, ಶಕುಂತಳಾ ಶೆಟ್ಟಿ ಮತ್ತಿತರರು ಇದ್ದರು. ಶಾಸಕ ಮಂಜುನಾಥ ಭಂಢಾರಿ ಸ್ವಾಗತಿಸಿದರು.



**ಕೋಲಾರದಲ್ಲಿ ಇಂದಿನಿಂದ ಆರಂಭವಾದ ಎರಡು ದಿನಗಳ ರಾಜ್ಯ ಮಟ್ಟದ ಜನಪರ ಉತ್ಸವ–2025 ರಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಗುಡಿಬಂಡೆ ತಾಲ್ಲೂಕಿನ ಪ್ರಸಿದ್ಧ ಕಲಾವಿದ (ಮೂಗಿನ ಮೂಲಕ 5 ವಾದ್ಯಗಳನ್ನು ನುಡಿಸುವ) ಮುಖವೀಣೆ ಅಂಜಿನಪ್ಪ ಅವರನ್ನು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವ ಬಿ.ಎಸ್.ಸುರೇಶ(ಬೈರತಿ) ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ್ ತಂಗಡಗಿ ವೇದಿಕೆಗೆ ಆಹ್ವಾನಿಸಿ ಅವರ ಸಂಗೀತ ಆಲಿಸಿ ಅಭಿನಂದಿಸಿದರು. ಅಲ್ಲದೇ ಸಚಿವ ಬೈರತಿ ಸುರೇಶ ಅವರು ವೈಯಕ್ತಿಕವಾಗಿ ನಗದು ಬಹುಮಾನ ನೀಡಿ, ಕೇಂದ್ರ ಸರ್ಕಾರ ಕೂಡ ಮಾಡುವ ನಾಗರಿಕ ಸೇವಾ ಪ್ರಶಸ್ತಿಗೆ ಜಿಲ್ಲಾಡಳಿತ ಮತ್ತು ವೈಯಕ್ತಿಕವಾಗಿ ಶಿಫಾರಸ್ಸು ಮಾಡುವ ಬಗ್ಗೆ ಸಭೆಗೆ ತಿಳಿಸಿದರು**

# ಅಟಲ್‌ಜೀ ಅವರದು ಸರಳ, ಮಾದರಿ ಜೀವನಕ್ರಮ: ಮೆಚ್ಚುಗೆ

**ಬೆಂಗಳೂರು:** ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಕರ್ನಾಟಕಕ್ಕೆ ಹಲವಾರು ಭೇಟಿ ಕೊಟ್ಟಿದ್ದರು. ಸೋಲಿನಲ್ಲೂ ಬತ್ತದ ಅವರ ಉತ್ಸಾಹ, ಸೋಲು– ಗೆಲುವನ್ನು ಸಮಾನವಾಗಿ ನೋಡುವ ಅವರ ಜೀವನಕ್ರಮವು ಮಾದರಿ ಎನಿಸುವಂಥದ್ದು ಎಂದು ತೇಜಸ್ವಿನಿ ಅನಂತಕುಮಾರ್ ಅವರು ತಿಳಿಸಿದರು. ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಜೀ ಅವರ ಶತಮಾನೋತ್ಸವ ಕಾರ್ಯಕ್ರಮದ ಪ್ರಯುಕ್ತ ಇಂದು ಅಟಲ್ ಜೀ ಶತಮಾನೋತ್ಸವ ಅಭಿಯಾನದ ಪ್ರಮುಖರು ಕೇಂದ್ರದ ಮಾಜಿ ಸಚಿವ ಅನಂತಕುಮಾರರ ನಿವಾಸಕ್ಕೆ ತೆರಳಿ ಮಾಹಿತಿ ಸಂಗ್ರಹಿಸಿದರು.



ಬಳಿಕ ಶ್ರೀಮತಿ ತೇಜಸ್ವಿನಿ ಅನಂತಕುಮಾರ್ ಅವರು ತಮ್ಮ ಅನುಭವವನ್ನು ಹಂಚಿಕೊಂಡರು. ವಾಜಪೇಯಿಜಿ ಅವರ ಸರಳತೆಯ ಕುರಿತು ಅವರು ಮೆಚ್ಚುಗೆ ಸೂಚಿಸಿದರು. ಪಕ್ಷವನ್ನು ಬಲಪಡಿಸುವ ನಿಟ್ಟಿನಲ್ಲಿ ವಾಜಪೇಯಿಜೀ ಅವರು ನಿರಂತರ ಮಾರ್ಗದರ್ಶನ ಮಾಡುತ್ತಿದ್ದರು ಎಂದು ನೆನಪಿಸಿದರು.

ಅಟಲ್ ಜೀ ಅವರ 100ನೇ ಜನ್ಮದಿನದ ವಿಶಿಷ್ಟ ಸಂದರ್ಭ ಇದಾಗಿದೆ. ಅವರ ಜೀವನದಲ್ಲಿನ ಸರಳತೆ, ಅವರ ವಿಚಾರಧಾರೆಗಳನ್ನು ನಮ್ಮ ಕಾರ್ಯಕರ್ತರು ಅಳವಡಿಸಿಕೊಳ್ಳಬೇಕಿದೆ ಎಂದು ತಿಳಿಸಿದರು. ಇದೇವೇಳೆ ಈ ಸಂದರ್ಭದಲ್ಲಿ ಶ್ರೀಮತಿ ತೇಜಸ್ವಿನಿ ಅವರನ್ನು ಗೌರವಿಸಲಾಯಿತು. ವಿಧಾನ ಪರಿಷತ್ ಸದಸ್ಯ ಮತ್ತು ಪಕ್ಷದ ಹಿರಿಯರಾದ ಸಿ.ಟಿ.ರವಿ, ಶಾಸಕರಾದ ಉದಯ ಗರುಡಾಚಾರ್, ಅಭಿಯಾನದ ರಾಜ್ಯ ಪ್ರಮುಖ ಡಾ.ಶಿವಯೋಗಿ ಸ್ವಾಮಿ, ರಾಜ್ಯ ಸಂಚಾಲಕ ಜಗದೀಶ್ ಹಿರೇಮನಿ, ರಾಜ್ಯ ಸಮಿತಿ ಸದಸ್ಯರಾದ ಸದಾಶಿವ, ಮಮತಾ ಉದಯ, ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.





**ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವ ಅಭಿಯಾನದ ವತಿಯಿಂದ ಮಾಜಿ ಮುಖ್ಯಮಂತ್ರಿ ಮತ್ತು ಕೇಂದ್ರದ ಮಾಜಿ ಸಚಿವ ಡಿ.ವಿ ಸದಾನಂದ ಗೌಡ ಅವರಿಗೆ ಗೌರವ ಸಮರ್ಪಣೆ ಮಾಡಲಾಯಿತು. ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಅಭಿಯಾನದ ರಾಜ್ಯ ಪ್ರಮುಖ ಡಾ.ಶಿವಯೋಗಿ ಸ್ವಾಮಿ, ರಾಜ್ಯ ಸಂಚಾಲಕ ಜಗದೀಶ್ ಹಿರೇಮನಿ ಸದಸ್ಯರಾದ ಸದಾಶಿವ, ಮಮತಾ ಉದಯ, ಜಿಲ್ಲಾ ಅಧ್ಯಕ್ಷ ಹರೀಶ್, ಪಕ್ಷದ ಮುಖಂಡರು ಇದ್ದರು. ಇದೇ ವೇಳೆ ಮಾಜಿ ಸಚಿವರು ಪಕ್ಷದ ಹಿರಿಯರಾದ ರಾಮಚಂದ್ರ ಗೌಡ ರವರಿಗೆ ಗೌರವ ಸಮರ್ಪಿಸಲಾಯಿತು. ಮಾಜಿ ಉಪ ಮುಖ್ಯಮಂತ್ರಿ ಡಾ ಅಶ್ವಥ್ ನಾರಾಯಣ, ಸಂಸದ ಪಿ.ಸಿ. ಮೋಹನ್, ಅಭಿಯಾನದ ರಾಜ್ಯ ಪ್ರಮುಖ ಡಾ.ಶಿವಯೋಗಿಸ್ವಾಮಿ, ರಾಜ್ಯ ಸಂಚಾಲಕ ಜಗದೀಶ್ ಹಿರೇಮನಿ, ಸದಸ್ಯರಾದ ಸದಾಶಿವ, ನರಸಿಂಹಮೂರ್ತಿ, ಸದಾಶಿವಯ್ಯ, ಮಮತಾ ಉದಯ, ಜಿಲ್ಲಾ ಅಧ್ಯಕ್ಷ ಹರೀಶ್, ಪಕ್ಷದ ಮುಖಂಡರು ಇದ್ದರು.**

# ಕಾಂಗ್ರೆಸ್‌ನಿಂದ ತುಷ್ಟೀಕರಣ ರಾಜಕಾರಣ

**ಬೆಂಗಳೂರು:** ಇತ್ತೀಚೆಗೆ ಮೈಸೂರಿನ ಉದಯಗಿರಿಯಲ್ಲಿ ಕೆಲ ದೇಶದ್ರೋಹಿಗಳು ಅಟ್ಟಹಾಸ ಮೆರೆದಿದ್ದಾರೆ. ಇವತ್ತು ಅಲ್ಲಿ ಜಾಗೃತಿ ಜಾಥಾಗೆ ಕರೆ ಕೊಡಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.ಮೈಸೂರಿಗೆ ಹೋಗುವ ಮುನ್ನ ಸೋಮವಾರ ಬೆಂಗಳೂರಿನ ತಮ್ಮ ನಿವಾಸದ ಬಳಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಾಂಗ್ರೆಸ್‌ನಿಂದ ಕಳೆದೆರಡು ವರ್ಷಗಳಿಂದ ತುಷ್ಟೀಕರಣ ರಾಜಕಾರಣ ಮಾಡ್ತಿದೆ. ಇದನ್ನು ನೋಡಿದರೆ ನಿಜಾಮರ ಆಡಳಿತ ನೆನಪಾಗುತ್ತದೆ. ರಾಜರ ಕಾಲದ ಆಡಳಿತ ಏನೋ ಅನ್ನುವ ಹಾಗೆ ಹಿಂದೂಗಳಿಗೆ ಭಾಸವಾಗುತ್ತಿದೆ ಎಂದರು. ಪೊಲೀಸರಿಗೂ ಸ್ವಾತಂತ್ರ್ಯ ಕೊಟ್ಟಿಲ್ಲ, ಖುದ್ದು ಪೊಲೀಸ್ ಇಲಾಖೆ ಅಸಹಾಯಕವಾಗಿದೆ. ಗೃಹ ಸಚಿವರೇ ರಾಜೀನಾಮೆ ಬಗ್ಗೆ ಮಾತನಾಡುವ ಮೂಲಕ ಅಸಹಾಯಕತೆ ವ್ಯಕ್ತಪಡಿಸಿದ್ದಾರೆ. ನಾವು ಕೂಡಾ ಇವತ್ತು ಜಾಗೃತಿ ಜಾಥಾದಲ್ಲಿ ಪಾಲ್ಗೊಂಡು ಸರ್ಕಾರವನ್ನು ಎಚ್ಚರಿಸ್ತೇವೆ ಎಂದು ಹೇಳಿದರು.

ದೇಶ ದ್ರೋಹಿಗಳು ಕಲ್ಲೆಸೆದಾಗ ನಿಷೇಧಾಜ್ಞೆ ಹೇರಬೇಕಿತ್ತು. ಇವತ್ತು ಹಿಂದೂ ಕಾರ್ಯಕರ್ತರು ಹೋರಾಟ ಮಾಡುತ್ತೇವೆ ಎಂದರೆ ನಿಷೇಧಾಜ್ಞೆ ಹೇರೋದು ಅಲ್ಲ. ಯಾಕೆ ಆವತ್ತು ಸರ್ಕಾರ, ಗೃಹ ಇಲಾಖೆ ಸತ್ತು ಹೋಗಿತ್ತಾ?. ಏನೇ ಆದರೂ ನಾವು ಹೋರಾಟ ಮಾಡ್ತೇವೆ, ನಮ್ಮ ಹೋರಾಟ ತಡೆಯಲು ಏನೇ ನಿಷೇಧಾಜ್ಞೆ ಹಾಕಿದ್ರೂ ಆಗಲ್ಲ. ಇವತ್ತು ಎಲ್ಲ ಹಿಂದೂಪರ ಸಂಘಟನೆಯವರು ಭಾಗವಹಿಸ್ತಿದ್ದಾರೆ ಎಂದು ತಿಳಿಸಿದರು.

ಅಟ್ಟಹಾಸದ ಆಡಳಿತ ರಾಜ್ಯದಲ್ಲಿ ಮರುಕಳಿಸುತ್ತಿದೆ ಅನಿಸ್ತಿದೆ. ಪೊಲೀಸ್ ಠಾಣೆಗೇ ಕಲ್ಲೆಸೆಯುವ, ಪೊಲೀಸರನ್ನೇ ಎದುರಿಸುವ ಮಟ್ಟಕ್ಕೆ ಹೋಗಿದ್ದಾರೆ ಆಂದ್ರೆ ಪೊಲೀಸ್ ಇಲಾಖೆ, ಸರ್ಕಾರ ಅಸಹಾಯಕವಾಗಿದೆ. ಅನಿವಾರ್ಯವಾಗಿ ಹಿಂದೂಗಳ ರಕ್ಷಣೆಗೆ ನಾವು ನಿಲ್ಲಬೇಕಿದೆ ಎಂದು ಹೇಳಿದರು.ಎಸ್ಕಾಂಗಳಿಗೆ ಜನರಿಂದಲೇ ಗೃಹ ಜ್ಯೋತಿ ಬಿಲ್ ವಸೂಲಿಗೆ ಅವಕಾಶ ಕೊಡುವಂತೆ ಕೋರಿ ಪ್ರಸ್ತಾವ ವಿಚಾರಕ್ಕೆ ಪ್ರತಿಕ್ರಿಯಿಸಿದ ವಿಜಯೇಂದ್ರ ಅವರು, ಇದಕ್ಕೆ ಸಿಎಂ ಸಿದ್ದರಾಮಯ್ಯ ಅವರು ಉತ್ತರ ಕೊಡಬೇಕಿದೆ. ರಾಜ್ಯ ಸುಭಿಕ್ಷವಾಗಿದೆ, ಜನ ನೆಮ್ಮದಿಯಿಂದ ಇದ್ದಾರೆ ಅಂತ ಸಿಎಂ ಭ್ರಮೆಯಲ್ಲಿದ್ದಾರೆ. ಸಿದ್ದರಾಮಯ್ಯ ಅವರು ಆಲ್ ಈಸ್ ವೆಲ್ ಭಾವನೆಯಿಂದ ಹೊರಗೆ ಬರಬೇಕು ಎಂದರು.ಸಾರಿಗೆ ಸಂಸ್ಥೆಗಳಿಗೆ 7 ಸಾವಿರ ಕೋಟಿ ರೂ. ಬಾಕಿ ಕೊಡಬೇಕಿದೆ. ವೇತನ ಕೊಡ್ತಿಲ್ಲ. ಸರ್ಕಾರಿ ಇಲಾಖೆ, ಕಚೇರಿಗಳು 6 ಸಾವಿರ ಕೋಟಿ ರೂ. ಬಾಕಿ ವಿದ್ಯುತ್ ಬಿಲ್ ಕಟ್ಟಬೇಕಿದೆ. ಇವರ ಯೋಜನೆಗಳನ್ನು ನೋಡುತ್ತಿದ್ದರೆ ಗ್ಯಾರಂಟಿಗಳನ್ನು ನಿಲ್ಲಿಸುವ ಲಕ್ಷಣ ಕಾಣಿಸುತ್ತಿದೆ. ಇದನ್ನೆಲ್ಲ ನಾವು ಅಧಿವೇಶನದಲ್ಲಿ ಚರ್ಚೆ ಮಾಡುತ್ತೇವೆ ಎಂದು ಹೇಳಿದರು.

# ಕಂಡಕ್ಟರ್ ಆರೋಗ್ಯ ವಿಚಾರಿಸಿದ ಸಚಿವ

**ಬೆಳಗಾವಿ :** ಕನ್ನಡದಲ್ಲಿ ಮಾತನಾಡಿ ಎಂದಿದ್ದಕ್ಕೆ ಹಲ್ಲೆಗೊಳಗಾಗಿದ್ದ ಬಸ್ ಕಂಡಕ್ಟರ್ ಮಹದೇವಪ್ಪ ಅವರನ್ನ ಬೆಳಗಾವಿ ಜಿಲ್ಲಾಸ್ಪತ್ರೆಯಲ್ಲಿ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದ್ದು ಸಾರಿಗೆ ಸಚಿವ ರಾಮಲಿಂಗರೆಡ್ಡಿ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ಜಿಲ್ಲಾಸ್ಪತ್ರೆಗೆ ಭೇಟಿ ನೀಡಿದ ಸಾರಿಗೆ ಸಚಿವ ರಾಮಲಿಂಗರೆಡ್ಡಿ, ಬಸ್ ನಿರ್ವಾಹಕ ಮಹಾದೇವ ಹುಕ್ಕೇರಿ ಅವರ ಆರೋಗ್ಯ ವಿಚಾರಿಸಿದರು. ನಂತರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಂಡಕ್ಟರ್ ಮೇಲೆ ಉದ್ದೇಶಪೂರ್ವಕವಾಗಿ ಹಲ್ಲೆ ಮಾಡಲಾಗಿದೆ. ನಾವೆಲ್ಲ ಕಂಡಕ್ಟರ್ ಮಹದೇವಪ್ಪ ಪರ ಇದ್ದೇವೆ. ಹಲ್ಲೆ ಮಾಡಿದವರ ವಿರುದ್ದ ಗೂಂಡಾಕಾಯ್ದೆ ಹಾಕಬೇಕು ಎಂದರು. ‘ಹಲ್ಲೆಗೆ ಒಳಗಾಗಿರುವ ಮಹಾದೇವ ಅವರ ಆರೋಗ್ಯ ಸ್ಥಿರವಾಗಿದೆ. ಎರಡು ದಿನಗಳ ನಂತರ ಆಸ್ಪತ್ರೆಯಿಂದ ಬಿಡುಗಡೆ ಆಗಲಿದ್ದಾರೆ. ಇನ್ನು ತಮ್ಮ ಮೇಲೆಪೋಕ್ಸೊ ಪ್ರಕರಣ ದಾಖಲಾದ ಕಾರಣ ಮಹಾದೇವ ಆತಂಕಗೊಂಡಿದ್ದಾರೆ. ಈ ಪ್ರಕರಣ ದಾಖಲಿಸಿಕೊಳ್ಳುವಾಗ ಪೊಲೀಸರು ಸಾಮಾನ್ಯ ಜ್ಞಾನವನ್ನೂ ಬಳಸಿಲ್ಲ. ಈ ಪ್ರಕರಣ ಹಿಂದಕ್ಕೆ ಪಡೆಯುವ ಹಾಗೂ ಆರೋಪಿಗಳ ವಿರುದ್ಧ ಗೂಂಡಾ ಕಾಯ್ದೆಯಡಿ ಪ್ರಕರಣ ಜರುಗಿಸುವ ಸಂಬಂಧ ಗೃಹ ಸಚಿವ ಜಿ.ಪರಮೇಶ್ವರ ಅವರೊಂದಿಗೆ ಮಾತನಾಡುತ್ತೇನೆ’ ಎಂದು ತಿಳಿಸಿದರು.‘ಕರ್ನಾಟಕ–ಮಹಾರಾಷ್ಟ್ರ ಮಧ್ಯೆ ಬಸ್ ಸಂಚಾರ ಸ್ಥಗಿತಗೊಂಡ ಕಾರಣ, ಜನರು ತೊಂದರೆ ಅನುಭವಿಸುತ್ತಿದ್ದಾರೆ. ಇದರಿಂದ ಸಾರಿಗೆ ನಿಗಮಗಳಿಗೂ ನಷ್ಟವಾಗುತ್ತದೆ. ಮಹಾರಾಷ್ಟ್ರದಲ್ಲಿ ನಮ್ಮ ಬಸ್ ಗೆ ಹಾನಿ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಅಲ್ಲಿನ ಸರ್ಕಾರವನ್ನು ಒತ್ತಾಯಿಸುತ್ತೇವೆ ಎಂದು ರಾಮಲಿಂಗರೆಡ್ಡಿ ತಿಳಿಸಿದರು.

ನಂತರ ಶಿವಸೇನೆಯ ಕಾರ್ಯಕರ್ತರು ಪುಣೆ ಮತ್ತು ಮತ್ತು ನೆರೆರಾಜ್ಯದ ಕೆಲಭಾಗಗಳಲ್ಲಿ ಕೆಎಸ್ಸಾರ್ಟಿಸಿ ಬಸ್‌ಗಳಿಗ ಮಸಿ ಬಳಿಯುವ ಕೆಲಸ ಮಾಡಿದ್ದಾರೆ. ಇದು ಸರಿಯಲ್ಲ, ಮಹಾರಾಷ್ಟ್ರದ ಸಾರಿಗೆ ಇಲಾಖೆ ಕಾರ್ಯದರ್ಶಿಯವರೊಂದಿಗೆ ಮಾತಾಡುವಂತೆ ತಮ್ಮ ಸಾರಿಗೆ ಇಲಾಖೆ ಕಾರ್ಯದರ್ಶಿಯವರಿಗೆ ಹೇಳಿರುವುದಾಗಿ ರೆಡ್ಡಿ ಹೇಳಿದರು.

**ಬೇಕು ಅಂತಾನೆ ಪೋಕ್ಸೋ ಕೇಸ್ ಕೊಟ್ಟಿದ್ದಾರೆ**

"ನಮ್ಮ ಕಂಡಕ್ಟರ್ ಮಹಾದೇವ ಹುಕ್ಕೇರಿ ಮೇಲೆ ಬೇಕು ಅಂತಾನೇ ಪೋಕ್ಸೋ ಕೇಸ್ ಕೊಟ್ಟಿದ್ದಾರೆ. ಅವತ್ತು ಬಸ್‌ನಲ್ಲಿ ಒಬ್ಬರು – ಇಬ್ಬರು ಇರಲಿಲ್ಲ. 90 ಜನ ಪ್ರಯಾಣಿಸುತ್ತಿದ್ದರು. ನೋಡೋಣ ಆ ಬಗ್ಗೆ ಪೊಲೀಸರು ತನಿಖೆ ನಡೆಸಲಿದ್ದಾರೆ" ಎಂದು ಹೇಳಿದ್ದಾರೆ.

# ಉದ್ಯಾನವನಗಳಲ್ಲಿ ಕೊಳವೆ ಬಾವಿಗಳ ಸ್ಥಿತಿ–ಗತಿ ಕುರಿತು ವರದಿ ನೀಡಿ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ ಉದ್ಯಾನವನಗಳಲ್ಲಿ ಕೊಳವೆಬಾವಿಗಳ ಸ್ಥಿತಿ–ಗತಿಯ ಕುರಿತು ವರದಿ ನೀಡಲು ಮುಖ್ಯ ಆಯುಕ್ತ ತುಷಾರ್ ಗಿರಿ ನಾಥ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಾಲಿಕೆ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳ ಕುರಿತು ಪಾಲಿಕೆ ಕೇಂದ್ರ ಕಛೇರಿಯಲ್ಲಿ ಇಂದು ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಉದ್ಯಾನವನಗಳ ಪೈಕಿ, ಎಷ್ಟು ಕೊಳವೆ ಬಾವಿಗಳು ಸುಸ್ಥಿತಿಯಲ್ಲಿವೆ, ಎಷ್ಟು ಕೊಳವೆ ಬಾವಿಗಳು ದುಸ್ಥಿತಿಯಲ್ಲಿವೆ ಎಂಬುದನ್ನು ಪರಿಶೀಲಿಸಿ ಶೀಘ್ರ ವರದಿ ನೀಡಲು ಸೂಚನೆ ನೀಡಿದರು.



ಕೊಳವೆ ಬಾವಿಗಳು ದುರಸ್ಥಿಯಲ್ಲಿರುವ ಉದ್ಯಾನವನಗಳಲ್ಲಿ ಕೂಡಲೆ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಈ ಸಂಬಂಧ ಜಲಮಂಡಳಿಯ ಜೊತೆ ಮಾತನಾಡಿ, ತ್ಯಾಜ್ಯ ನೀರು ಸಂಸ್ಕರಣಾ ಘಟಕದಿಂದ ಸಂಸ್ಕರಿಸಿದ ನೀರನ್ನು ಟ್ಯಾಂಕರ್ ಗಳ ಮೂಲಕ ಉದ್ಯಾನವನಗಳಲ್ಲಿರುವ ಸಸಿ/ಮರಗಳಿಗೆ ವ್ಯವಸ್ಥೆ ಮಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಯಿತು.

ಸಂಸ್ಕರಿಸಿದ ನೀರು ವ್ಯವಸ್ಥೆ ಮಾಡಿ:

ನಗರದಲ್ಲಿ ಬೇಸಿಗೆ ಕಾಲ ಆರಂಭವಾಗುತ್ತಿದ್ದು, ಉದ್ಯಾನವನಗಳು, ಕೆರೆಗಳು, ಮೀಡಿಯನ್ಸ್ ಗಳಲ್ಲಿರುವ ಸಸಿ/ಮರಗಳಿಗೆ ನೀರು ಅವಶ್ಯಕತೆಯಿದೆ. ಈ ಸಂಬಂಧ ಕೂಡಲೆ ಎಷ್ಟು ನೀರಿನ ಅಗತ್ಯವಿದೆ, ಎಷ್ಟು ಟ್ಯಾಂಕರ್ ಗಳು ಬೇಕಿದೆ ಎಂಬುದನ್ನು ಪಟ್ಟಿ ಮಾಡಿ ನೀರಿನ ವ್ಯವಸ್ಥೆ ಮಾಡಿಕೊಳ್ಳಬೇಕೆಂದು ಸೂಚಿಸಿದರು.

ನಗರದಲ್ಲಿ ಬೇಸಿಗೆ ಕಾಲ ಆರಂಭವಾಗಿದ್ದು, ಮರದ ಎಲೆಗಳು ಸಾಕಷ್ಟು ಬೀಳುತ್ತಿವೆ. ಎಲ್ಲೆಂದರಲ್ಲಿ ಒಣಗಿದ ಎಲೆಗಳ ರಾಶಿಯಾಗುತ್ತಿದೆ. ಈ ನಿಟ್ಟಿನಲ್ಲಿ ನಿಗದಿತ ಸ್ಥಳಗಳನ್ನು ಗುರುತಿಸಿ ಎಲೆಗಳನ್ನು ತೆರವುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ನಗರದ ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಬಿ.ಎಸ್.ಡಬ್ಲ್ಯೂ.ಎಂ.ಎಲ್ ವತಿಯಿಂದ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸ್ವಚ್ಛತೆ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದಲ್ಲಿ 1280 ಉದ್ಯಾನವನಗಳು ಬರಲಿದ್ದು, ಈ ಪೈಕಿ 100 ಉದ್ಯಾನಗಳಲ್ಲಿ ಎಲೆ ಗೊಬ್ಬರ ತಯಾರಿಕಾ ಘಟಕ(ಲೀವ್ಸ್ ಕಾಂಪೋಸ್ಟರ್)ಗಳನ್ನು ಸ್ಥಾಪಿಸಲಾಗುತ್ತಿದ್ದು, ಶೀಘ್ರ ಕಾಮಗಾರಿ ಪೂರ್ಣಗೊಳ್ಳಲಿದೆ. ಆ ಬಳಿಕ ಉದ್ಯಾನವನಗಳಲ್ಲಿ ಸಸಿ/ಮರಗಳಿಂದ ಬೀಳುವ ಎಲೆಗಳನ್ನು ಸ್ಥಳದಲ್ಲಿಯೇ ಗೊಬ್ಬರವನ್ನಾಗಿಸಿ ಅದನ್ನು ಉದ್ಯಾನವನಗಳಲ್ಲಿಂಯೇ ಬಳಸಿಕೊಳ್ಳುವಂತೆ ಮಾಡಲು ಸೂಚಿಸಿದರು.

ಈ ವೇಳೆ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್, ಸುರಳ್ಕರ್ ವಿಕಾಸ್ ಕಿಶೋರ್, ಡಾ. ಕೆ. ಹರೀಶ್ ಕುಮಾರ್, ಅವಿನಾಶ್ ಮೆನನ್ ರಾಜೇಂದ್ರನ್, ವಲಯ ಆಯುಕ್ತರಾದ ಸತೀಶ್, ಅರ್ಚನಾ, ರಮ್ಯಾ, ಕರೀಗೌಡ, ಸ್ನೇಹಲ್, ರಮೇಶ್, ದಿಗ್ವಿಜಯ್ ಬೋಡ್ಕೆ, ಗಿರೀಶ್, ಪ್ರಧಾನ ಅಭಿಯಂತರರಾದ ಪ್ರಹ್ಲಾದ್, ಮುಖ್ಯ ಅಭಿಯಂತರರು ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

# 66ನೇ ವಯಸ್ಸಲ್ಲಿ 4ನೇ ಮದುವೆ



ಚಿತ್ರರಂಗದಲ್ಲಿ ಅನೇಕ ಬಾರಿ ವಿವಾಹವಾದ ಅನೇಕ ನಟರಿದ್ದಾರೆ. ಮೂರು ಬಾರಿ ಮದುವೆಯಾದವರೂ ಇದ್ದಾರೆ. ಎರಡು ಬಾರಿ ಮದುವೆಯಾದವರು ಬಹಳ ಜನ ಇದ್ದಾರೆ. ನಟರಲ್ಲಿ ಇದು ಸಾಮಾನ್ಯವಾಗಿದೆ. ಆದರೆ ಹಲವು ಬಾರಿ ಮದುವೆಯಾದ ಗಾಯಕರು ಇದ್ದಾರೆ ಎಂದು ನಿಮಗೆ ತಿಳಿದಿದೆಯೇ? ಇತ್ತೀಚೆಗೆ, ಒಬ್ಬ ಸ್ಟಾರ್ ಹಿರಿಯ ಗಾಯಕ ನಾಲ್ಕನೇ ಬಾರಿಗೆ ಮದುವೆಯಾಗಲು ಸಿದ್ಧರಾಗುತ್ತಿದ್ದಾರೆ. ಈಗ ಗಾಯಕ ಯಾರು?

ಅವರು ಬೇರೆ ಯಾರೂ ಅಲ್ಲ, ಪ್ರಸಿದ್ಧ ಗಾಯಕ ಲಕ್ಕಿ ಅಲಿ. ಈ ಸ್ಟಾರ್ ಸಿಂಗರ್ 66ನೇ ವಯಸ್ಸಿನಲ್ಲಿ ನಾಲ್ಕನೇ ಬಾರಿಗೆ ಮದುವೆಯಾಗಲು ಸಿದ್ಧರಾಗಿದ್ದಾರೆ. ಅಷ್ಟೇ ಅಲ್ಲ, ಮದುವೆಯಾಗುವ ತನ್ನ ಆಸೆಯನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಿದರು.

ಅಲಿ ಈಗಾಗಲೇ ಮೂರು ಬಾರಿ ಮದುವೆಯಾಗಿ ವಿಚ್ಛೇದನ ಪಡೆದಿದ್ದಾರೆ. ಅವರು ಇತ್ತೀಚೆಗೆ ದೆಹಲಿಯ ಸುಂದರ್ ನರ್ಸರಿಯಲ್ಲಿ ನಡೆದ 18 ನೇ ಕಥಾಕರಣ್ ಅಂತರರಾಷ್ಟ್ರೀಯ ಕಥೆಗಾರರ ಉತ್ಸವದಲ್ಲಿ ಭಾಗವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಲಕ್ಕಿ ಅಲಿ ತಮ್ಮ ಧ್ವನಿಯ ಮೂಲಕ ಪ್ರೇಕ್ಷಕರನ್ನು ಮಂತ್ರಮುಗ್ಧಗೊಳಿಸಿದರು.

ಅಷ್ಟೇ ಅಲ್ಲ, ಅವರು ತಮ್ಮ ವೃತ್ತಿಜೀವನದ ಬಗ್ಗೆ ಹಾಡಿದ ಕೆಲವು ಹಿಟ್ ಹಾಡುಗಳನ್ನು ಮತ್ತು ಅವುಗಳ ಹಿಂದಿನ ಆಸಕ್ತಿದಾಯಕ ಕಥೆಗಳನ್ನು ಸಹ ಬಹಿರಂಗಪಡಿಸಿದರು. ಏತನ್ಮಧ್ಯೆ, ಲಕ್ಕಿ ಅಲಿಯನ್ನು ಅವನ ಮುಂದಿನ ಕನಸಿನ ಬಗ್ಗೆ ಕೇಳಿದಾಗ, ಅವನ ಉತ್ತರ ಎಲ್ಲರನ್ನು ಆಶ್ಚರ್ಯಗೊಳಿಸಿತು. ಈ ಸಂದರ್ಭದಲ್ಲಿ, ಲಕ್ಕಿ ಅಲಿ ನಾಲ್ಕನೇ ಬಾರಿಗೆ ಮದುವೆಯಾಗುವ ಬಯಕೆಯನ್ನು ವ್ಯಕ್ತಪಡಿಸುತ್ತಾ, 'ಮತ್ತೆ ಮದುವೆಯಾಗುವುದು ನನ್ನ ಕನಸು' ಎಂದು ಹೇಳಿದರು.

ಅವರ ಹೇಳಿಕೆಗಳು ಈಗ ಬಾಲಿವುಡ್ ಚಲನಚಿತ್ರೋದ್ಯಮ ಹಾಗೂ ಪ್ರೇಕ್ಷಕರಲ್ಲಿ ಚರ್ಚೆಯ ವಿಷಯವಾಗಿದೆ. ಲಕ್ಕಿ ಅಲಿಯ ವೈಯಕ್ತಿಕ ಜೀವನ ತುಂಬಾ ಭಿನ್ನವಾಗಿದೆ ಎಂದು ಹೇಳಲೇಬೇಕು. ಅವರು ಮೂರು ಬಾರಿ ವಿವಾಹವಾದರು. ಅವನಿಗೆ ಮೂವರು ಹೆಂಡತಿಯರೊಂದಿಗೆ ಹೆಚ್ಚು ಸಮಯ ಇರಲಿಲ್ಲ. ಅವರು ತಕ್ಷಣವೇ ವಿಚ್ಛೇದನ ಪಡೆದರು.

ಲಕ್ಕಿ ಅಲಿಯ ಮೊದಲ ಮದುವೆ ಆಸ್ಟ್ರೇಲಿಯಾದ ಮಹಿಳೆಯೊಂದಿಗೆ ಆಗಿತ್ತು. ಅವರು 'ಸುನೋ' ಆಲ್ಬಮ್ ಸಮಯದಲ್ಲಿ ಭೇಟಿಯಾದರು ಮತ್ತು ಅವರ ಹೃದಯಗಳು ಬೆಸೆದುಕೊಂಡವು. ಆದರೆ ಇಬ್ಬರ ನಡುವಿನ ಸಂಬಂಧ ಹೆಚ್ಚು ಕಾಲ ಉಳಿಯಲಿಲ್ಲ. ಕೊನೆಯಲ್ಲಿ, ಅವರು ಬೇರೆಯಾಗಲು ನಿರ್ಧರಿಸಿದರು.

ಮೊದಲ ಪತ್ನಿಗೆ ವಿಚ್ಛೇದನ ನೀಡಿದ ನಂತರ, ಲಕ್ಕಿ ಅಲಿ 2000 ರಲ್ಲಿ ಅನಾಹಿತಾ ಎಂಬ ಪಾರ್ಸಿ ಮಹಿಳೆಯನ್ನು ವಿವಾಹವಾದರು. ಈ ಸ್ಟಾರ್ ಗಾಯಕಿಗಾಗಿ ಅನಹಿತಾ ಇಸ್ಲಾಂಗೆ ಮತಾಂತರಗೊಂಡು ತನ್ನ ಹೆಸರನ್ನು ಇನಾಯಾ ಎಂದು ಬದಲಾಯಿಸಿಕೊಂಡಳು.

ಅಲಿ ತನ್ನ ಎರಡನೇ ಹೆಂಡತಿಯೊಂದಿಗೆ ಬಹಳ ಕಾಲ ವಾಸಿಸುತ್ತಿದ್ದ. ಅವರಿಗೆ ಇಬ್ಬರು ಮಕ್ಕಳೂ ಇದ್ದರು. ಎರಡನೇ ವಿಚ್ಛೇದನದ ನಂತರ, ಲಕ್ಕಿ ಅಲಿ 2010 ರಲ್ಲಿ ಕೇಟ್ ಎಲಿಜಬೆತ್ ಹಲ್ಲಮ್ ಅವರನ್ನು ವಿವಾಹವಾದರು. ಲಕ್ಕಿ ಅಲಿಯನ್ನು ಮದುವೆಯಾದ ನಂತರ, ಅವರು ತಮ್ಮ ಹೆಸರನ್ನು ಆಯಿಷಾ ಅಲಿ ಎಂದು ಬದಲಾಯಿಸಿಕೊಂಡರು.

ಲಕ್ಕಿ ಅಲಿಯ ಮೂರನೇ ಹೆಂಡತಿ ಅವನಿಗಿಂತ 24 ವರ್ಷ ಚಿಕ್ಕವಳು. ಆದರೆ, ಅವರು 2017 ರಲ್ಲಿ ವಿಚ್ಛೇದನ ಪಡೆದರು. ಅಂದಿನಿಂದ ಒಂಟಿಯಾಗಿರುವ ಅಲಿ, ಅವಕಾಶ ಸಿಕ್ಕರೆ 66 ನೇ ವಯಸ್ಸಿನಲ್ಲಿ ನಾಲ್ಕನೇ ಬಾರಿಗೆ ಮದುವೆಯಾಗಬೇಕೆಂದು ಯೋಚಿಸುತ್ತಾನೆ.

# 700 ಸಿನಿಮಾಗಳಲ್ಲಿ ನಟಿಸಿದ ಅಣ್ಣಾವ್ರ ಹೀರೋಯಿನ್...



ಈಗ ನಾವು ಮಾತನಾಡುತ್ತಿರುವ ನಟಿ ಹಲವಾರು ನಟರ ಜೊತೆ ನಟಿಸಿ ಅಬ್ಬರಿಸಿದ್ದಾರೆ. ಕಮಲ್ ಹಾಸನ್, ಮೋಹನ್ ಲಾಲ್, ಜಗಪತಿ ಬಾಬು ಅವರಂತಹ ದೊಡ್ಡ ನಟರ ಜೊತೆ ನಟಿಸಿದ್ದಾರೆ. ನಾಯಕಿಯಾಗಿ ಅವಕಾಶ ಕಡಿಮೆಯಾದ ಮೇಲೆ ಪೋಷಕ ನಟಿಯಾಗಿ ಬದಲಾದ ಈ ನಟಿ ಹಾಸ್ಯ ನಟಿಯಾಗಿಯೂ ನಗಿಸಿದ್ದಾರೆ.

ದಕ್ಷಿಣ ಭಾರತದ ಭಾಷೆಗಳಲ್ಲಿ ಸುಮಾರು 700 ಸಿನಿಮಾಗಳಲ್ಲಿ ನಟಿಸಿದ್ದಾರೆ. ಇಷ್ಟು ಸಿನಿಮಾಗಳಲ್ಲಿ ನಟಿಸಿದ ಈ ನಟಿ ಕುಡಿತಕ್ಕೆ ದಾಸರಾಗಿ ತಮ್ಮ ಜೀವನವನ್ನು ಕಷ್ಟಕ್ಕೆ ತಳ್ಳಿದರು. ಅವರು ಯಾರು?

ಅವರು ಬೇರೆ ಯಾರೂ ಅಲ್ಲ ನಟಿ ಊರ್ವಶಿ. ಹುಟ್ಟಿನಿಂದ ಅವರು ಮಲಯಾಳಿಯಾಗಿದ್ದರೂ ಹೆಚ್ಚಾಗಿ ತಮಿಳು ಸಿನಿಮಾಗಳಲ್ಲಿ ನಟಿಸಿ ಫೇಮಸ್ ಆದರು. ಇದರಿಂದ ತಮಿಳುನಾಡಿನ ಚೆನ್ನೈನಲ್ಲಿ ನೆಲೆಸಿದರು. ಅಷ್ಟೇ ಅಲ್ಲದೆ ತೆಲುಗು, ಕನ್ನಡ ಸಿನಿಮಾಗಳಲ್ಲೂ ನಾಯಕಿಯಾಗಿ ನಟಿಸಿದರು. ಅಲ್ಲದೇ ಪೋಷಕ ನಟಿಯಾಗಿ ಸಾಕಷ್ಟು ದಕ್ಷಿಣ ಭಾರತದ ಸಿನಿಮಾಗಳಲ್ಲಿ ನಟಿಸಿದ್ದಾರೆ. ಊರ್ವಶಿ ನಾಯಕಿಯಾಗಿ ನಟಿಸಿದಾಗಲೂ ಸಣ್ಣ ಪುಟ್ಟ ನಟರ ಜೊತೆ ನಟಿಸಲಿಲ್ಲ, ದೊಡ್ಡ ನಟರ ಜೊತೆ ಜೋಡಿಯಾದರು.

ತಮಿಳಿನಲ್ಲಿ ಕಮಲ್ ಹಾಸನ್, ರಜನಿಕಾಂತ್, ವಿಜಯಕಾಂತ್ ಸಿನಿಮಾಗಳಲ್ಲಿ ಹೀರೋಯಿನ್ ಆಗಿ ನಟಿಸಿದರು.

ಮಲಯಾಳಂನಲ್ಲಿ ಮೋಹನ್ ಲಾಲ್, ಮಮ್ಮುಟ್ಟಿ, ಕನ್ನಡದಲ್ಲಿ ವಿಷ್ಣುವರ್ಧನ್, ರಾಜಕುಮಾರ್, ತೆಲುಗಿನಲ್ಲಿ ಚಿರಂಜೀವಿ, ಬಾಲಕೃಷ್ಣ, ಜಗಪತಿ ಬಾಬು ಅವರಂತಹ ದೊಡ್ಡ ನಟರ ಜೊತೆ ನಟಿಸಿದರು. ಹಿಂದಿಯಲ್ಲಿ ಒಂದು ಸಿನಿಮಾದಲ್ಲಿ ನಟಿಸಿದ ಊರ್ವಶಿ ಅದರ ನಂತರ ಪೋಷಕ ನಟಿಯಾಗಿ ಬದಲಾದರು.

ಯುವ ನಟರಿಗೆ ಅತ್ತಿಗೆ, ಅಕ್ಕ, ಅಮ್ಮನ ಪಾತ್ರಗಳಲ್ಲಿ ನಟಿಸಲು ಪ್ರಾರಂಭಿಸಿದರು. ಬಹಳ ಕಡಿಮೆ ಸಮಯದಲ್ಲಿ ನಾಯಕಿಯಾಗಿಯೂ ಹಾಗೂ ಪೋಷಕ ನಟಿಯಾಗಿಯೂ ಬೆಳೆದ ಊರ್ವಶಿ, ತಮ್ಮ ಜೀವನದ ಉತ್ತುಂಗದಲ್ಲಿ ಅನೇಕ ಸಮಸ್ಯೆಗಳನ್ನು ಎದುರಿಸಿದರು. ವೈಯಕ್ತಿಕ ಸಮಸ್ಯೆಗಳಿಂದ ಕುಡಿತಕ್ಕೆ ದಾಸರಾಗಿ ಸಿನಿಮಾ ಜೀವನವನ್ನು ಹಾಳು ಮಾಡಿಕೊಂಡರು. ಮುಖ್ಯವಾಗಿ ಅವರ ಮದುವೆ ಜೀವನದಲ್ಲಿ ಅನೇಕ ಸಮಸ್ಯೆಗಳು ಅವರನ್ನು ಸುತ್ತಿಕೊಂಡವು. 2000ನೇ ಇಸವಿಯಲ್ಲಿ ಮನೋಜ್ ಕೆ ಜಯನ್ ಅವರನ್ನು ಊರ್ವಶಿ ಮದುವೆ ಮಾಡಿಕೊಂಡರು. ಮದುವೆಯ ನಂತರ ಗಂಡನಿಂದ ಅನೇಕ ಸಮಸ್ಯೆಗಳನ್ನು ಎದುರಿಸಿದರು ಎಂದು ಹೇಳಲಾಗುತ್ತದೆ. ಅದಕ್ಕೆ ವಿಚ್ಛೇದನ ಪಡೆದರು. ಆದರೆ ಈಗಾಗಲೇ ಅವರಿಗೆ ಒಬ್ಬಳು ಮಗಳಿದ್ದಾಳೆ. ನಂತರ 2016ರಲ್ಲಿ, ತಮ್ಮ 44ನೇ ವಯಸ್ಸಿನಲ್ಲಿ ಚೆನ್ನೈನ ಉದ್ಯಮಿ ಶಿವಪ್ರಸಾದ್ ಅವರನ್ನು ಎರಡನೇ ಮದುವೆ ಮಾಡಿಕೊಂಡರು ಊರ್ವಶಿ. ಈ ದಂಪತಿಗೆ ಇಹಾನ್ ಪ್ರಜಾಪತಿ ಎಂಬ ಮಗನೂ ಇದ್ದಾನೆ. ಎರಡನೇ ಮದುವೆಯ ನಂತರ ಅವರ ಜೀವನ ಈಗ ಸಂತೋಷವಾಗಿದೆ.

# ರಿಲೀಸ್‌ಗೂ ಮೊದಲೇ ಹೊಸ ದಾಖಲೆ ಬರೆದ ಟಾಕ್ಸಿಕ್ ಸಿನಿಮಾ

ಯಶ್ ನಟನೆಯ 'ಟಾಕ್ಸಿಕ್' ಸಿನಿಮಾದ ಕೆಲಸಗಳು ಭರದಿಂದ ಸಾಗುತ್ತಿವೆ. ಈ ಚಿತ್ರದ ಬಗ್ಗೆ ಅಭಿಮಾನಿಗಳು ಸಾಕಷ್ಟು ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಈ ಸಿನಿಮಾ ಈಗ ಹೊಸ ದಾಖಲೆ ಬರೆದಿದೆ. ಶೂಟಿಂಗ್ ಸಂದರ್ಭದಲ್ಲೇ ಈ ದಾಖಲೆ 'ಟಾಕ್ಸಿಕ್' ಚಿತ್ರದ ಪಾಲಾಗಿದೆ. ಈ ಬಗ್ಗೆ ಚಿತ್ರತಂಡ ಹೆಮ್ಮೆಯಿಂದ ಹೇಳಿಕೊಂಡಿದೆ. ಅಷ್ಟಕ್ಕೂ ಈ ಸಿನಿಮಾ ಮಾಡಿರುವ ದಾಖಲೆ ಏನು? ಆ ಬಗ್ಗೆ ಇಲ್ಲಿದೆ ವಿವರ.



'ಟಾಕ್ಸಿಕ್' ಸಿನಿಮಾದಲ್ಲಿ ಯಶ್ ಮುಖ್ಯ ಪಾತ್ರದಲ್ಲಿ ನಟಿಸುತ್ತಾ ಇದ್ದಾರೆ. ನಯನತಾರಾ, ಕಿಯಾರಾ ಅಡ್ವಾಣಿ ಮೊದಲಾದವರು ಚಿತ್ರದಲ್ಲಿ ನಟಿಸುತ್ತಿದ್ದಾರೆ. ಮಲಯಾಳಂನ ಗೀತು ಮೋಹನ್‌ದಾಸ್ ಅವರು ಈ ಚಿತ್ರವನ್ನು ನಿರ್ದೇಶನ ಮಾಡುತ್ತಿದ್ದಾರೆ. ಪಕ್ಕಾ ಮಾಸ್ ಶೈಲಿಯಲ್ಲಿ ಮೂಡಿಬರುತ್ತಿರುವ ಈ ಚಿತ್ರ ಇಂಗ್ಲಿಷ್ ಹಾಗೂ ಕನ್ನಡದಲ್ಲಿ ಒಟ್ಟಿಗೆ ಶೂಟ್ ಆಗುತ್ತಿದೆ. ಈ ರೀತಿ ಆಗುತ್ತಿರುವುದು ಕನ್ನಡ ಇತಿಹಾಸದಲ್ಲಿ ಇದೇ ಮೊದಲು.

ಸಾಮಾನ್ಯವಾಗಿ ಸಿನಿಮಾನ ಮೊದಲು ಮೂಲ ಭಾಷೆಯಲ್ಲಿ ಶೂಟ್ ಮಾಡಿ ಉಳಿದ ಭಾಷೆಗೆ ಡಬ್ ಮಾಡಿ ರಿಲೀಸ್ ಮಾಡಲಾಗುತ್ತದೆ. ಕೆಲವೊಮ್ಮೆ ಎರಡು ಭಾಷೆಗಳಲ್ಲಿ ಸಿನಿಮಾಗಳು ಒಟ್ಟಿಗೆ ಶೂಟ್ ಆದ ಉದಾಹರಣೆ ಇದೆ. ಆದರೆ, ಕನ್ನಡ ಹಾಗೂ ಇಂಗ್ಲಿಷ್‌ನಲ್ಲಿ ಒಟ್ಟಿಗೆ ಸಿನಿಮಾ ಶೂಟ್ ಈವರೆಗೆ ಆಗಿಲ್ಲ ಎಂದು 'ಟಾಕ್ಸಿಕ್' ತಂಡ ಹೇಳಿಕೊಂಡ ಬಗ್ಗೆ ವರದಿ ಆಗಿದೆ.


'ಟಾಕ್ಸಿಕ್' ತಂಡ ಈಗ ಕನ್ನಡ ಹಾಗೂ ಇಂಗ್ಲಿಷ್‌ನಲ್ಲಿ ಒಟ್ಟಿಗೆ ಸಿನಿಮಾ ಶೂಟ್ ಮಾಡಿ ಹೊಸ ದಾಖಲೆ ಬರೆದಿದೆ. ಈ ಮೂಲಕ ಅಪರೂಪದ ದಾಖಲೆಯನ್ನು ತನ್ನದಾಗಿಸಿಕೊಂಡಿದೆ. ಈ ಚಿತ್ರ ಪ್ಯಾನ್ ವರ್ಲ್ಡ್ ಮಟ್ಟದಲ್ಲಿ ರಿಲೀಸ್ ಆಗಲಿದೆ.

'ಟಾಕ್ಸಿಕ್' ಸಿನಿಮಾದ ಪಾತ್ರವರ್ಗ ದೊಡ್ಡದಿರುವುದರಿಂದ ಸಹಜವಾಗಿ ನಿರೀಕ್ಷೆ ಹೆಚ್ಚಿದೆ. 'ಕೆಜಿಎಫ್ 2' ಬಳಿಕ ಯಶ್ ನಟಿಸುತ್ತಿರುವ ಸಿನಿಮಾ ಇದು ಎಂಬ ಕಾರಣದಿಂದಲೂ ಈ ಚಿತ್ರದ ಬಗ್ಗೆ ನಿರೀಕ್ಷೆ ಇದೆ. ಎಲ್ಲವೂ ಅಂದುಕೊಂಡಂತೆ ನಡೆದರೆ 'ಟಾಕ್ಸಿಕ್' ಸಿನಿಮಾ ಏಪ್ರಿಲ್‌ನಲ್ಲಿ ಬಿಡುಗಡೆ ಆಗಬೇಕಿತ್ತು. ಆದರೆ, ಚಿತ್ರದ ರಿಲೀಸ್ ಡಿಸೆಂಬರ್‌ಗೆ ಮುಂದೂಡಲ್ಪಟಿದ್ದೆಯಂತೆ. ಕ್ರಿಸ್‌ಮಸ್ ಸಂದರ್ಭದಲ್ಲಿ ಚಿತ್ರ ತೆರೆಗೆ ಬರಲಿದೆ.

# ಈ ಡ್ರೆಸ್ ಬೆಲೆ 2.45 ಲಕ್ಷ ರೂ.

ಸೆಲೆಬ್ರಿಟಿಗಳ ಜೀವನ ಸಖತ್ ಐಷಾರಾಮಿ ಆಗಿರುತ್ತದೆ. ಅವರು ಧರಿಸುವ ಬಟ್ಟೆಗಳ ಬೆಲೆ ಕೇಳಿದರೆ ಖಂಡಿತಾ ಶಾಕ್ ಆಗುತ್ತದೆ. ಬಹುತೇಕ ನಟ-ನಟಿಯರು ಒಮ್ಮೆ ಧರಿಸಿದ ಬಟ್ಟೆಯನ್ನು ಮತ್ತೊಮ್ಮೆ ಧರಿಸುವುದಿಲ್ಲ. ಹಾಗಿದ್ದರೂ ಕೂಡ ಅವರು ಪ್ರತಿ ಉಡುಗೆಗೆ ಲಕ್ಷಾಂತರ ರೂಪಾಯಿ ಖರ್ಚು ಮಾಡುತ್ತಾರೆ. ಅದಕ್ಕೆ ಲೇಟೆಸ್ಟ್ ಉದಾಹರಣೆ ಎಂದರೆ ಕೀರ್ತಿ ಸುರೇಶ್ ಧರಿಸಿದ ಈ ಗೌನ್.

ಹೌದು, ಹಸಿರು ಬಣ್ಣದ ಈ ಗೌನ್ ಬೆಲೆ ಬರೋಬ್ಬರಿ 2.45 ಲಕ್ಷ ರೂಪಾಯಿ!



ಸದ್ಯ ಸೋಶಿಯಲ್ ಮೀಡಿಯಾದಲ್ಲಿ ಈ ಫೋಟೋಗಳು ವೈರಲ್ ಆಗಿವೆ. ಬೆಲೆ ಕೇಳಿ ನೆಟ್ಟಿಗರು ಹೌಹಾರಿದ್ದಾರೆ.

ಕೀರ್ತಿ ಸುರೇಶ್ ಅವರಿಗೆ ಸಖತ್ ಬೇಡಿಕೆ ಇದೆ. ಇತ್ತೀಚೆಗೆ ಅವರ ಮದುವೆ ನೆರವೇರಿತು. ಸಿನಿಮಾ ಕೆಲಸಗಳ ಬಿಡುವಿನಲ್ಲಿ ಅವರು ಪತಿ ಆ್ಯಂಟೋನಿ ತಟ್ಟಿಲ್ ಜೊತೆ ಪಾರ್ಟಿ ಮಾಡಿದ್ದಾರೆ. ಗೋವಾದಲ್ಲಿ ಈ ಪಾರ್ಟಿ ನಡೆದಿದ್ದು, ಈ ವೇಳೆ ಕೀರ್ತಿ ಸುರೇಶ್ ಧರಿಸಿದ ಗೌನ್ ಕಣ್ಮನ ಸೆಳೆಯುತ್ತಿದೆ. ರೋಹಿತ್ ಗಾಂಧಿ ಮತ್ತು ರಾಹುಲ್ ಖನ್ನಾ ಅವರು ಮಿರಿ ಮಿರಿ ಮಿಂಚುವ ಈ ಗೌನ್ ವಿನ್ಯಾಸಗೊಳಿಸಿದ್ದಾರೆ. ಅದ್ದೂರಿಯಾಗಿ ನಡೆದ ಪಾರ್ಟಿಯ ಫೋಟೋಗಳನ್ನು ಕೀರ್ತಿ ಸುರೇಶ್ ಅವರು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಪತಿಯ ಜೊತೆ ಅವರು ಬಿಂದಾಸ್ ಆಗಿ ಡ್ಯಾನ್ಸ್ ಮಾಡಿದ್ದಾರೆ. ಸೋಶಿಯಲ್ ಮೀಡಿಯಾ ಬಳಕೆಯಲ್ಲಿ ಕೀರ್ತಿ ಸುರೇಶ್ ತುಂಬ ಆ್ಯಕ್ಟೀವ್ ಆಗುತ್ತಾರೆ. ಅಭಿಮಾನಿಗಳಿಗಾಗಿ ಅವರು ಹೊಸ ಹೊಸ ಫೋಟೋಗಳನ್ನು ಹಂಚಿಕೊಳ್ಳುತ್ತಾ ಇರುತ್ತಾರೆ.

ಬಹುಬೇಡಿಕೆಯ ನಟಿಯಾಗಿ ಗುರುತಿಸಿಕೊಂಡಿರುವ ಕೀರ್ತಿ ಸುರೇಶ್ ಅವರು ಬಾಲಿವುಡ್‌ನಲ್ಲೂ ಸಿನಿಮಾಗಳನ್ನು ಮಾಡುತ್ತಿದ್ದಾರೆ. ರಾಷ್ಟ್ರ ಪ್ರಶಸ್ತಿ ಪಡೆದಿರುವ ಅವರ ಪ್ರತಿಭೆ ಬಗ್ಗೆ ಎರಡು ಮಾತಿಲ್ಲ. ಅದಕ್ಕೆ ತಕ್ಕಂತೆ ಅವರು ಕೈ ತುಂಬ ಸಂಭಾವನೆ ಪಡೆಯುತ್ತಾರೆ. ವರದಿಗಳ ಪ್ರಕಾರ, ಅವರ ಒಟ್ಟು ಆಸ್ತಿ 41 ಕೋಟಿ ರೂಪಾಯಿ. ಕೀರ್ತಿ ಸುರೇಶ್ ಪತಿ ಆ್ಯಂಟೋನಿ ತಟ್ಟಿಲ್ ಉದ್ಯಮಿ ಆಗಿದ್ದು ಅವರು ಅಂದಾಜು 150 ಕೋಟಿ ರೂಪಾಯಿ ಆಸ್ತಿ ಹೊಂದಿದ್ದಾರೆ ಎನ್ನಲಾಗಿದೆ. ಅದಕ್ಕೆ ತಕ್ಕಂತೆ ಈ ದಂಪತಿಯ ಲೈಫ್ ಸ್ಟೈಲ್ ಇದೆ. ಲಕ್ಷಾಂತರ ರೂ.ಬೆಲೆ ಬಾಳುವ ಡ್ರೆಸ್ ಧರಿಸಿ ಅವರು ಮಿಂಚುತ್ತಿದ್ದಾರೆ.

# ಕೃಷ್ಣಂರಾಜುಗೆ ಬಿಸಿನೆಸ್ ಮ್ಯಾನ್ ಸಿನಿಮಾ ಇಷ್ಟ

ರೆಬೆಲ್ ಸ್ಟಾರ್ ಕೃಷ್ಣಂರಾಜು ತಮ್ಮ ವೃತ್ತಿ ಜೀವನದಲ್ಲಿ ಬಹಳ ವಿಭಿನ್ನ ಚಿತ್ರಗಳಲ್ಲಿ ನಟಿಸಿದ್ದಾರೆ. ಬೆಳ್ಳಿ ತೆರೆಯ ಮೇಲೆ ರೆಬೆಲ್ ಆಟಿಟ್ಯೂಡ್ ತೋರಿಸಿ ಅಭಿಮಾನಿಗಳ ಹೃದಯದಲ್ಲಿ ರೆಬೆಲ್ ಸ್ಟಾರ್ ಆಗಿ ಉಳಿದಿದ್ದಾರೆ. ಕೃಷ್ಣಂರಾಜು ವೃತ್ತಿ ಜೀವನದಲ್ಲಿ ಕೃಷ್ಣವೇಣಿ, ಅಮರ ದೀಪಂ, ಭಕ್ತ ಕಣ್ಣಪ್ಪ, ಮನವೂರಿ ಪಾಂಡವುಲು ಚಿತ್ರಗಳು ಸೂಪರ್ ಹಿಟ್ ಆಗಿವೆ. ಕೃಷ್ಣಂರಾಜು ಅನೇಕ ಮಲ್ಟಿಸ್ಟಾರರ್ ಚಿತ್ರಗಳಲ್ಲಿ ಕೂಡ ನಟಿಸಿದ್ದಾರೆ.



ಟೀಸರ್ ಮತ್ತು ಟ್ರೇಲರ್ ಕುರಿತು ಹೆಚ್ಚಿನ ಮಾಹಿತಿ ಶೀಘ್ರದಲ್ಲೇ ಬಿಡುಗಡೆಯಾಗುವ ನಿರೀಕ್ಷೆಯಿದೆ.

ಸೂಪರ್ ಸ್ಟಾರ್ ಕೃಷ್ಣ ಜೊತೆ ಅನೇಕ ಚಿತ್ರಗಳಲ್ಲಿ ನಟಿಸಿದ್ದಾರೆ. ವಿಶೇಷವಾಗಿ ಕೃಷ್ಣ ಕುಟುಂಬದೊಂದಿಗೆ ಕೃಷ್ಣಂರಾಜುಗೆ ವಿಶೇಷ ಬಾಂಧವ್ಯವಿದೆ. ತಮ್ಮ ಉತ್ತರಾಧಿಕಾರಿಯಾಗಿ ಪ್ರಭಾಸ್ ಅವರನ್ನು ಕೃಷ್ಣಂರಾಜು ಇಂಡಸ್ಟ್ರಿಗೆ ಪರಿಚಯಿಸಿದರು. ಪ್ರಸ್ತುತ ಪ್ರಭಾಸ್ ಇಂಡಿಯಾದಲ್ಲಿ ಟಾಪ್ ಹೀರೋ ಆಗಿ ಮುನ್ನುಗ್ಗುತ್ತಿದ್ದಾರೆ. ಕೃಷ್ಣಂರಾಜು ಹೊಸ ತಲೆಮಾರಿನ ಹೀರೋಗಳ ಸಿನಿಮಾಗಳನ್ನು ಕೂಡ ನೋಡುತ್ತಿದ್ದರು.

ಮಹೇಶ್ ಬಾಬು ಬಗ್ಗೆ ಒಂದು ಸಂದರ್ಶನದಲ್ಲಿ ಮಾತನಾಡುತ್ತಾ, ಮಹೇಶ್ ಚಿತ್ರಗಳಲ್ಲಿ ತನಗೆ ಇಷ್ಟವಾದ ಸಿನಿಮಾ ಯಾವುದು ಎಂದು ಹೇಳಿದರು. ಮಹೇಶ್ ಬಾಬು ಪೋಕಿರಿ, ಮುರಾರಿ, ಒಕ್ಕಡು ರೀತಿಯ ಅದ್ಭುತ ಚಿತ್ರಗಳಲ್ಲಿ ನಟಿಸಿದ್ದಾರೆ. ಆದರೆ ಕೃಷ್ಣಂರಾಜುಗೆ ಬಿಸಿನೆಸ್ ಮ್ಯಾನ್ ಸಿನಿಮಾ ಅಂದ್ರೆ ಬಹಳ ಇಷ್ಟವಂತೆ. ಅದು ನಿರ್ದೇಶಕ ಸಮಾಜದ ಮೇಲಿನ ತನ್ನ ಅಭಿಪ್ರಾಯವನ್ನು ರೆಬೆಲ್ ಆಗಿ ತೋರಿಸಿದ ಚಿತ್ರ. ಬಿಸಿನೆಸ್ ಮ್ಯಾನ್‌ನಲ್ಲಿ ಮಹೇಶ್ ಬಾಬು ನಟನೆ ಕೃಷ್ಣಂರಾಜುಗೆ ಬಹಳ ನ್ಯಾಚುರಲ್ ಆಗಿ ಅನಿಸಿತ್ತಂತೆ.

ಮಹೇಶ್ ಬಾಬು ಡೈಲಾಗ್ ಡೆಲಿವರಿ, ಪರ್ಫಾಮೆನ್ಸ್ ಒಂದು ಫ್ಲೋನಲ್ಲಿ ಸಾಗಿ ಹೋಗುತ್ತದೆ. ಸಿನಿಮಾ ಬಹಳ ಚೆನ್ನಾಗಿ ಇಷ್ಟವಾಯಿತು ಎಂದು ಕೃಷ್ಣಂರಾಜು ಹೇಳಿದರು. ಜೊತೆಗೆ ಅದು ಕಂಪ್ಲೀಟ್ ಹೀರೋಯಿಸಂ ಬೇಸ್ಡ್ ಮೂವಿ ಎಂದು ಹೇಳಿದರು.

ಬಿಸಿನೆಸ್ ಮ್ಯಾನ್ ಚಿತ್ರ ಒಳ್ಳೆಯ ಹಿಟ್ ಆಯಿತು. ಆದರೆ ಆ ಚಿತ್ರಕ್ಕೆ ಫ್ಯಾಮಿಲಿ ಆಡಿಯನ್ಸ್‌ಗಿಂತ ಮಾಸ್, ರೆಬೆಲ್ ಚಿತ್ರಗಳನ್ನು ಇಷ್ಟಪಡುವ ಆಡಿಯನ್ಸ್ ಚೆನ್ನಾಗಿ ಕನೆಕ್ಟ್ ಆದರು. ಇನ್ನು ಬಿಸಿನೆಸ್ ಮ್ಯಾನ್ ಚಿತ್ರದಲ್ಲಿ ಮಹೇಶ್ ಬಾಬು ಪಾತ್ರ ನೆಗೆಟಿವ್ ಆಟಿಟ್ಯೂಡ್‌ನಿಂದ ಕೂಡಿರುತ್ತದೆ. ಮುಂಬೈ ಮಾಫಿಯಾ ಹಿನ್ನೆಲೆಯಲ್ಲಿ ಪೂರಿ ಈ ಚಿತ್ರವನ್ನು ರೂಪಿಸಿದ್ದಾರೆ. ಕಾಜಲ್ ಅಗರ್ವಾಲ್ ನಾಯಕಿಯಾಗಿ ನಟಿಸಿದ್ದಾರೆ.



# ಕಿಸ್ಸಿಂಗ್ ಸೀನ್‌ಗಳಲ್ಲಿ ನಟಿಸೋಕೆ ಇಷ್ಟ

ಟಾಲಿವುಡ್‌ನಲ್ಲಿ ಗ್ಲಾಮರ್, ನಟನೆಯಿಂದ ಗುರುತಿಸಿಕೊಂಡಿರುವ ನಟಿಯರಲ್ಲಿ ರಿತು ವರ್ಮಾ ಒಬ್ಬರು. ಗ್ಲಾಮರ್‌ಗಿಂತ ರೀತು ವರ್ಮಾ ನಟನೆ, ಆಯ್ಕೆ ಮಾಡಿಕೊಳ್ಳುವ ಪಾತ್ರಗಳಿಂದಲೇ ಹೆಚ್ಚು ಫೇಮಸ್ ಆದರು. ಅವರಿಗೆ ಸಕ್ಸಸ್ ಕಡಿಮೆ ಇದೆ. ಆದರೆ ಆಯ್ಕೆ ಮಾಡಿಕೊಳ್ಳುವ ಪ್ರತಿ ಚಿತ್ರವು ವಿಶೇಷವಾಗಿ ನಿಲ್ಲುತ್ತದೆ. 'ಪೆಳ್ಳಿ ಚೂಪಲು' ಚಿತ್ರದ ಮೂಲಕ ರಿತು ವರ್ಮಾ ಗುರುತಿಸಿಕೊಂಡರು.

ರಿತು ವರ್ಮಾ 'ಒಕೆ ಒಕ ಜೀವಿತಂ', 'ವರುಡು ಕಾವಲೇನು', 'ಸ್ವಾಗ್', 'ಮಾರ್ಕ್ ಆಂಟೋನಿ' ರೀತಿಯ ವಿಭಿನ್ನ ಚಿತ್ರಗಳಲ್ಲಿ ನಟಿಸಿದ್ದಾರೆ. ಇತ್ತೀಚೆಗೆ ಅವರು ಸಂದೀಪ್ ಕಿಶನ್ ಜೊತೆಯಾಗಿ ನಟಿಸುತ್ತಿರುವ 'ಮಜಾಕಾ' ಸಿನಿಮಾ ಶಿವರಾತ್ರಿಗೆ ರಿಲೀಸ್ ಆಗಲಿದೆ. ಈ ಹಿನ್ನೆಲೆಯಲ್ಲಿ ರಿತು ವರ್ಮಾ ಪ್ರಚಾರ ಕಾರ್ಯಕ್ರಮಗಳಲ್ಲಿ ಬ್ಯುಸಿಯಾಗಿದ್ದಾರೆ.

ರಿತು ವರ್ಮಾ ಗ್ಲಾಮರ್ ಶೋ ವಿಚಾರದಲ್ಲಿ ಸ್ವಲ್ಪ ಹಿಂದೇಟು ಹಾಕುತ್ತಿದ್ದಾರೆ. ಗ್ಲಾಮರ್ ಶೋ ಇರುವ ಚಿತ್ರಗಳು, ರೊಮ್ಯಾಂಟಿಕ್ ಸೀನ್‌ಗಳು, ಕಿಸ್ಸಿಂಗ್ ಸೀನ್‌ಗಳು ಇರುವ ಚಿತ್ರಗಳಿಗೆ ರೀತು ವರ್ಮಾ ದೂರ ಉಳಿಯುತ್ತಿದ್ದಾರೆ. ಇದರ ಬಗ್ಗೆ ಇತ್ತೀಚೆಗೆ ರಿತು ವರ್ಮಾ ಅವರಿಗೆ ಪ್ರಶ್ನೆ ಎದುರಾಯಿತು.

ಕಿಸ್ಸಿಂಗ್ ಸೀನ್‌ಗಳಲ್ಲಿ ನಟಿಸಲು ನನಗೆ ಯಾವುದೇ ಅಭ್ಯಂತರವಿಲ್ಲ. ನನ್ನನ್ನು ನೋಡಿ ಆ ಹುಡುಗಿ ಕಿಸ್ಸಿಂಗ್ ಸೀನ್ ಮಾಡಲ್ಲ ಅಂತ ಫಿಕ್ಸ್ ಆದಂತಿದ್ದಾರೆ. ಅದಕ್ಕೆ ನನಗೆ ಈವರೆಗೆ ಆಫರ್ ಬಂದಿಲ್ಲ. ಸನ್ನಿವೇಶಕ್ಕೆ ತಕ್ಕಂತೆ ಅಂತಹ ಸೀನ್‌ನಲ್ಲಿ ನಟಿಸಬೇಕಾಗಿ ಬಂದರೆ ಖಂಡಿತಾ ನಟಿಸುತ್ತೇನೆ. ಆಫರ್ ಬರದೇ ಇರುವುದರಿಂದ ಇಷ್ಟು ದಿನ ತಡವಾಯಿತು ಎಂದು ರಿತು ವರ್ಮಾ ಹೇಳಿದ್ದಾರೆ.

# ಪಾಕಿಸ್ತಾನ್ ಆಟಗಾರರನ್ನು ಕೋತಿಗಳಿಗೆ ಹೋಲಿಸಿದ ವಾಸಿಂ ಅಕ್ರಮ್

ಚಾಂಪಿಯನ್ಸ್ ಟ್ರೋಫಿ ಪಂದ್ಯದಲ್ಲಿ ಸೋತು ಸುಣ್ಣವಾಗಿರುವ ಪಾಕಿಸ್ತಾನ್ ವಿರುದ್ಧ ಪಾಕ್ ತಂಡದ ಮಾಜಿ ನಾಯಕ ವಾಸಿಂ ಅಕ್ರಮ್ ನಾಲಿಗೆ ಹರಿಬಿಟ್ಟಿದ್ದಾರೆ. ಟೀಮ್ ಇಂಡಿಯಾ ವಿರುದ್ಧದ ಪಂದ್ಯದಲ್ಲಿ ಹೀನಾಯ ಸೋಲಿನ ಬಳಿಕ ಚಾನೆಲ್ ಚರ್ಚೆಯಲ್ಲಿ ಕಾಣಿಸಿಕೊಂಡ ಅಕ್ರಮ್, ಪಾಕಿಸ್ತಾನ್ ಆಟಗಾರರನ್ನು ಕೋತಿಗಳಿಗೆ ಹೋಲಿಸಿದ್ದಾರೆ. ದುಬೈ ಇಂಟರ್‌ನ್ಯಾಷನಲ್ ಮೈದಾನದಲ್ಲಿ ನಡೆದ ಈ ಪಂದ್ಯದ ದ್ವಿತೀಯ ಇನಿಂಗ್ಸ್ ವೇಳೆ ಪಾಕಿಸ್ತಾನ್ ಆಟಗಾರರು ಬಾಳೆಹಣ್ಣು ತಿಂದಿದ್ದರು. ಟೀಮ್ ಇಂಡಿಯಾ ಬ್ಯಾಟಿಂಗ್ ವೇಳೆಯ ಪಾನೀಯ ವಿರಾಮದ ವೇಳೆ ಪಾಕ್ ಆಟಗಾರರಿಗೆ ದೊಡ್ಡ ತಟ್ಟೆಯಲ್ಲಿ ಬಾಳೆಹಣ್ಣುಗಳು ಮೈದಾನಕ್ಕೆ ಬಂದಿದ್ದವು. ಹೀಗೆ ಪಂದ್ಯದ ನಡುವೆ ಬಾಳೆಹಣ್ಣು ತಿಂದು ಹೊಟ್ಟೆ ತುಂಬಿಸಿಕೊಂಡ ಆಟಗಾರರ ನಡೆಯನ್ನು ವಿಮರ್ಶಿಸಿದ ವಾಸಿಂ ಅಕ್ರಮ್, ಮಂಗಗಳು ಕೂಡ ಇಷ್ಟೊಂದು ಬಾಳೆಹಣ್ಣುಗಳನ್ನು ತಿನ್ನುವುದಿಲ್ಲ. ನಮ್ಮ ಆಟಗಾರರು ಮೊದಲ ಪಾನೀಯ ಬ್ರೇಕ್ ಹಾಗೂ ಎರಡನೇ ಪಾನೀಯ ಬ್ರೇಕ್ ವೇಳೆ ಅಷ್ಟೊಂದು ಬಾಳೆ ಹಣ್ಣುಗಳನ್ನು ತಿಂದಿದ್ದಾರೆ. ನಮ್ಮ ಕಾಲದಲ್ಲಿ ಪಾಕಿಸ್ತಾನ್ ತಂಡದ ಮಾಜಿ ನಾಯಕ ಇಮ್ರಾನ್ ಖಾನ್ ಅವರು ಆಟಗಾರರು ಇಷ್ಟೊಂದು ಬಾಳೆಹಣ್ಣು ತಿನ್ನುವುದನ್ನು ನೋಡಿದ್ದರೆ, ಅಲ್ಲಿಯೇ ಅವನಿಗೆ ಪಾಠ ಕಲಿಸುತ್ತಿದ್ದರು ಎಂದು ಅಕ್ರಮ್ ಇದೇ ವೇಳೆ ಹೇಳಿದರು.

ಅಲ್ಲದೆ ಪಂದ್ಯ ನಡೆಯುವಾಗ ಆಟಗಾರರು ಇಷ್ಟೊಂದು ಬಾಳೆಹಣ್ಣುಗಳನ್ನು ತಿನ್ನುವ ಅವಶ್ಯಕತೆಯಿತ್ತಾ? ಎರಡು ಪಾನೀಯ ವಿರಾಮದ ವೇಳೆಯೂ ಪಾಕ್ ಆಟಗಾರರು ಕೋತಿಗಳಂತೆ ಬಾಳೆಹಣ್ಣು ತಿನ್ನುವತ್ತ ಗಮನಹರಿಸಿದ್ದರು ಎಂದು ವಾಸಿಂ ಅಕ್ರಮ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ವಾಸಿಂ ಅಕ್ರಮ್ ಅವರ ಈ ಹೇಳಿಕೆಯು ಇದೀಗ ಪರ-ವಿರೋಧ ಚರ್ಚೆಗೆ ಕಾರಣವಾಗಿದೆ. ಪಾಕ್ ಆಟಗಾರರನ್ನು ಪರೋಕ್ಷವಾಗಿ ಕೋತಿಗಳಿಗೆ ಹೋಲಿಸಿರುವ ಅಕ್ರಮ್ ಅವರ ನಡೆಯನ್ನು ಅನೇಕರು ಜನಾಂಗೀಯ ನಿಂದನೆ ಎಂದು ಆರೋಪಿಸಿದ್ದಾರೆ. ಅಲ್ಲದೆ ವಾಸಿಂ ಅಕ್ರಮ್ ಈ ಬಗ್ಗೆ ಕ್ಷಮಾಪಣೆ ಕೇಳಬೇಕೆಂದು ಕೆಲವರು ಸೋಷಿಯಲ್ ಮೀಡಿಯಾದಲ್ಲಿ ಆಗ್ರಹಿಸಿದ್ದಾರೆ.

ಪ್ರಕಾಶಕ- ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: **944807487**